## ಸನ್ಮಾನ್ಯ ಸಭಾಧ್ಯಕ್ಷರೆ,

1. ಸ್ವಾತಂತ್ರ್ಯದ ಅಮೃತ ಮಹೋತ್ಸವ ವರ್ಷಾಚರಣೆಯ ಸುಸಂದರ್ಭದಲ್ಲಿ 2022-23ನೇ ಸಾಲಿನ ಆಯವ್ಯಯವನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

2. ಕರ್ನಾಟಕ ರಾಜ್ಯ ತನ್ನ ನೈಸರ್ಗಿಕ ಸಂಪನ್ಮೂಲ, ಜ್ಞಾನಾಧಾರಿತ ಉದ್ಯಮಗಳು, ವೈವಿಧ್ಯಮಯ ಕೃಷಿ ಹವಾಮಾನ ವಲಯಗಳು, ಶ್ರೀಮಂತ ಸಂಸ್ಕೃತಿ, ಪರಂಪರೆಯಿಂದಾಗಿ ದೇಶದ ಅಭಿವೃದ್ಧಿಯ ನಕ್ಷೆಯಲ್ಲಿ ಪ್ರಮುಖ ಸ್ಥಾನ ಪಡೆದಿದೆ. ತಲತಲಾಂತರಗಳಿಂದ ಬಳುವಳಿಯಾಗಿ ಪಡೆದ ಈ ಸಂಪನ್ಮೂಲಗಳ ಸದ್ಬಳಕೆ ಮಾಡಿಕೊಂಡು ರಾಜ್ಯದ ಸಮತೋಲಿತ, ಸರ್ವಾಂಗೀಣ ಅಭಿವೃದ್ಧಿಯೊಂದಿಗೆ ಜನಸಾಮಾನ್ಯರು ನೆಮ್ಮದಿಯ ಬದುಕು ನಡೆಸುವ ವಾತಾವರಣ ನಿರ್ಮಿಸುವುದು ನಮ್ಮ ಆದ್ಯತೆಯಾಗಿದೆ.

3. 2018ರಲ್ಲಿ ಸ್ಪಷ್ಟ ಬಹುಮತ ಇರದ ಸಂದರ್ಭದಲ್ಲಿ ಅತಿ ಹೆಚ್ಚು ಸ್ಥಾನ ಪಡೆದ ಪಕ್ಷವನ್ನು ಹೊರತುಪಡಿಸಿ ಸಮ್ಮಿಶ್ರ ಸರ್ಕಾರ ರಚನೆಯ ಪ್ರಯೋಗ ಯಶಸ್ವಿಯಾಗಲಿಲ್ಲ. ತದನಂತರ ಸಾರ್ವಜನಿಕ ಉಪಚುನಾವಣೆಯಲ್ಲಿ ಬಹುಮತದ ಸಂಖ್ಯೆ ಪಡೆದು ಸರ್ಕಾರ ರಚನೆ ಆದ ಮೇಲೆ ಕೋವಿಡ್-19 ಮತ್ತು ಪ್ರವಾಹದ ನಡುವೆಯೂ ಸ್ಥಿರ ಮತ್ತು ದಕ್ಷ ಆಡಳಿತದಿಂದಾಗಿ ರಾಜ್ಯ ಪ್ರಗತಿಯತ್ತ ಮುನ್ನಡೆಯುತ್ತಿದೆ. ಸಕಾಲಿಕವಾಗಿ ಕೇಂದ್ರ ಸರ್ಕಾರದ ನೆರವು ಮತ್ತು ರಾಜ್ಯದಲ್ಲಿ ಸಮರ್ಥ ನಾಯಕತ್ವದಿಂದಾಗಿ ಯಶಸ್ವಿಯಾಗಿ ಕೋವಿಡ್ ನಿರ್ವಹಣೆ ಮಾಡಲು ಸಾಧ್ಯವಾಯಿತು. ಕೋವಿಡ್ ನಂತರದ ದಿನಗಳಲ್ಲಿ ನನ್ನ ಸರ್ಕಾರ ಆರ್ಥಿಕ ಪ್ರಗತಿಯನ್ನು ಸರಿ ದಾರಿಗೆ ತರಲು ಮಾಡಿದ ಎಲ್ಲಾ ಪ್ರಯತ್ನಗಳೂ

ಈಗ ಯಶ ಕಾಣುತ್ತಿದೆ. ಇದು 2021-22ರ ಆಯವ್ಯಯದಲ್ಲಿ ಸ್ಪಷ್ಟವಾಗಿದೆ. 2022-23ರ ಆಯವ್ಯಯದಲ್ಲಿ ಹೆಚ್ಚಿನ ಆರ್ಥಿಕ ಪ್ರಗತಿಯನ್ನು ಸಾಧಿಸಿ ವಿತ್ತೀಯ ಶಿಸ್ತನ್ನು ಕಾಪಾಡಿಕೊಂಡು ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ.

4. ಹಲವು ಸವಾಲುಗಳ ನಡುವೆಯೂ ಅಧಿಕಾರ ಸ್ವೀಕರಿಸಿದ ದಿನವೇ ರೈತರ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡುವ ರೈತ ವಿದ್ಯಾನಿಧಿ, ಸಾಮಾಜಿಕ ಭದ್ರತಾ ಯೋಜನೆಗಳಡಿ ಮಾಸಾಶನ ಹೆಚ್ಚಳದಂತಹ ನಿರ್ಧಾರಗಳೊಂದಿಗೆ ನಮ್ಮ ಜನಸ್ನೇಹಿ ನಡೆಯನ್ನು ಸ್ಪಷ್ಟ ಪಡಿಸಿದ್ದೇವೆ. ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ ಮಾರ್ಗದರ್ಶನದಲ್ಲಿ ಜನರು ನೆಮ್ಮದಿಯಿಂದ ಬದುಕುವ (ease of living) ವಾತಾವರಣ ಕಲ್ಪಿಸುವ ಮಹತ್ವಾಕಾಂಕ್ಷೆಯೊಂದಿಗೆ ಮುನ್ನಡೆಯುತ್ತಿದ್ದೇವೆ.

***"ಇರುವೆಲ್ಲವನು ಎಲ್ಲಾ ಜನಕೆ ತೆರವಾಗಿಸುವ***
***ಸಮಬಗೆಯ ಸಮಸುಖದ ಸಮದುಃಖದ***
***ಸಾಮರಸ್ಯದ ಸಾಮಗಾನಲಹರಿಯ ಮೇಲೆ***
***ತೇಲಿ ಬರಲಿದೆ ನೋಡು, ನಮ್ಮ ನಾಡು!"***

***-ಎಂ. ಗೋಪಾಲಕೃಷ್ಣ ಅಡಿಗ***

5. ಈ ಕವಿವಾಣಿಯಂತೆ ಸರ್ವ ವ್ಯಾಪಿ, ಸರ್ವ ಸ್ಪರ್ಶಿ ಅಭಿವೃದ್ಧಿ ದೃಷ್ಟಿಕೋನದೊಂದಿಗೆ ನಾವು ಕಾರ್ಯನಿರ್ವಹಿಸುತ್ತಿದ್ದೇವೆ. ರಾಜ್ಯದ ಆರ್ಥಿಕತೆಯಲ್ಲಿ ಎಲ್ಲಾ ಸ್ತರದ ಜನರ ಪಾಲು ಹಾಗೂ ಪಾಲುದಾರಿಕೆ ಹೆಚ್ಚಾಗಬೇಕೆಂಬುದು ನಮ್ಮ ಆಶಯ. ಇದಕ್ಕಾಗಿ

ದುರ್ಬಲ ವರ್ಗದವರ ಉನ್ನತಿಗೆ Employment, Education and Empowerment – 3 Es **(ಶಿಕ್ಷಣ, ಉದ್ಯೋಗ ಮತ್ತು ಸಬಲೀಕರಣದ)** ಮಂತ್ರವನ್ನು ಅಳವಡಿಸಿಕೊಂಡಿದ್ದೇವೆ.

6. ಮಹಿಳೆಯರು, ಹಿಂದುಳಿದ ವರ್ಗದವರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರು, ಆರ್ಥಿಕವಾಗಿ ದುರ್ಬಲ ವರ್ಗದವರು ಆರ್ಥಿಕ ಚಟುವಟಿಕೆಗಳಲ್ಲಿ ಹೆಚ್ಚು ತೊಡಗುವಂತೆ ಮಾಡಲು ಸರ್ಕಾರದ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ರೂಪಿಸಿ, ಜಾರಿಗೊಳಿಸುವ ಧ್ಯೇಯ ನಮ್ಮದಾಗಿದೆ. ಪ್ರಧಾನಮಂತ್ರಿಯವರ ಕನಸಿನಂತೆ ರೈತರ ಆದಾಯ ದ್ವಿಗುಣಗೊಳಿಸಲು ಸಹ ನಿಖರವಾದ ಉಪಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ.

7. ಕಳೆದ ಎರಡು ವರ್ಷಗಳಿಂದ ಜಗತ್ತಿನಾದ್ಯಂತ ಜನಜೀವನವನ್ನೇ ಬುಡಮೇಲು ಮಾಡಿರುವ ಕೋವಿಡ್-19 ಸಾಂಕ್ರಾಮಿಕದ ಕಪಿಮುಷ್ಠಿಯಲ್ಲಿ ಕರ್ನಾಟಕವೂ ಸಿಲುಕಿ ನಲುಗಿದೆ. ಇದರೊಂದಿಗೆ ಕಳೆದ ಕೆಲವು ವರ್ಷಗಳಿಂದ ಅತಿವೃಷ್ಟಿ, ಪ್ರವಾಹದಿಂದ ಅಪಾರ ನಷ್ಟವನ್ನು ಅನುಭವಿಸುವಂತಾಗಿದೆ. ದೇಶದ 130 ಕೋಟಿ ಜನರ ಜೀವ ರಕ್ಷಣೆಗಾಗಿ ಆರೋಗ್ಯ ವ್ಯವಸ್ಥೆಯನ್ನು ಉನ್ನತೀಕರಿಸಿ, ಚಿಕಿತ್ಸಾ ಸೌಲಭ್ಯ, ಔಷಧ ಹಾಗೂ ಲಸಿಕೆಗಳನ್ನು ಒದಗಿಸುವ ಮೂಲಕ ಕೋವಿಡ್-19 ನಿರ್ವಹಣೆಯ ಸವಾಲನ್ನು ಯಶಸ್ವಿಯಾಗಿ ನಿರ್ವಹಿಸಿದ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರು ನಿಜವಾದ ಜನನಾಯಕರೆನಿಸಿಕೊಂಡಿದ್ದಾರೆ. ಅವರ ನೇತೃತ್ವದಲ್ಲಿ ಹಿಂದಿನ ಮುಖ್ಯಮಂತ್ರಿ ಶ್ರೀ ಬಿ.ಎಸ್. ಯಡಿಯೂರಪ್ಪನವರ ಸರ್ಕಾರ ಹಾಗೂ ನಂತರ

ಅಧಿಕಾರಕ್ಕೆ ಬಂದ ನಮ್ಮ ಸರ್ಕಾರವೂ ಯಶಸ್ವಿಯಾಗಿ ಈ ಸವಾಲನ್ನು ಎದುರಿಸಿದೆ.

8. ಕೇಂದ್ರ ಸರ್ಕಾರ ಹಾಗೂ ತಜ್ಞರ ಮಾರ್ಗದರ್ಶನದಲ್ಲಿ ತಂತ್ರಜ್ಞಾನದ ಸದ್ಬಳಕೆಯೊಂದಿಗೆ ಮೂರನೇ ಅಲೆಯನ್ನು ಯಶಸ್ವಿಯಾಗಿ ನಿಭಾಯಿಸಿದ್ದೇವೆ. ಸೂಕ್ತ ಮುನ್ನೆಚ್ಚರಿಕೆ ಹಾಗೂ ಸಿದ್ಧತೆಯ ಮೂಲಕ ಎದುರಾದ ಸವಾಲುಗಳಿಗೆ ಕ್ಷಿಪ್ರವಾಗಿ ಸ್ಪಂದಿಸಿದ್ದೇವೆ. ರಾಜ್ಯದಲ್ಲಿ 10 ಕೋಟಿಗೂ ಹೆಚ್ಚು ಡೋಸ್ ಲಸಿಕೆ ನೀಡುವ ಮೂಲಕ ಜನರ ಸುರಕ್ಷೆಯನ್ನು ಖಾತರಿಪಡಿಸುವತ್ತ ಮುನ್ನಡೆದಿದ್ದೇವೆ. ಇದಕ್ಕಾಗಿ ಶ್ರಮಿಸಿದ ಎಲ್ಲಾ ಮುಂಚೂಣಿಯ ಕಾರ್ಯಕರ್ತರು, ಸರ್ಕಾರದ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿ, ಸ್ವಯಂ ಸೇವಾ ಸಂಸ್ಥೆಗಳು, ಸಹಕರಿಸಿದ ಎಲ್ಲಾ ಜನಪ್ರತಿನಿಧಿಗಳು ಹಾಗೂ ನಾಗರಿಕ ಬಂಧುಗಳಿಗೆ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ.

9. ಕೋವಿಡ್-19, ಪ್ರಕೃತಿ ವಿಕೋಪ ನಿರ್ವಹಣೆಯ ಸವಾಲನ್ನು ಎದುರಿಸುವ ಜೊತೆ ಜೊತೆಗೇ ಅಭಿವೃದ್ಧಿಯೂ ಹಳಿತಪ್ಪದಂತೆ ಸಮತೋಲನ ಕಾಪಾಡುವ ಜವಾಬ್ದಾರಿಯನ್ನು ನಮ್ಮ ಸರ್ಕಾರ ಅತ್ಯಂತ ಎಚ್ಚರಿಕೆಯಿಂದ, ಯಶಸ್ವಿಯಾಗಿ ನಿರ್ವಹಿಸಿದೆ. ನಮ್ಮ ಸರ್ಕಾರ ತನ್ನ ಸೇವೆಗಳು, ಯೋಜನೆಗಳ ಅನುಕೂಲವನ್ನು ಜನರ ಮನೆ ಬಾಗಿಲಿಗೆ ತಲುಪಿಸಲು ಮುಂದಾಗಿದ್ದು, ಜನರಿಂದ, ಜನರಿಗಾಗಿ, ಜನರಿಗೋಸ್ಕರ ಎಂಬ ಪ್ರಜಾಪ್ರಭುತ್ವದ ವ್ಯಾಖ್ಯಾನವನ್ನು ಅಕ್ಷರಶಃ ಪಾಲಿಸಲು ಪ್ರಯತ್ನಿಸುತ್ತಿದೆ. ನಮ್ಮ ಸರ್ಕಾರ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ, ಗ್ರಾಮೀಣ ಜನರಿಗೆ ತಮ್ಮ ಪಂಚಾಯಿತಿ ಹಂತದಲ್ಲಿಯೇ

ನಾಗರಿಕ ಸೇವೆಗಳನ್ನು ಒದಗಿಸುವ ಗ್ರಾಮ ಒನ್ ಯೋಜನೆಗಳನ್ನು ಜಾರಿಗೊಳಿಸಿದೆ. ತಂತ್ರಜ್ಞಾನ ಆಧಾರಿತ ಈ ಕಾರ್ಯಕ್ರಮಗಳು ಹೆಚ್ಚು ಪಾರದರ್ಶಕ ಹಾಗೂ ಜನಸ್ನೇಹಿಯಾಗಿವೆ. ಸರ್ಕಾರಿ ಕಛೇರಿಗಳಿಗೆ ಸಾರ್ವಜನಿಕರು ಅಲೆದಾಡುವುದನ್ನು ತಪ್ಪಿಸಿದೆ.

10. ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸಂದರ್ಭದಲ್ಲಿ ಜಾರಿಗೊಳಿಸಿದ ಯೋಜನೆಗಳು ಗ್ರಾಮೀಣ ಹಾಗೂ ನಗರ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿ, ರೈತರು, ಮಹಿಳೆಯರು, ಪರಿಶಿಷ್ಟ ಜಾತಿ, ಪಂಗಡದ ಹಾಗೂ ಹಿಂದುಳಿದ ವರ್ಗಗಳ ಜನತೆ ಸ್ವಾಭಿಮಾನದ ಬದುಕು ನಡೆಸಲು ಪೂರಕವಾದ ಕಾರ್ಯಕ್ರಮಗಳು. ಆರ್ಥಿಕ ಚಟುವಟಿಕೆಗಳಲ್ಲಿ ಅವರನ್ನು ತೊಡಗಿಸಿಕೊಳ್ಳುವ ಮೂಲಕ ಅವರನ್ನೂ ನಾಡಿನ ಅಭಿವೃದ್ಧಿಯ ಪಾಲುದಾರರನ್ನಾಗಿಸುವ ಅರ್ಥಪೂರ್ಣ ಕಾರ್ಯಕ್ರಮಗಳು.

11. **ರಾಜ್ಯದ ಅಭಿವೃದ್ಧಿಗೆ ನಮ್ಮ ಸರ್ಕಾರದ ಪಂಚಸೂತ್ರಗಳು ಇಂತಿವೆ.**

- ರಾಜ್ಯದಲ್ಲಿ ಎಲ್ಲಾರನ್ನೂ ಒಳಗೊಂಡ, ಸಮಗ್ರ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಯನ್ನು ಮಾಡುವುದು.
- ದುರ್ಬಲ ವರ್ಗದವರ ರಕ್ಷಣೆ ಹಾಗೂ ಏಳಿಗೆಗೆ ಒತ್ತು ನೀಡುವುದು, ಅವರನ್ನು ಪರಾವಲಂಬಿಗಳನ್ನಾಗಿ ಮಾಡದೆ, ಸ್ವಾಭಿಮಾನದ ಬದುಕು ನಡೆಸಲು ಶಿಕ್ಷಣ, ಉದ್ಯೋಗ ಮತ್ತು ಸಬಲೀಕರಣದ ಕಾರ್ಯಕ್ರಮಗಳನ್ನು ರೂಪಿಸುವುದು ಹಾಗೂ ಉತ್ತಮ ಆರೋಗ್ಯ ಸೇವೆಯನ್ನು ಒದಗಿಸುವುದು.
- ರಾಜ್ಯದ ಹಿಂದುಳಿದ ಪ್ರದೇಶಗಳನ್ನು ವೈಜ್ಞಾನಿಕವಾಗಿ ಗುರುತಿಸಿ, ವಿವಿಧ ವಲಯಗಳ ಅಭಿವೃದ್ಧಿಗೆ ಸಂಘಟಿತ

ಪ್ರಯತ್ನ ಮಾಡುವ ಮೂಲಕ, ಅಲ್ಲಿನ ಮಾನವ ಅಭಿವೃದ್ಧಿ ಸೂಚ್ಯಂಕವನ್ನು ರಾಜ್ಯದ ಸರಾಸರಿಗೆ ಸಮನಾಗಿ ತರುವುದು.

- ಕೃಷಿ, ಕೈಗಾರಿಕೆ ಹಾಗೂ ಸೇವಾ ವಲಯದಲ್ಲಿ ಹೆಚ್ಚಿನ ಜನ ಪಾಲುದಾರಿಕೆಯೊಂದಿಗೆ ಹೆಚ್ಚಿನ ಅಭಿವೃದ್ಧಿ ಸಾಧಿಸಲಾಗುವುದು.
- ಹೊಸ ಚಿಂತನೆ, ಹೊಸ ಚೈತನ್ಯ ಹಾಗೂ ಹೊಸ ಮುನ್ನೋಟದೊಂದಿಗೆ **ನವ ಭಾರತಕ್ಕಾಗಿ ನವ ಕರ್ನಾಟಕ** ನಿರ್ಮಾಣ ಮಾಡಲಾಗುವುದು.

12. 2022-23ನೇ ಸಾಲಿನ ಆಯವ್ಯಯವು ನಮ್ಮ ಸರ್ಕಾರದ ಈ ಎಲ್ಲಾ ಆಶಯ, ಧ್ಯೇಯ ಹಾಗೂ ಗುರಿ ಸಾಧನೆಯ ಮಾರ್ಗೋಪಾಯಗಳನ್ನು ಪ್ರಸ್ತಾಪಿಸುತ್ತದೆ.

## ರಾಜ್ಯದ ಅರ್ಥವ್ಯವಸ್ಥೆ

13. ಕೋವಿಡ್ ಸಾಂಕ್ರಾಮಿಕದ ಪರಿಣಾಮವಾಗಿ ಆರ್ಥಿಕತೆಯ ಮಂದಗತಿಯಿಂದಾಗಿ ಕಳೆದ ಎರಡು ವರ್ಷಗಳಿಂದ ರಾಜ್ಯವು ಸಾಕಷ್ಟು ಸವಾಲುಗಳನ್ನು ಎದುರಿಸಬೇಕಾಯಿತು. ಆದಾಗ್ಯೂ, 2021-22ರ ರಾಜಸ್ವ ಸಂಗ್ರಹದ ಅಂಕಿ-ಅಂಶಗಳಲ್ಲಿ ಗಮನಿಸಲಾದಂತೆ ಆರ್ಥಿಕತೆಯು ಪುನಶ್ಚೇತನಗೊಳ್ಳುತ್ತಿರುವುದು ಕಂಡುಬರುತ್ತಿದೆ. ಸಾಂಕ್ರಾಮಿಕ ರೋಗವನ್ನು ಎದುರಿಸಲು ಹಾಗೆಯೇ ಬೆಳವಣಿಗೆಯನ್ನು ಪ್ರೋತ್ಸಾಹಿಸಲು ಸರ್ಕಾರ ಮಾಡಿದ ಪ್ರಯತ್ನಗಳಿಂದ ಇದು ಸಾಧ್ಯವಾಗಿದೆ. 2020-21ನೇ ಸಾಲಿಗೆ ಹೋಲಿಸಿದರೆ 2021-22ನೇ ಸಾಲಿನಲ್ಲಿ ಎಲ್ಲಾ ಕ್ಷೇತ್ರಗಳಲ್ಲಿಯೂ ಬೆಳವಣಿಗೆಯು ಕಂಡುಬಂದಿದೆ. ಕೃಷಿ ವಲಯವು ಶೇ.2.2ರಷ್ಟು,

ಕೈಗಾರಿಕಾ ವಲಯವು ಶೇ.7.4ರಷ್ಟು ಮತ್ತು ಸೇವಾ ವಲಯವು ಶೇ.9.2ರಷ್ಟು ಬೆಳವಣಿಗೆಯಾಗಿದೆ. ಸ್ಥಿರ ಬೆಲೆಗಳಲ್ಲಿ ಹಿಂದಿನ ವರ್ಷಕ್ಕೆ ಹೋಲಿಸಿದರೆ 2021–22ನೇ ಸಾಲಿನ ಸಮಗ್ರ ಜಿ.ಎಸ್.ಡಿ.ಪಿ.ಯು ಶೇ.9.5ರಷ್ಟು ಬೆಳವಣಿಗೆಯನ್ನು ಹೊಂದಲಿದೆಯೆಂದು ನಿರೀಕ್ಷಿಸಲಾಗಿದೆ.

14. ಪ್ರಗತಿಪರ ಮತ್ತು ಬೆಳವಣಿಗೆ ಆಧಾರಿತ ಆಯವ್ಯಯವನ್ನು ಪ್ರಸ್ತುತಪಡಿಸುವ ಮೂಲಕ 2022–23ನೇ ಸಾಲಿನಲ್ಲಿ ಚೇತರಿಕೆಯ ಹಾದಿಯಲ್ಲಿ ಮುಂದುವರಿಯಲು ಹೆಚ್ಚಿನ ಪ್ರಯತ್ನಗಳನ್ನು ಮಾಡಲಾಗುವುದು.

## ರಾಜ್ಯದ ಹಣಕಾಸು ಪರಿಸ್ಥಿತಿ

15. ರಾಜ್ಯದ ರಾಜಸ್ವ ಸಂಪನ್ಮೂಲಗಳು ರಾಜ್ಯದ ಸ್ವಂತ ತೆರಿಗೆ, ತೆರಿಗೆಯೇತರ ಸ್ವೀಕೃತಿಗಳು, ಕೇಂದ್ರ ತೆರಿಗೆಗಳಿಂದ ರಾಜ್ಯದ ಪಾಲು ಮತ್ತು ಕೇಂದ್ರ ಸರ್ಕಾರದ ಸಹಾಯಾನುದಾನವನ್ನು ಒಳಗೊಂಡಿರುತ್ತದೆ. ವರ್ಷದ ಆರಂಭದಲ್ಲಿ ಕೋವಿಡ್ ಸಾಂಕ್ರಾಮಿಕದ ಎರಡನೇ ಅಲೆಯಿಂದಾಗಿ ರಾಜಸ್ವ ಸಂಗ್ರಹವು ಮಂದಗತಿಯಲ್ಲಿ ಪ್ರಾರಂಭವಾಯಿತು. ಆದಾಗ್ಯೂ, ಮುಂದಿನ ದಿನಗಳಲ್ಲಿ ಅದು ಹೆಚ್ಚಿದ್ದು, ಆಯವ್ಯಯದಲ್ಲಿ ಅಂದಾಜು ಮಾಡಿದ ಗುರಿಗಳನ್ನು ನಾವು ತಲುಪಲಿದ್ದೇವೆ. 2021–22ನೇ ಆರ್ಥಿಕ ವರ್ಷದಲ್ಲಿ ಕೇಂದ್ರ ಸರ್ಕಾರದ ರಾಜಸ್ವ ಸಂಗ್ರಹಣೆಗಳು ಸಹ ಹೆಚ್ಚಿವೆ, ಇದರಿಂದಾಗಿ ರಾಜ್ಯಕ್ಕೆ ಕೇಂದ್ರ ತೆರಿಗೆಗಳ ಪಾಲನ್ನು ಪರಿಷ್ಕೃತ ಅಂದಾಜಿನಲ್ಲಿ, ಆಯವ್ಯಯದಲ್ಲಿ ಅಂದಾಜು ಮಾಡಿದ 24,273 ಕೋಟಿ ರೂ.ಗಳಿಂದ 27,145 ಕೋಟಿ ರೂ.ಗಳಿಗೆ ಹೆಚ್ಚಿಸಲಾಗಿದೆ. ಕೇಂದ್ರ ಸರ್ಕಾರವು 2022–23ನೇ ಸಾಲಿನ ತನ್ನ

ಆಯವ್ಯಯದಲ್ಲಿ ಕರ್ನಾಟಕಕ್ಕೆ ತೆರಿಗೆ ಹಂಚಿಕೆಯಾಗಿ 29,783 ಕೋಟಿ ರೂ.ಗಳನ್ನು ಅಂದಾಜು ಮಾಡಿದೆ.

16. ಹಿಂದಿನ ವರ್ಷಕ್ಕೆ ಹೋಲಿಸಿದರೆ 2021-22ನೇ ಸಾಲಿನಲ್ಲಿ ರಾಜ್ಯದ ಜಿ.ಎಸ್.ಟಿ ಸಂಗ್ರಹಣೆಯು ಹೆಚ್ಚಾಗಿದೆ ಮತ್ತು ಚೇತರಿಕೆಯ ಹಾದಿಯಲ್ಲಿದೆ ಎಂಬುದನ್ನು ಇದು ತೋರಿಸುತ್ತದೆ. ಕೇಂದ್ರ ಸರ್ಕಾರವು 2021-22ನೇ ಸಾಲಿಗೆ ಜಿ.ಎಸ್.ಟಿ ಪರಿಹಾರ ಮೊತ್ತ 7,158 ಕೋಟಿ ರೂ.ಗಳ ಜೊತೆಗೆ ಜಿ.ಎಸ್.ಟಿ ಪರಿಹಾರದ ಬದಲಾಗಿ 18,109 ಕೋಟಿ ರೂ.ಗಳನ್ನು ಜಿ.ಎಸ್.ಟಿ ಸಾಲವಾಗಿ ನೀಡುವ ಮೂಲಕ ರಾಜ್ಯವನ್ನು ಬೆಂಬಲಿಸಿದೆ. ಇದು ಕೋವಿಡ್ ಮತ್ತು ಅದಕ್ಕೆ ಸಂಬಂಧಿಸಿದ ವೆಚ್ಚಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಮಾತ್ರವಲ್ಲದೆ ಬೆಳವಣಿಗೆಗೆ ಉತ್ತೇಜನೆಯನ್ನು ಒದಗಿಸುವ ಎಲ್ಲಾ ಅಭಿವೃದ್ಧಿ ಕಾರ್ಯಗಳು ಮತ್ತು ಕಾರ್ಯಕ್ರಮಗಳಿಗೆ ಸಮರ್ಪಕವಾಗಿ ಹಣವನ್ನು ಒದಗಿಸಲಾಗಿದೆ ಎಂದು ಖಚಿತಪಡಿಸಿಕೊಳ್ಳಲು ಸಹ ನಮಗೆ ಸಹಾಯ ಮಾಡಿದೆ. ಜಿ.ಎಸ್.ಟಿ ಪರಿಹಾರವು ಜೂನ್ 2022ಗೆ ಕೊನೆಗೊಳ್ಳಲಿದೆ. ಇದರರ್ಥ ರಾಜ್ಯವು ಹೆಚ್ಚುವರಿ ಸಂಪನ್ಮೂಲಗಳನ್ನು ಒಟ್ಟುಗೂಡಿಸಬೇಕು ಎಂಬುದಾಗಿದೆ. ನಾವು ಸ್ವಂತ ತೆರಿಗೆ ಸಂಗ್ರಹಗಳನ್ನು ಮತ್ತು ತೆರಿಗೆಯೇತರ ಸಂಗ್ರಹಗಳನ್ನು ಹೆಚ್ಚಿಸಲು ಪ್ರಯತ್ನಿಸುತ್ತಿದ್ದೇವೆ. ಭವಿಷ್ಯದ ಹೊಣೆಗಾರಿಕೆಗಳನ್ನು ನಿರ್ವಹಿಸಲು ರಾಜ್ಯಗಳಿಗೆ ಜಿ.ಎಸ್.ಟಿ ಪರಿಹಾರವನ್ನು ಕನಿಷ್ಠ ಮೂರು ವರ್ಷಗಳವರೆಗೆ ವಿಸ್ತರಿಸಲು ನಾನು ಕೇಂದ್ರ ಸರ್ಕಾರವನ್ನು ವಿನಂತಿಸಿದ್ದೇನೆ.

17. ಕೋವಿಡ್ ಪ್ರಭಾವದಿಂದಾಗಿ ಆರ್ಥಿಕ ಹಿಂಜರಿಕೆಯನ್ನು ನಿವಾರಿಸಲು ರಾಜ್ಯಗಳಿಗೆ ಬೆಂಬಲವಾಗಿ 2021-22ನೇ ಸಾಲಿನ ಅವಧಿಯಲ್ಲಿ ಜಿ.ಎಸ್.ಡಿ.ಪಿ ಯ ಶೇ.4ರವರೆಗೆ ಸಾಲವನ್ನು ಪಡೆಯಲು ಕೇಂದ್ರ ಸರ್ಕಾರವು ರಾಜ್ಯಗಳಿಗೆ ಅನುಕೂಲ ಕಲ್ಪಿಸಿದೆ. ಅದರಂತೆ, ಈ ಸೌಲಭ್ಯವನ್ನು ಪಡೆಯಲು ರಾಜ್ಯ ಸರ್ಕಾರವು ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮ, 2002 ಅನ್ನು ತಿದ್ದುಪಡಿ ಮಾಡಿದೆ. **2022-23ನೇ ಸಾಲಿಗೆ ಕೇಂದ್ರ ಸರ್ಕಾರವು ತನ್ನ ಕೇಂದ್ರ ಆಯವ್ಯಯದಲ್ಲಿ ವಿತ್ತೀಯ ಕೊರತೆಯನ್ನು ಶೇ.3.5ರವರೆಗೆ ಹೆಚ್ಚಿಸಲು ರಾಜ್ಯಗಳಿಗೆ ಅವಕಾಶ ನೀಡಿದ್ದರೂ ಸಹ ನಮ್ಮ ಸರ್ಕಾರವು ಇದನ್ನು ಶೇ.3.26ಕ್ಕೆ ಸಿಮೀತಗೊಳಿಸುವ ಮೂಲಕ ಆರ್ಥಿಕ ಶಿಸ್ತು ಮತ್ತು ಮುಂದಾಲೋಚನೆಯನ್ನು ಪ್ರದರ್ಶಿಸಿದೆ ಎಂದು ನಾನು ಈ ಸದನಕ್ಕೆ ತಿಳಿಸಲು ಬಯಸುತ್ತೇನೆ.**

18. ಕೇಂದ್ರ ಸರ್ಕಾರವು ಕಳೆದ ಎರಡು ವರ್ಷಗಳಲ್ಲಿ ಹೆಚ್ಚುವರಿ ಸಾಲವನ್ನು ಅನುಮತಿಸಿದಾಗ ನಾವು ಸಾಲವನ್ನು ನಿಯಂತ್ರಣದಲ್ಲಿಡುವಲ್ಲಿ ಯಶಸ್ವಿಯಾಗಿದ್ದೇವೆ. **ಪ್ರಸಕ್ತ ಆರ್ಥಿಕ ವರ್ಷದಲ್ಲಿ ಆಯವ್ಯಯದ 67,100 ಕೋಟಿ ರೂ.ಗಳ ಬದಲಿಗೆ 63,100 ಕೋಟಿ ರೂ.ಗಳಿಗೆ ಸಾಲವನ್ನು ನಿರ್ಬಂಧಿಸಲು ನಾನು ಪ್ರಸ್ತಾಪಿಸುತ್ತೇನೆ. 2022-23ನೇ ಸಾಲಿನಲ್ಲಿ ನಾವು 72,000 ಕೋಟಿ ರೂ.ಗಳ ಸಾಲವನ್ನು ಪಡೆಯಲು ಯೋಜಿಸಿದ್ದೇವೆ.**

19. 2021-22ನೇ ಸಾಲಿಗೆ ಮಂಡಿಸಲಾದ ಆಯವ್ಯಯ ಆಗ ಇದ್ದ ನಿರ್ಬಂಧಗಳಿಂದಾಗಿ ವೆಚ್ಚವನ್ನು ಕಡಿಮೆ ಮಾಡುವ ಮತ್ತು ಹೊಸ ಯೋಜನೆಗಳನ್ನು ಘೋಷಿಸುವಲ್ಲಿ ಸಂಯಮವನ್ನು ಪ್ರದರ್ಶಿಸುವ

ಮೂಲಕ ತೊಂದರೆಗಳನ್ನು ಎದುರಿಸುವ ಆಯವ್ಯಯ ಆಗಿತ್ತು. 2022-23ನೇ ಆಯವ್ಯಯವು ಒಂದು ಭರವಸೆಯಾಗಿದ್ದು, ಇದು ಅಭಿವೃದ್ಧಿ ಮತ್ತು ಉತ್ತಮ ಭವಿಷ್ಯದ ಭರವಸೆಯಾಗಿದೆ.

## ವಲಯ 1: ಕೃಷಿ ಮತ್ತು ಪೂರಕ ಚಟುವಟಿಕೆಗಳು

***ಕೃಷಿಯ ಮಾಡಿ ಉಣ್ಣದೆ***
***ಹಸಿವು ಹರಿವ ಪರಿ ಇನ್ನೆಂತೊ***

– ***ಸೊನ್ನಲಿಗೆಯ ಸಿದ್ಧರಾಮ***

ಕೃಷಿ ಉತ್ಪಾದನೆ ಹೆಚ್ಚಳಕ್ಕೆ ಅನುಗುಣವಾಗಿ ರೈತರ ಆದಾಯವೂ ಹೆಚ್ಚಳವಾಗಬೇಕು. ಪ್ರಧಾನಿ ನರೇಂದ್ರ ಮೋದಿಯವರ ಕನಸಿನಂತೆ, ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸಂದರ್ಭದಲ್ಲಿ ರೈತರ ಆದಾಯ ದ್ವಿಗುಣಗೊಳಿಸಲು ನಮ್ಮ ಸರ್ಕಾರ ನಿರ್ದಿಷ್ಟ ಕ್ರಮಗಳನ್ನು ಕೈಗೊಂಡಿದೆ. ಕೃಷಿ ಕ್ಷೇತ್ರದ ಸುಧಾರಣೆಗಾಗಿ ಹಾಗೂ ಕೃಷಿಯನ್ನು ಲಾಭದಾಯಕವಾಗಿಸುವ ನಿಟ್ಟಿನಲ್ಲಿ ರೈತರ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್, ನೀರಾವರಿ ಸೌಲಭ್ಯ, ರಿಯಾಯಿತಿ ದರದಲ್ಲಿ ಬೀಜ, ಗೊಬ್ಬರ, ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ, ಪಿ.ಎಂ ಕಿಸಾನ್ ಸಹಾಯಧನ ಹೀಗೆ ಹಲವಾರು ಸೌಲಭ್ಯಗಳನ್ನು ವಿವಿಧ ಯೋಜನೆಗಳಡಿ ಒದಗಿಸಲಾಗುತ್ತಿದೆ. ಈ ಎಲ್ಲಾ ಕ್ರಮಗಳು ಆತ್ಮನಿರ್ಭರ ಭಾರತ ಕಟ್ಟುವ ಆಶಯಕ್ಕೆ ಪೂರಕವಾಗಿದೆ.

20. **ರಾಜ್ಯದಲ್ಲಿ ಕೃಷಿ ಉತ್ಪಾದಕತೆಯನ್ನು ಹೆಚ್ಚಿಸುವಲ್ಲಿ ಕೃಷಿ ಯಾಂತ್ರೀಕರಣದ ಪಾತ್ರ ಬಹುಮುಖ್ಯವಾಗಿದೆ. ರೈತರಿಗೆ ಕೃಷಿ**

**ಯಂತ್ರೋಪಕರಣಗಳ ಬಳಕೆಯನ್ನು ಪ್ರೋತ್ಸಾಹಿಸಲು ಹಾಗೂ ಇಂಧನ ವೆಚ್ಚದ ಭಾರವನ್ನು ಕಡಿಮೆ ಮಾಡಲು ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿಗೆ ಪ್ರತಿ ಎಕರೆಗೆ 250/- ರೂ.ಗಳಂತೆ ಗರಿಷ್ಠ ಐದು ಎಕರೆಗೆ ಡಿ.ಬಿ.ಟಿ ಮೂಲಕ ಡೀಸಲ್‌ಗೆ ಸಹಾಯಧನವನ್ನು ನೀಡಲು "ರೈತ ಶಕ್ತಿ" ಎಂಬ ಹೊಸ ಯೋಜನೆಗೆ 500 ಕೋಟಿ ರೂ.ಗಳನ್ನು ಒದಗಿಸಲಾಗುವುದು.**

21. ಕೇಂದ್ರ ಸರ್ಕಾರದ ಪಿ.ಎಂ. ಕಿಸಾನ್ ಯೋಜನೆಯಡಿಯಲ್ಲಿನ 50 ಲಕ್ಷಕ್ಕೂ ಹೆಚ್ಚಿನ ರೈತರಿಗೆ 2021-22ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ 1,978 ಕೋಟಿ ರೂ.ಗಳ ಅನುದಾನವನ್ನು ನೇರ ನಗದು ವರ್ಗಾಯಿಸಲಾಗಿದೆ. ಈ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ಮುಂದುವರೆಸಲಾಗುವುದು.

22. ರಾಜ್ಯದ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ಕೈಗೆಟುಕುವಂತೆ ಮಾಡಲು ಹಾಗೂ ಕೃಷಿ ಉತ್ಪಾದಕತೆಯನ್ನು ಹೆಚ್ಚಿಸಲು ಈಗಾಗಲೇ ಸ್ಥಾಪಿಸಿರುವ ಕೃಷಿ ಯಂತ್ರಧಾರೆ ಕೇಂದ್ರಗಳನ್ನು ರಾಜ್ಯದ ಎಲ್ಲಾ ಹೋಬಳಿಗಳಿಗೆ ವಿಸ್ತರಿಸಲಾಗುವುದು.

23. **ರೈತರ ಆದಾಯವನ್ನು ಹೆಚ್ಚಿಸುವ ಧ್ಯೇಯದೊಂದಿಗೆ ರಾಷ್ಟ್ರದಲ್ಲಿಯೇ ಮೊದಲ ಬಾರಿಗೆ "ಸೆಕೆಂಡರಿ ಕೃಷಿ ನಿರ್ದೇಶನಾಲಯ" ವನ್ನು ಸ್ಥಾಪಿಸಲಾಗಿದೆ. ರೈತ ಉತ್ಪಾದಕರ ಸಂಸ್ಥೆಗಳನ್ನು ಬಳಸಿ ಕೃಷಿಯ ಪ್ರಾಥಮಿಕ ಉತ್ಪನ್ನಗಳ ಮೌಲ್ಯವರ್ಧನೆ ಮಾಡಿ, ಈ ಉತ್ಪನ್ನಗಳಿಗೆ ಹೆಚ್ಚಿನ ಮಾರುಕಟ್ಟೆ ಅವಕಾಶಗಳನ್ನು ಸೃಷ್ಟಿಸಲು ಇದು ಸಹಕಾರಿಯಾಗಲಿದೆ.**

24. **ಕೆಪೆಕ್ (KAPPEC) ಮುಖಾಂತರ ರೈತ ಉತ್ಪಾದಕರ ಸಂಸ್ಥೆಗಳಿಗೆ ಸಾಮಾನ್ಯ ಕೇಂದ್ರಗಳನ್ನು ಅಭಿವೃದ್ಧಿಪಡಿಸಿ, ಕೊಯ್ಲಿನೋತ್ತರ**

**ನಿರ್ವಹಣೆಯನ್ನು ಕೈಗೊಂಡು, ಅವುಗಳ ಉತ್ಪನ್ನಗಳನ್ನು ಮಾರಾಟ ಮತ್ತು ರಫ್ತು ಮಾಡಲು 50 ಕೋಟಿ ರೂ.ಗಳಲ್ಲಿ ಯೋಜನೆ ರೂಪಿಸಲಾಗುವುದು.**

25. ಕೃಷಿ / ತೋಟಗಾರಿಕೆ ಉತ್ಪನ್ನಗಳು ಪೋಲಾಗುವುದನ್ನು ತಪ್ಪಿಸಿ, ಮೌಲ್ಯವರ್ಧನೆಯನ್ನು ಉತ್ತೇಜಿಸಲು ಮತ್ತು ಸರಬರಾಜು ಸರಪಳಿಯನ್ನು ಸದೃಢಗೊಳಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಿನಿ ಆಹಾರ ಪಾರ್ಕುಗಳನ್ನು ಹಂತ ಹಂತವಾಗಿ ಖಾಸಗಿ-ಸಾರ್ವಜನಿಕ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

26. ಇದರೊಂದಿಗೆ ನೈಸರ್ಗಿಕ ಕೃಷಿ ಕೈಗೊಳ್ಳಲು ರೈತರನ್ನು ಪ್ರೇರೇಪಿಸುವ ಉದ್ದೇಶದಿಂದ ಎಲ್ಲಾ ಕೃಷಿ / ತೋಟಗಾರಿಕಾ ವಿಶ್ವವಿದ್ಯಾಲಯಗಳ ಮುಖಾಂತರ ತಲಾ 1,000 ಎಕರೆ ಪ್ರದೇಶದಲ್ಲಿ ನೈಸರ್ಗಿಕ ಕೃಷಿ ಪದ್ಧತಿಯಲ್ಲಿ ಸಾರಜನಕ ಸ್ಥಿರೀಕರಣ, ಜೈವಿಕ ವಿಶ್ಲೇಷಣೆ ಅಧ್ಯಯನಗಳನ್ನು ಕೈಗೊಂಡು ರೈತರ ಹೊಲಗಳಿಗೆ ವಿಸ್ತರಿಸಲಾಗುವುದು. ರಾಜ್ಯದಲ್ಲಿ ಒಟ್ಟಾರೆ 2 ಲಕ್ಷ ಹೆಕ್ಟೇರ್ ಪ್ರದೇಶವನ್ನು ಸಾವಯವ ಕೃಷಿಯಡಿ ತರಲಾಗಿದ್ದು ರಾಷ್ಟ್ರದಲ್ಲಿಯೇ ಸಾವಯವ ಉತ್ಪನ್ನಗಳ ಉತ್ಪಾದನೆಯಲ್ಲಿ ನಮ್ಮ ರಾಜ್ಯವು ಮೂರನೇ ಸ್ಥಾನದಲ್ಲಿರುತ್ತದೆ.

27. ರಾಜ್ಯದ 57 ತಾಲ್ಲೂಕುಗಳ ವ್ಯಾಪ್ತಿಯ 2.75 ಲಕ್ಷ ಹೆಕ್ಟೇರ್ ಮಳೆಯಾಶ್ರಿತ ಪ್ರದೇಶದಲ್ಲಿ ಕೇಂದ್ರ ಸರ್ಕಾರದ ನೆರವಿನೊಂದಿಗೆ 642 ಕೋಟಿ ರೂ. ವೆಚ್ಚದಲ್ಲಿ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ-2.0ನ್ನು ಜಾರಿಗೊಳಿಸಲಾಗುವುದು.

28. ಬಳ್ಳಾರಿ ಜಿಲ್ಲೆಯ ಹಗರಿಯಲ್ಲಿ ಒಂದು ಹೊಸ ಕೃಷಿ ಕಾಲೇಜನ್ನು ಡಿ.ಎಂ.ಎಫ್ ಮತ್ತು ಕೆ.ಕೆ.ಆರ್.ಡಿ.ಬಿ ಅನುದಾನಗಳನ್ನು

ಸಂಯೋಜಿಸಿ ಸ್ಥಾಪಿಸಲಾಗುವುದು. ಇದಲ್ಲದೇ, ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನಲ್ಲಿ ಒಂದು ಹೊಸ ಕೃಷಿ ಕಾಲೇಜನ್ನು ಸ್ಥಾಪಿಸಲು ಯೋಜಿಸಲಾಗಿದೆ.

29. ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಬೆಳೆಯುವ ವಿಶಿಷ್ಟವಾದ ಭೌಗೋಳಿಕ ಸೂಚ್ಯಂಕ ಹೊಂದಿದ ತೊಗರಿಬೇಳೆಯನ್ನು "ಭೀಮಾ ಪಲ್ಸ್" ಬ್ರಾಂಡ್‌ನಡಿ ಮಾರಾಟ ಮಾಡಲು ಉದ್ದೇಶಿಸಲಾಗಿದೆ.

30. ಹಿರೇಕೆರೂರಿನಲ್ಲಿ ಗೋವಿನ ಜೋಳ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಿದೆ.

31. ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ "ಡಾ. ಎಸ್.ವಿ. ಪಾಟೀಲ್ ಕೃಷಿ ಸಂಶೋಧನೆ, ತರಬೇತಿ ಹಾಗೂ ರೈತರ ಶ್ರೇಯೋಭಿವೃದ್ಧಿ ಪೀಠ" ವನ್ನು ಸ್ಥಾಪಿಸಲಾಗುವುದು.

32. ಕೃಷಿಯಲ್ಲಿ ರೈತ ಮಹಿಳೆಯರನ್ನು ಪ್ರೋತ್ಸಾಹಿಸುವ ಸಲುವಾಗಿ ಹಾಗೂ ಇತರ ಮಹಿಳೆಯರನ್ನು ಕೃಷಿಯತ್ತ ಆಕರ್ಷಿಸಲು ಪ್ರತ್ಯೇಕವಾಗಿ ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿಯನ್ನು ನೀಡಲಾಗುವುದು.

33. ರಾಜ್ಯದಲ್ಲಿ ತೋಟಗಾರಿಕೆ ಬೆಳೆಗಳ ವಿಸ್ತೀರ್ಣವು 26.32 ಲಕ್ಷ ಹೆಕ್ಟೇರ್‌ಗಳಾಗಿದ್ದು, ದೇಶದಲ್ಲಿಯೇ ಮೊದಲನೇ ಸ್ಥಾನವನ್ನು ಹೊಂದಿದೆ. 2021-22ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಅಡಿಯಲ್ಲಿ 1.38 ಲಕ್ಷ ಫಲಾನುಭವಿಗಳಿಗೆ 240 ಕೋಟಿ ರೂ. ಸಹಾಯಧನವನ್ನು ನೀಡಿದ್ದು, ತೋಟಗಾರಿಕೆ ಸಾಗುವಳಿ ಕ್ಷೇತ್ರವನ್ನು 34,700 ಹೆಕ್ಟೇರ್ ಪ್ರದೇಶಕ್ಕೆ ವಿಸ್ತರಿಸಲಾಗಿದೆ. ಆಧುನಿಕ ತಂತ್ರಜ್ಞಾನವನ್ನು ಪರಿಚಯಿಸಲು 1,255 ಹೆಕ್ಟೇರ್ ಪ್ರದೇಶದಲ್ಲಿ ಸಂರಕ್ಷಿತ ಬೇಸಾಯ ಪದ್ಧತಿಯನ್ನು ಪ್ರೋತ್ಸಾಹಿಸಲಾಗಿದೆ ಹಾಗೂ

ರೈತರಿಗೆ ಯೋಗ್ಯ ದರದಲ್ಲಿ 48 ಲಕ್ಷ ಸಸಿ-ಕಸಿಗಳನ್ನು ವಿತರಿಸಲಾಗಿದೆ.

34. ಕೋವಿಡ್-19 ರಿಂದಾಗಿ ಹೂವು, ಹಣ್ಣು ಮತ್ತು ತರಕಾರಿ ಬೆಳೆಗಾರರಿಗಾದ ನಷ್ಟಕ್ಕೆ 46 ಕೋಟಿ ರೂ.ಗಳನ್ನು ಪ್ರಸ್ತುತ ಸಾಲಿನಲ್ಲಿ ಪರಿಹಾರ ರೂಪದಲ್ಲಿ 97 ಸಾವಿರಕ್ಕೂ ಹೆಚ್ಚು ರೈತರಿಗೆ ವಿತರಿಸಲಾಗಿದೆ.

35. **ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರದಲ್ಲಿ ಗ್ರೀನ್ ಸ್ಪೇಸ್‌ಗೆ ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಪ್ರಪ್ರಥಮ ಬಾರಿಗೆ ನಮ್ಮ ಸರ್ಕಾರವು ಲಾಲ್‌ಬಾಗ್-ಕಬ್ಬನ್ ಪಾರ್ಕ್‌ಗಳ ಮಾದರಿಯಲ್ಲಿ ವಿವಿಧೋದ್ದೇಶ "ಅಟಲ್ ಬಿಹಾರಿ ವಾಜಪೇಯಿ ಉದ್ಯಾನವನ"ವನ್ನು ಯಲಹಂಕ ಬಳಿಯ ಜಾರಕಬಂಡೆ ಕಾವಲ್ ಪ್ರದೇಶದ 350 ಎಕರೆ ಸರ್ಕಾರಿ ಜಮೀನಿನಲ್ಲಿ ಅಭಿವೃದ್ಧಿಗೊಳಿಸಲಾಗುವುದು.**

36. ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಅಳವಡಿಸಲು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶೇ.90ರಷ್ಟು ಹಾಗೂ ಇತರೆ ವರ್ಗದ ರೈತರಿಗೆ ಶೇ.75ರಷ್ಟು ಸಹಾಯಧನ ನೀಡಲಾಗುವುದು.

37. ವಿಜಯಪುರ ಜಿಲ್ಲೆಯಲ್ಲಿ ರಾಜ್ಯದಲ್ಲಿಯೇ ಅತಿ ಹೆಚ್ಚು ದ್ರಾಕ್ಷಿ ಬೆಳೆಯಲಾಗುತ್ತದೆ. ಕರ್ನಾಟಕ ದ್ರಾಕ್ಷಿ ಮತ್ತು ದ್ರಾಕ್ಷಾರಸ ಮಂಡಳಿಯ ಮೂಲಕ ತೊರವಿ ಗ್ರಾಮದಲ್ಲಿ 35 ಕೋಟಿ ರೂ.ಗಳ ವೆಚ್ಚದಲ್ಲಿ ಒಂದು ಅತ್ಯಾಧುನಿಕ ಶೈತ್ಯಸಂಗ್ರಹ ಸೌಲಭ್ಯವನ್ನು ಪಿ.ಪಿ.ಪಿ ಆಧಾರದ ಮೇಲೆ ನಿರ್ಮಿಸಿ, ದ್ರಾಕ್ಷಿ ಬೆಳೆಯ ಸಂಗ್ರಹಣೆ, ಸಂಸ್ಕರಣೆ ಮತ್ತು ಸಾಗಣೆಯನ್ನು ವೈಜ್ಞಾನಿಕವಾಗಿ ನಿರ್ವಹಿಸಲು ಶೀತಲೀಕೃತ ಸರಕು ಸಾಗಣೆ ವಾಹನಗಳನ್ನು ಒದಗಿಸಲಾಗುವುದು.

38. "ರಾಷ್ಟ್ರೀಯ ಖಾದ್ಯ ತೈಲಗಳು-ತಾಳೆ ಎಣ್ಣೆ" ಅಭಿಯಾನದಡಿ ಮುಂದಿನ ಐದು ವರ್ಷಗಳಲ್ಲಿ 25,000 ಹೆಕ್ಟೇರ್ ಹೆಚ್ಚಿಸುವ ಗುರಿ ಹೊಂದಿದ್ದು, ಇದಕ್ಕೆ 35 ಕೋಟಿ ರೂ. ಅನುದಾನ ಒದಗಿಸಲಾಗುವುದು.

39. ತೋಟಗಾರಿಕೆಯಲ್ಲಿ ವಿನೂತನ ತಂತ್ರಜ್ಞಾನ ಹಾಗೂ ಯಂತ್ರೋಪಕರಣಗಳನ್ನು ಅಳವಡಿಸಲು 25 ಕೋಟಿ ರೂ. ಅನುದಾನ ನೀಡಲಾಗುವುದು.

40. ಮೆಣಸು ಮತ್ತು ಇತರೆ ಸಾಂಬಾರ ಪದಾರ್ಥಗಳ ಗುಣಮಟ್ಟವನ್ನು ಹೆಚ್ಚಿಸಲು ಬ್ಯಾಡಗಿಯಲ್ಲಿ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಿದೆ.

41. ಹಾನಗಲ್‌ನಲ್ಲಿ ಮಾವು ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ಉತ್ತೇಜನ ನೀಡಲಾಗುವುದು.

42. ಕೊಡಗು ಮತ್ತು ಜಾಂಬೋಟಿ ಜೇನು ತುಪ್ಪಗಳನ್ನು ಜನಪ್ರಿಯಗೊಳಿಸಲು ಹಾಗೂ ಉತ್ಪಾದನೆಯನ್ನು ಹೆಚ್ಚಿಸಲು ಸುಧಾರಿತ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸಿ ಬ್ರ್ಯಾಂಡಿಂಗ್ ಮೂಲಕ ಜಾಗತಿಕ ಮಟ್ಟಕ್ಕೇರಿಸಲು ಐದು ಕೋಟಿ ರೂ. ಒದಗಿಸಲಾಗುವುದು.

43. **ರೇಷ್ಮೆ ಉತ್ಪಾದನೆಯಲ್ಲಿ ನಮ್ಮ ರಾಜ್ಯವು ರಾಷ್ಟ್ರದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ. ರೇಷ್ಮೆ ಬೆಳೆಗಾರರು ಉತ್ಪಾದಿಸಿದ ದ್ವಿತಳಿ ರೇಷ್ಮೆ ಗೂಡನ್ನು, ಸರ್ಕಾರಿ ರೇಷ್ಮೆ ಗೂಡು ಮಾರುಕಟ್ಟೆಯಲ್ಲಿ ಮಾರಾಟ ಮಾಡುವ ಪ್ರತಿ ಟನ್ ದ್ವಿತಳಿ ರೇಷ್ಮೆಗೂಡಿಗೆ 10 ಸಾವಿರ ರೂ.ಗಳಂತೆ ಪ್ರೋತ್ಸಾಹ ಧನ ನೀಡಲು ಘೋಷಿಸಿದೆ.**

44. ದ್ವಿತಳಿ ಮೊಟ್ಟೆ ಉತ್ಪಾದಿಸಿ ಶೈತ್ಯೀಕರಿಸಲು ಮದ್ದೂರು, ರಾಣೆಬೆನ್ನೂರು ಮತ್ತು ದೇವನಹಳ್ಳಿಯಲ್ಲಿ ಶೈತ್ಯಾಗಾರಗಳನ್ನು 15 ಕೋಟಿ ರೂ.ಗಳ ವೆಚ್ಚದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಡಿ ನಿರ್ಮಿಸಲಾಗುವುದು.

45. ರಾಜ್ಯದಲ್ಲಿ ರೇಷ್ಮೆ ಬೆಳೆಗಾರರಿಗೆ ಅತ್ಯಾಧುನಿಕ ಮಾರುಕಟ್ಟೆ ಸೌಲಭ್ಯವನ್ನು ಒದಗಿಸಲು ಕಲಬುರಗಿ ಮತ್ತು ಹಾವೇರಿ ಜಿಲ್ಲೆಯಲ್ಲಿ ನಬಾರ್ಡ್ ನೆರವಿನೊಂದಿಗೆ 30 ಕೋಟಿ ರೂ. ವೆಚ್ಚದಲ್ಲಿ ಹೈಟೆಕ್ ಸರ್ಕಾರಿ ರೇಷ್ಮೆ ಗೂಡು ಮಾರುಕಟ್ಟೆಯನ್ನು ನಿರ್ಮಿಸಲಾಗುವುದು.

46. ರೇಷ್ಮೆ ಬೆಳೆಗಾರರ ಆದಾಯವನ್ನು ಹೆಚ್ಚಿಸಲು ಮತ್ತು ರೇಷ್ಮೆ ಉತ್ಪಾದನೆಯನ್ನು ವೃದ್ಧಿಸಲು ದ್ವಿತಳಿ ಬಿತ್ತನೆ ಗೂಡಿಗೆ ನೀಡುತ್ತಿರುವ ಪ್ರೋತ್ಸಾಹಧನವನ್ನು ಪ್ರತಿ ಕೆಜಿಗೆ 50 ರೂ.ಗಳಷ್ಟು ಹೆಚ್ಚಿಸಲಾಗುವುದು ಹಾಗೂ ರೇಷ್ಮೆ ನೂಲು ಬಿಚ್ಚಾಣಿಕೆದಾರರು ಉತ್ಪಾದಿಸಿದ ಕಚ್ಚಾ ರೇಷ್ಮೆಗೂ ಪ್ರೋತ್ಸಾಹಧನ ನೀಡಲಾಗುವುದು.

47. ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆಯಲ್ಲಿ ರೇಷ್ಮೆಯ ಎಲ್ಲಾ ಉತ್ಪಾದನಾ ಚಟುವಟಿಕೆಗಳಿಗೆ ಸಂಬಂಧಿಸಿದ ಸುಸಜ್ಜಿತ ತರಬೇತಿ ಕೇಂದ್ರವನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

48. ರೇಷ್ಮೆ ಬೆಳೆಗಾರರಿಗೆ ಪಾರದರ್ಶಕ ಮತ್ತು ನ್ಯಾಯಯುತ ಬೆಲೆ ಒದಗಿಸಲು ಎಲ್ಲಾ ರೇಷ್ಮೆ ಗೂಡು ಮಾರುಕಟ್ಟೆಗಳಲ್ಲಿ e-Weighment ಹಾಗೂ e-Payment ಅನುಷ್ಠಾನಗೊಳಿಸಲಾಗುವುದು.

49. ರೇಷ್ಮೆಗೂಡು ಮತ್ತು ಕಚ್ಚಾ ರೇಷ್ಮೆ ಧಾರಣೆಗಳಲ್ಲಿ ಕುಸಿತವಾದಾಗ ರೇಷ್ಮೆ ಬೆಳೆಗಾರರು ಮತ್ತು ನೂಲು ಬಿಚ್ಚಣಿಕೆದಾರರ

ಹಿತರಕ್ಷಣೆಗಾಗಿ, ಅವರು ಉತ್ಪಾದಿಸಿದ ಕಚ್ಚಾ ರೇಷ್ಮೆಯನ್ನು ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯ ವತಿಯಿಂದ ಖರೀದಿಸಲು ಕ್ರಮವಹಿಸಲಾಗುವುದು.

50. **ಗ್ರಾಮೀಣ ಪ್ರದೇಶದಲ್ಲಿ ಜಾನುವಾರುಗಳ ಆರೋಗ್ಯ ರಕ್ಷಣೆಯು ನಮ್ಮ ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಈ ನಿಟ್ಟಿನಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪಶು ಚಿಕಿತ್ಸಾಲಯಗಳನ್ನು ಬಲಪಡಿಸುವುದರೊಂದಿಗೆ ನೂತನ 100 ಪಶುಚಿಕಿತ್ಸಾಲಯಗಳನ್ನು ಹಂತ ಹಂತವಾಗಿ ಪ್ರಾರಂಭಿಸಲಾಗುವುದು. ಖಾಲಿಯಿರುವ 400 ಪಶು ವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಕ್ರಮವಹಿಸಲಾಗಿದೆ.**

51. **ರಾಜ್ಯದಲ್ಲಿಯೇ ಪ್ರಪ್ರಥಮ ಬಾರಿಗೆ ನಮ್ಮ ಸರ್ಕಾರವು ಹಾಲು ಉತ್ಪಾದಕರಿಗೆ ಸರಳ ನಿಬಂಧನೆಗಳೊಂದಿಗೆ ಸಾಲ ಸೌಲಭ್ಯ ನೀಡಲು "ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್" ಸ್ಥಾಪಿಸಲು ಉದ್ದೇಶಿಸಲಾಗಿದೆ. ಸದರಿ ಬ್ಯಾಂಕಿಗೆ ಹಾಲು ಉತ್ಪಾದಕರ ಸಹಕಾರ ಸಂಘ, ಕರ್ನಾಟಕ ಹಾಲು ಮಹಾಮಂಡಳ ಹಾಗೂ ಜಿಲ್ಲಾ ಹಾಲು ಒಕ್ಕೂಟಗಳು ಒಟ್ಟಾರೆ 260 ಕೋಟಿ ರೂ. ಮತ್ತು ರಾಜ್ಯ ಸರ್ಕಾರವು 100 ಕೋಟಿ ರೂ.ಗಳ ಷೇರು ಬಂಡವಾಳವನ್ನು ಒದಗಿಸಲಿದೆ.**

52. ಹಾವೇರಿ ಜಿಲ್ಲೆಯಲ್ಲಿ ಒಂದು ಲಕ್ಷ ಲೀಟರ್ ಸಾಮರ್ಥ್ಯದ ಮೆಗಾ ಡೈರಿಯನ್ನು ಸ್ಥಾಪಿಸಲು ಕ್ರಮಕೈಗೊಳ್ಳಲಾಗಿದ್ದು, ಕರ್ನಾಟಕ ಹಾಲು ಒಕ್ಕೂಟದ ಸಹಯೋಗದೊಂದಿಗೆ ಶಿವಮೊಗ್ಗ, ದಾವಣಗೆರೆ-ಚಿತ್ರದುರ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಪ್ರತ್ಯೇಕ ಜಿಲ್ಲಾ ಹಾಲು ಒಕ್ಕೂಟಗಳನ್ನು ರಚಿಸಲು ಉದ್ದೇಶಿಸಿದೆ.

53. **ಗೋ ಸಂಪತ್ತಿನ ಸಂರಕ್ಷಣೆಗೆ ಸರ್ಕಾರ ಹೆಚ್ಚಿನ ಮಹತ್ವ ನೀಡಿದೆ. ಈ ಹಿನ್ನೆಲೆಯಲ್ಲಿ ಕಳೆದ ವರ್ಷ ಗೋ ಹತ್ಯಾ ನಿಷೇಧ ಅಧಿನಿಯಮ, 2020ನ್ನು ಜಾರಿಗೆ ತರಲಾಗಿದೆ. ಈ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಪೂರಕವಾಗಿ ಪ್ರಸ್ತುತ ರಾಜ್ಯದಲ್ಲಿರುವ ಗೋಶಾಲೆಗಳ ಸಂಖ್ಯೆಯನ್ನು 31 ರಿಂದ 100ಕ್ಕೆ ಹೆಚ್ಚಿಸಲಾಗುವುದು. ಈ ಉದ್ದೇಶಕ್ಕೆ 50 ಕೋಟಿ ರೂ.ಗಳನ್ನು ಒದಗಿಸಲಾಗುವುದು.**

54. **ಗೋಶಾಲೆಗಳಲ್ಲಿನ ಗೋವುಗಳನ್ನು ಸಾರ್ವಜನಿಕರು ಮತ್ತು ಖಾಸಗಿ ಸಂಸ್ಥೆಗಳು ವಾರ್ಷಿಕ 11,000 ರೂ.ಗಳ ಮೊತ್ತಕ್ಕೆ ದತ್ತು ತೆಗೆದುಕೊಳ್ಳುವುದನ್ನು ಪ್ರೋತ್ಸಾಹಿಸಲು ನಮ್ಮ ಸರ್ಕಾರವು ರಾಜ್ಯದಲ್ಲಿಯೇ ಮೊದಲ ಬಾರಿಗೆ "ಪುಣ್ಯಕೋಟಿ ದತ್ತು ಯೋಜನೆ"ಯನ್ನು ಪ್ರಾರಂಭಿಸಲಿದೆ.**

55. ರಾಜ್ಯದ ಸ್ಥಳೀಯ ಗೋ ತಳಿಗಳನ್ನು ಸಂರಕ್ಷಿಸಲು ಮತ್ತು ಅವುಗಳ ಸಂತತಿಯನ್ನು ಹೆಚ್ಚಿಸಲು ಕೆ.ಎಂ.ಎಫ್. ಮೂಲಕ 2,000 ಗೋ ತಳಿಗಳನ್ನು ರೈತರಿಗೆ ಹಂಚಿಕೆ ಮಾಡಲಾಗುವುದು.

56. ರಾಜ್ಯದ ಗೋಶಾಲೆಗಳಲ್ಲಿನ ತ್ಯಾಜ್ಯಗಳನ್ನು ಪರಿಸರ ಸ್ನೇಹಿ ಉತ್ಪನ್ನಗಳಾಗಿಸಲು ಆರ್ಥಿಕ ನೆರವನ್ನು ನೀಡಲಾಗುವುದು. ಗೋ ಉತ್ಪನ್ನಗಳ ಮಾರಾಟಕ್ಕಾಗಿ 'ಗೋ ಮಾತಾ ಸಹಕಾರ ಸಂಘ'ವನ್ನು ಸ್ಥಾಪಿಸಲಾಗುವುದು. ಜೊತೆಗೆ ಗೋ ಉತ್ಪನ್ನಗಳ ತಾಂತ್ರಿಕತೆ ಮತ್ತು ಪ್ರಮಾಣೀಕರಣದ ಅಭಿವೃದ್ಧಿಗಾಗಿ ಪಶುವಿಶ್ವವಿದ್ಯಾಲಯದಲ್ಲಿ ಒಂದು ಸಂಶೋಧನಾ ಕೋಶವನ್ನು ಸ್ಥಾಪಿಸಲಾಗುವುದು.

57. "ಅನುಗ್ರಹ ಕೊಡುಗೆ ಯೋಜನೆ"ಯಡಿ ಆಕಸ್ಮಿಕ ಮರಣ ಹೊಂದಿದ 3–6 ತಿಂಗಳ ವಯಸ್ಸಿನ ಕುರಿ/ ಮೇಕೆಗಳಿಗೆ ನೀಡುವ

ಪರಿಹಾರ ಧನವನ್ನು 2,500 ರೂ. ಗಳಿಂದ 3,500 ರೂ. ಗಳಿಗೆ ಹೆಚ್ಚಿಸಲಾಗುವುದು.

58. ಕುರಿ / ಮೇಕೆ ಸಾಕಾಣಿಕೆದಾರರು / ವಲಸೆ ಕುರಿಗಾರರು ಆಕಸ್ಮಿಕ ಮರಣ ಹೊಂದಿದಲ್ಲಿ ಅವಲಂಬಿತ ಕುಟುಂಬವನ್ನು ಆರ್ಥಿಕ ಸಂಕಷ್ಟದಿಂದ ಪಾರು ಮಾಡಲು ಕುರಿಗಾಹಿಗಳಿಗೆ ಐದು ಲಕ್ಷ ರೂ. ವಿಮಾ ಸೌಲಭ್ಯ ಒದಗಿಸಲಾಗುವುದು.

59. ಆರ್ಥಿಕವಾಗಿ ಹಿಂದುಳಿದ ಕುರಿಗಾರರಿಗೆ ವಸತಿ ಸೌಕರ್ಯದ ಜೊತೆಗೆ ಕುರಿ ದೊಡ್ಡಿ ನಿರ್ಮಿಸಲು ಐದು ಲಕ್ಷ ರೂ. ಸಹಾಯಧನ ನೀಡಲಾಗುವುದು.

60. ಸರ್ಕಾರದ ಆರು ಕುಕ್ಕುಟ ಕೇಂದ್ರಗಳ ಮುಖಾಂತರ ಪ್ರಸಕ್ತ ಸಾಲಿನಲ್ಲಿ 5 ಲಕ್ಷ ಕೋಳಿಮರಿಗಳನ್ನು ಉತ್ಪಾದಿಸಲಾಗುವುದು. ಇವುಗಳನ್ನು ರೈತ ಮಹಿಳೆಯರಿಗೆ ವಿತರಿಸಿ ಅವರ ಆದಾಯ ಹೆಚ್ಚಿಸಲಾಗುವುದು.

61. ರಾಜ್ಯದಲ್ಲಿ ಹಂದಿ ಸಾಕಾಣಿಕೆಯನ್ನು ಪ್ರೋತ್ಸಾಹಿಸಲು ಕಳೆದ ವರ್ಷ ಐದು ಹಂದಿ ತಳಿ ಉತ್ಪಾದಕ ಸಂಸ್ಥೆಗಳನ್ನು ಸ್ಥಾಪಿಸಿದ್ದು, ಪ್ರಸಕ್ತ ವರ್ಷದಲ್ಲಿ ಐದು ಹಂದಿ ಉತ್ಪಾದಕ ಸಂಸ್ಥೆಗಳನ್ನು ಸ್ಥಾಪಿಸಲಾಗುವುದು.

62. **300 ಕಿ.ಮೀ.ಗೂ ಹೆಚ್ಚು ಉದ್ದದ ಕರಾವಳಿ ತೀರವನ್ನು ಹೊಂದಿರುವ ಕರ್ನಾಟಕದಲ್ಲಿ ಪ್ರಸ್ತುತ ಬಹುತೇಕ ಮೀನು ಉತ್ಪಾದನೆಯು ತೀರ ಸಮೀಪದ ನೀರಿನಲ್ಲಿಯೇ ಆಗುತ್ತಿದ್ದು, ಆಳಸಮುದ್ರ ಮೀನುಗಾರಿಕೆಯಲ್ಲಿ ಸಾಮರ್ಥ್ಯ ವೃದ್ಧಿಗೆ ವಿಫುಲ ಅವಕಾಶಗಳಿವೆ. ಈ ನಿಟ್ಟಿನಲ್ಲಿ ಆಳಸಮುದ್ರ ಮೀನುಗಾರಿಕೆಯನ್ನು ಇನ್ನಷ್ಟು ಪ್ರಚುರ ಪಡಿಸಿ, ವಿಶಿಷ್ಟ ತಳಿಗಳ ಮೀನು ಮತ್ತು ಚಿಪ್ಪು ಮೀನುಗಳ ಉತ್ಪಾದನೆಯ**

**ಮೂಲಕ ಮೀನುಗಾರರ ಆದಾಯವನ್ನು ಹೆಚ್ಚಿಸಲು ನಮ್ಮ ಸರ್ಕಾರ ಮುಂದಾಗಿದೆ. ಈ ಹಿನ್ನೆಲೆಯಲ್ಲಿ 100 ಆಳ ಸಮುದ್ರ ಮೀನುಗಾರಿಕಾ ದೋಣಿಗಳಿಗೆ (Deep Sea Fishing Boats) ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯೊಂದಿಗೆ ಸಂಯೋಜಿಸಿ "ಮತ್ಸ್ಯ ಸಿರಿ" ಎಂಬ ವಿಶೇಷ ಯೋಜನೆ ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ರೂಪಿಸಲಾಗುವುದು.**

63. ಪ್ರಸಕ್ತ ಸಾಲಿನಲ್ಲಿ 5,000 ವಸತಿರಹಿತ ಮೀನುಗಾರರಿಗೆ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಆದ್ಯತೆ ಮೇರೆಗೆ ಮನೆಗಳನ್ನು ನಿರ್ಮಿಸಲಾಗುವುದು.

64. ರಾಜ್ಯದ 8 ಮೀನುಗಾರಿಕೆ ಬಂದರುಗಳಲ್ಲಿ ಮೀನುಗಾರಿಕಾ ದೋಣಿಗಳು ಸುಗಮವಾಗಿ ಮತ್ತು ವೇಗವಾಗಿ ಚಲಿಸಲು ಅನುಕೂಲವಾಗಿಸಲು ನ್ಯಾವಿಗೇಷನ್ ಚಾನಲ್‌ಗಳಲ್ಲಿ ಹಂತ ಹಂತವಾಗಿ ಹೂಳೆತ್ತಲಾಗುವುದು (Dredging).

65. ರಾಜ್ಯದ ಆಯ್ದ ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಪ್ರತಿ ಕೆರೆಯ ಜಲವಿಸ್ತೀರ್ಣಕ್ಕನುಗುಣವಾಗಿ ಮೀನು ಮರಿಗಳನ್ನು ಉಚಿತವಾಗಿ ದಾಸ್ತಾನು ಮಾಡಿ ಮೀನು ಕೃಷಿಯನ್ನು ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದೆ.

66. ಕೇಂದ್ರ ಪುರಸ್ಕೃತ ಯೋಜನೆಯಡಿ ಪ್ರತಿ ಪ್ಯಾಕ್ಸ್‌ಗೆ 4.37 ಲಕ್ಷ ರೂ.ಗಳಂತೆ ಮುಂದಿನ ಮೂರು ವರ್ಷಗಳಲ್ಲಿ ಒಟ್ಟು 256 ಕೋಟಿ ರೂ.ಗಳ ವೆಚ್ಚದಲ್ಲಿ ರಾಜ್ಯದ 5,865 ಪ್ಯಾಕ್ಸ್‌ಗಳನ್ನು ಗಣಕೀಕರಣಗೊಳಿಸಿ ಬಲಪಡಿಸಲಾಗುವುದು. ಈ ಯೋಜನೆಯಡಿ ಕೇಂದ್ರ ಸರ್ಕಾರದ ಪಾಲು 154 ಕೋಟಿ ರೂ.ಗಳಾಗಿದ್ದು ಉಳಿದ

ಪಾಲನ್ನು ಅಪೆಕ್ಸ್ ಬ್ಯಾಂಕ್/ ಡಿ.ಸಿ.ಸಿ ಬ್ಯಾಂಕುಗಳು/ರಾಜ್ಯ ಸರ್ಕಾರ ಮೂಲಕ ಭರಿಸಲಾಗುವುದು.

67. **ರೈತ ಬಾಂಧವರ ಬಹುದಿನಗಳ ಬೇಡಿಕೆಯನ್ನು ಈಡೇರಿಸಲು "ಯಶಸ್ವಿನಿ" ಯೋಜನೆಯನ್ನು ಪರಿಷ್ಕರಿಸಿ ಮರು ಜಾರಿಗೊಳಿಸಲು ನಮ್ಮ ಸರ್ಕಾರವು ನಿರ್ಧರಿಸಿದೆ. ಈ ಯೋಜನೆಯಿಂದ ಗ್ರಾಮೀಣ ಪ್ರದೇಶದ ರೈತ ಕುಟುಂಬಗಳಿಗೆ ಅತ್ಯುತ್ತಮ ವೈದ್ಯಕೀಯ ಸೌಲಭ್ಯಗಳು ಲಭಿಸಲಿದ್ದು, ಈ ಉದ್ದೇಶಕ್ಕಾಗಿ ರಾಜ್ಯ ಸರ್ಕಾರದಿಂದ 300 ಕೋಟಿ ರೂ.ಗಳನ್ನು ಒದಗಿಸಲಾಗುವುದು.**

68. **ಸಹಕಾರ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸುತ್ತಿರುವ ಬಡ್ಡಿ ಸಹಾಯಧನ ಯೋಜನೆಯಡಿ 2021-22ನೇ ಸಾಲಿನಲ್ಲಿ ಇಲ್ಲಿಯತನಕ ಒಟ್ಟು 22.50 ಲಕ್ಷ ರೈತರಿಗೆ 16,355 ಕೋಟಿ ರೂ.ಗಳ ಕೃಷಿ ಸಾಲವನ್ನು ವಿತರಿಸಲಾಗಿದ್ದು, ಇದರಲ್ಲಿ 2.5 ಲಕ್ಷ ಹೊಸ ರೈತರಿಗೆ ಸಾಲ ವಿತರಿಸಲಾಗಿದೆ. 2022-23ನೇ ಸಾಲಿನಲ್ಲಿ ಒಟ್ಟು 33 ಲಕ್ಷ ರೈತರಿಗೆ 24,000 ಕೋಟಿ ರೂ.ಗಳ ಕೃಷಿ ಸಾಲವನ್ನು ವಿತರಿಸುವ ಗುರಿ ಹೊಂದಿದ್ದು, ಇದರಲ್ಲಿ 3 ಲಕ್ಷ ಹೊಸ ರೈತರಿಗೆ ಸಾಲವನ್ನು ನೀಡಲಾಗುವುದು.**

69. ರಾಜ್ಯದಲ್ಲಿ ನಡೆಯುತ್ತಿರುವ ಸಹಕಾರಿ ವಲಯದ ಆಸ್ಪತ್ರೆಗಳನ್ನು ಬಲಪಡಿಸಲು ವಿಶೇಷ ನೆರವು ನೀಡಲಾಗುವುದು.

70. ಉತ್ತರ ಕರ್ನಾಟಕದ ಮಹತ್ವಾಕಾಂಕ್ಷಿ ಯೋಜನೆಯಾಗಿರುವ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಅನುಷ್ಠಾನಕ್ಕಾಗಿ ಪ್ರಸಕ್ತ ಸಾಲಿನಲ್ಲಿ 5,000 ಕೋಟಿ ರೂ.ಗಳ ಅನುದಾನವನ್ನು ಒದಗಿಸಿ, ಭೂ-ಸ್ವಾಧೀನ, ಪುನರ್ ವಸತಿ ಮತ್ತು ಪುನರ್ ನಿರ್ಮಾಣದ

ಕಾರ್ಯಗಳಿಗೆ ಆದ್ಯತೆ ನೀಡಿ, ಯೋಜನಾ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.

71. ಮಹದಾಯಿ ನ್ಯಾಯಾಧಿಕರಣದ ತೀರ್ಪಿನನ್ವಯ ಹಂಚಿಕೆಯಾದ ನೀರಿನ ಬಳಕೆಗೆ ರಾಜ್ಯದ ಕಳಸಾ ಮತ್ತು ಬಂಡೂರಿ ನಾಲಾ ತಿರುವು ಯೋಜನೆಗಳಿಗೆ ಕೇಂದ್ರ ಸರ್ಕಾರದ ಸಕ್ಷಮ ಪ್ರಾಧಿಕಾರಗಳ ಅಗತ್ಯ ತೀರುವಳಿಗಳನ್ನು ಪಡೆಯಲು ಕ್ರಮ ವಹಿಸಲಾಗುತ್ತಿದೆ. ಸದರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಪ್ರಸಕ್ತ ಸಾಲಿನಲ್ಲಿ 1,000 ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದು.

72. ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಪರಿಗಣಿಸುವಂತೆ ಕೇಂದ್ರ ಸಚಿವ ಸಂಪುಟಕ್ಕೆ ಕೇಂದ್ರ ಜಲಶಕ್ತಿ ಮಂತ್ರಾಲಯದ High Power Steering Committee ಯು ಶಿಫಾರಸ್ಸು ಮಾಡಿದ್ದು, ಈ ಯೋಜನೆ "ರಾಷ್ಟ್ರೀಯ ಯೋಜನೆ" ಮಾನ್ಯತೆ ಪಡೆದು, ಕೇಂದ್ರ ನೆರವಿನೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಚಿತ್ರದುರ್ಗ ಶಾಖಾ ಕಾಲುವೆಯ 60 ಕಿ.ಮೀ. ವರೆಗಿನ ಕಾಮಗಾರಿಗಳನ್ನು ಪೂರ್ಣಗೊಳಿಸಿ ಹೊಳಲ್ಕೆರೆ ಫೀಡರ್ ಕಾಲುವೆಯಡಿ ಬರುವ 28 ಕೆರೆಗಳನ್ನು ತುಂಬಿಸಲು ಹಾಗೂ ತರೀಕೆರೆ ಏತ ನೀರಾವರಿ ಕಾಮಗಾರಿಗಳ ಅಡಿಯಲ್ಲಿ 20,150 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಹಾಗೂ 79 ಕೆರೆಗಳನ್ನು ತುಂಬಿಸಲು ಕ್ರಮ ವಹಿಸಲಾಗುವುದು. ಸದರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಪ್ರಸಕ್ತ ಸಾಲಿನಲ್ಲಿ 3,000 ಕೋಟಿ ರೂ.ಗಳ ಅನುದಾನ ಒದಗಿಸಲಾಗಿದೆ.

73. ಕೇಂದ್ರ ಸರ್ಕಾರವು PMKSY-AIBP ಅಡಿಯಲ್ಲಿ 2021–26ನೇ ಅವಧಿಗೆ ಹೊಸದಾಗಿ ಸೇರ್ಪಡೆಗೊಳಿಸಲು ಪ್ರಸ್ತಾಪಿಸಿರುವ ಯೋಜನೆಗಳಲ್ಲಿ ಸನ್ನತ್ತಿ ಏತ ನೀರಾವರಿ ಯೋಜನೆ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–1 ಮತ್ತು 2ರಲ್ಲಿನ ಬೂದಿಹಾಳ ಪೀರಾಪುರ, ನಂದವಾಡಗಿ, ನಾರಾಯಣಪುರ (9A) ಕಾಲುವೆ ವಿಸ್ತರಣೆ ಯೋಜನೆಗಳು ಸೇರಿದ್ದು, ಕೇಂದ್ರ ಸರ್ಕಾರದಿಂದ ಅಗತ್ಯ ತೀರುವಳಿಗಳನ್ನು ಪಡೆದು ಕೇಂದ್ರ ಸಹಾಯಧನದೊಂದಿಗೆ ಯೋಜನೆಗಳನ್ನು ಶೀಘ್ರವಾಗಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.

74. ರಾಜ್ಯದ ಮಹತ್ವಾಕಾಂಕ್ಷಿ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಪ್ರಥಮ ಹಂತದ ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿ ಪ್ರಾಯೋಗಿಕವಾಗಿ ಚಾಲನೆಗೊಳಿಸಲಾಗುವುದು. ಯೋಜನೆಯ ಎರಡನೇ ಹಂತದ 260 ಕಿ.ಮೀ. ಉದ್ದದ ಗುರುತ್ವ ಕಾಲುವೆ ಟಿ.ಜಿ. ಹಳ್ಳಿ–ರಾಮನಗರ ಫೀಡರ್, ಮಧುಗಿರಿ ಫೀಡರ್ ಹಾಗೂ ಗೌರೀಬಿದನೂರು ಫೀಡರ್ ಕಾಲುವೆ ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಿ, ಮುಂದಿನ ವರ್ಷದ ಮುಂಗಾರು ಹಂಗಾಮಿನಲ್ಲಿ ನೀರು ಪೂರೈಸಲು ಕ್ರಮ ಜರುಗಿಸಲು ಹಾಗೂ ಯೋಜನೆಯ ಉಳಿಕೆ ಕಾಮಗಾರಿಗಳನ್ನು ಹಂತ ಹಂತವಾಗಿ ಕಾರ್ಯಗತಗೊಳಿಸಲು ಕ್ರಮವಹಿಸಲಾಗುವುದು. ಈ ಯೋಜನೆಯ ಅನುಷ್ಠಾನಕ್ಕೆ 3,000 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು.

75. ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನಾ ವರದಿಗೆ ಕೇಂದ್ರ ಸರ್ಕಾರದ ಸಕ್ಷಮ

ಪ್ರಾಧಿಕಾರಿಗಳ ತೀರುವಳಿಗಳನ್ನು ಪಡೆದು ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. ಈ ಯೋಜನೆಯ ಅನುಷ್ಠಾನಕ್ಕಾಗಿ ಪ್ರಸಕ್ತ ಸಾಲಿನಲ್ಲಿ 1,000 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು.

76. ತುಂಗಭದ್ರಾ ಜಲಾಶಯದಲ್ಲಿ ಹೂಳು ತುಂಬಿ ನೀರಿನ ಸಂಗ್ರಹಣೆಯಲ್ಲಿ ಉಂಟಾಗಿರುವ ಕೊರತೆಯನ್ನು ಸರಿದೂಗಿಸಲು ನವಲೆ ಬಳಿ ಒಂದು ಸಮತೋಲನಾ ಜಲಾಶಯವನ್ನು ನಿರ್ಮಿಸಲು ಯೋಜನಾ ವರದಿಯನ್ನು ಸಿದ್ಧಪಡಿಸಲಾಗುತ್ತಿದ್ದು, ಪ್ರಸ್ತಾವನೆ ಕುರಿತು ತೆಲಂಗಾಣ ಮತ್ತು ಆಂಧ್ರಪ್ರದೇಶ ರಾಜ್ಯಗಳೊಂದಿಗೆ ಸಮಾಲೋಚಿಸಿ ಯೋಜನೆಯನ್ನು ಕಾರ್ಯಗತಗೊಳಿಸಲು ಕ್ರಮವಹಿಸಲಾಗುವುದು. ಈ ಯೋಜನೆಯ ಅನುಷ್ಠಾನಕ್ಕಾಗಿ ಪ್ರಸಕ್ತ ಸಾಲಿನಲ್ಲಿ 1,000 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು.

77. ಪ್ರಸಕ್ತ ಸಾಲಿನಲ್ಲಿ ಪ್ರಗತಿಯಲ್ಲಿರುವ 14 ನೀರಾವರಿ ಯೋಜನೆಗಳಾದ ತುಂಗಾ ಮೇಲ್ದಂಡೆ, ಸೌಕೂರು, ಎಣ್ಣೆಹೊಳೆ, ಅಳವಂಡಿ-ಬೆಟಗೇರಿ, ಕಲ್ಲುವಡ್ಡಹಳ್ಳ ಬಹದ್ದೂರ್ ಬಂಡಿ, ತಿಮ್ಮಾಪುರ, ವೆಂಕಟೇಶ್ವರ, ಗೊಡಚಿನಮಲ್ಕಿ, ಕಿಣೆಯಿ, ನಾಗರಬೆಟ್ಟ, ಯಳ್ಳಿಗುತ್ತಿ ಯೋಜನೆಗಳು ಮತ್ತು ಕಾರಂಜ ಹಾಗೂ ಬೆಣ್ಣೆತೋರಾ ನಾಲಾಗಳ ಆಧುನೀಕರಣ ಯೋಜನೆಗಳನ್ನು ಪೂರ್ಣಗೊಳಿಸಿ ಬಾಕಿ ಇರುವ 35,319 ಹೆಕ್ಟೇರ್ ಪ್ರದೇಶ ನೀರಾವರಿ ಸೌಲಭ್ಯ ಕಲ್ಪಿಸಲಾಗುವುದು.

78. ಕಾಳೀ ನದಿಯಿಂದ ನೀರನ್ನು ಬಳಸಿಕೊಂಡು ಉತ್ತರ ಕರ್ನಾಟಕದ ಐದು ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವ ಯೋಜನೆಯನ್ನು ರೂಪಿಸಲಾಗುವುದು.

79. ರಾಜ್ಯದಲ್ಲಿ ನೀರಾವರಿ ಪ್ರದೇಶವನ್ನು ಹೆಚ್ಚಿಸಲು ನಮ್ಮ ಸರ್ಕಾರವು 2021-22ನೇ ಸಾಲಿನಲ್ಲಿ 8,774 ಕೋಟಿ ರೂ.ಗಳ ಹೊಸ ನೀರಾವರಿ ಯೋಜನೆಗಳನ್ನು ಅನುಮೋದಿಸಿದ್ದು, ತ್ವರಿತವಾಗಿ ಪೂರ್ಣಗೊಳಿಸಲು ಕಾರ್ಯಪ್ರವೃತ್ತವಾಗಿದೆ. ನೀರಿನ ಲಭ್ಯತೆಗನುಗುಣವಾಗಿ ಹೊಸ ಯೋಜನೆಗಳಿಗೆ ರೂಪುರೇಷೆಗಳನ್ನು ಸಿದ್ಧಪಡಿಸಲಾಗುವುದು.

80. ಪಶ್ಚಿಮಾಭಿಮುಖವಾಗಿ ಹರಿಯುವ ನದಿಗಳಿಗೆ ಅಡ್ಡಲಾಗಿ ಕಿಂಡಿ ಅಣೆಕಟ್ಟು ನಿರ್ಮಿಸಿ ಸಮುದ್ರಕ್ಕೆ ಸೇರುವ ನೀರನ್ನು ತಡೆದು ಕೃಷಿ ಚಟುವಟಿಕೆ ಹಾಗೂ ಕುಡಿಯುವ ನೀರಿಗೆ ಉಪಯೋಗಿಸಲು ಉದ್ದೇಶಿಸಿರುವ ಪಶ್ಚಿಮ ವಾಹಿನಿ ಯೋಜನೆಯಡಿ ಮೊದಲನೇ ಹಂತದ ಕಾಮಗಾರಿಗಳನ್ನು 500 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದೆ.

81. ರಾಜ್ಯದ ಕರಾವಳಿ ಪ್ರದೇಶದಲ್ಲಿ ನದಿಗಳ ಪ್ರವಾಹ ಉಂಟಾದಾಗ ಮತ್ತು ಭಾರೀ ಅಲೆಗಳಿಂದ ಹಿಮ್ಮುಖವಾಗಿ ನುಗ್ಗುವ ಉಪ್ಪು ನೀರನ್ನು ತಡೆಗಟ್ಟಲು ಉದ್ದೇಶಿಸಿರುವ ಖಾರ್ ಲ್ಯಾಂಡ್ ಯೋಜನೆಯಡಿ 1,500 ಕೋಟಿ ರೂ.ಗಳ ಅಂದಾಜು ಮೊತ್ತದ ಮಾಸ್ಟರ್‌ಪ್ಲಾನ್‌ಗೆ ಒಪ್ಪಿಗೆ ನೀಡಿದ್ದು, ಸದರಿ ಯೋಜನೆಯಡಿ ಪ್ರಸ್ತುತ ಉತ್ತರ ಕನ್ನಡ ಜಿಲ್ಲೆಯಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ

ಈ ಯೋಜನೆಯನ್ನು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿಯೂ ಸಹ ಅನುಷ್ಠಾನಗೊಳಿಸಲಾಗುವುದು.

82. ರಾಜ್ಯದ ಕೆರೆಗಳ ಸಮಗ್ರ ಅಭಿವೃದ್ಧಿಯನ್ನು 500 ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಳ್ಳಲು ಕ್ರಿಯಾ ಯೋಜನೆಯನ್ನು ರೂಪಿಸಲಾಗುವುದು ಹಾಗೂ ಇದರಲ್ಲಿ ಪ್ರವಾಹದಿಂದ ಹಾನಿಯಾಗಿರುವ ಕೆರೆಗಳ ದುರಸ್ತಿಯನ್ನು ಕೈಗೊಂಡು ಸಂಗ್ರಹಣಾ ಸಾಮರ್ಥ್ಯವನ್ನು ಹೆಚ್ಚಿಸಲು 200 ಕೋಟಿ ರೂ.ಗಳನ್ನು ಮೀಸಲಿಡಲಾಗುವುದು.

83. ಬೆಂಗಳೂರು ನಗರದ ವೃಷಭಾವತಿ ಕಣಿವೆಯಿಂದ ಸಂಸ್ಕರಿಸಿದ 308 ದಶಲಕ್ಷ ಲೀಟರ್ ನೀರನ್ನು ಬೆಂಗಳೂರು ನಗರ ಮತ್ತು ಗ್ರಾಮಾಂತರ, ತುಮಕೂರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ 234 ಕೆರೆಗಳಿಗೆ ತುಂಬಿಸುವ ಯೋಜನೆಯನ್ನು ಮೊದಲ ಹಂತದಲ್ಲಿ 865 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗಿದೆ.

84. ಕೋಲಾರ ಜಿಲ್ಲೆಯ ಕೆರೆಗಳನ್ನು ತುಂಬಿಸುವ ಕೆ.ಸಿ.ವ್ಯಾಲಿ ಯೋಜನೆಯ ಮೊದಲನೇ ಹಂತವು 1,342 ಕೋಟಿ ರೂ.ಗಳ ವೆಚ್ಚದಲ್ಲಿ ಪೂರ್ಣಗೊಳಿಸಿದ್ದು, ಎರಡನೇ ಹಂತವನ್ನು 455 ಕೋಟಿ ರೂ.ಗಳ ಮೊತ್ತದಲ್ಲಿ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ.

85. ಕೇಂದ್ರ ಸರ್ಕಾರದ ಅಟಲ್ ಭೂಜಲ ಯೋಜನೆಯನ್ನು ಅತಿಯಾದ ಅಂತರ್ಜಲ ಬಳಕೆಯಿಂದಾಗಿ ನೀರಿನ ಸಮಸ್ಯೆ ಎದುರಿಸುತ್ತಿರುವ ರಾಜ್ಯದ 14 ಜಿಲ್ಲೆಗಳ 1,199 ಗ್ರಾಮ ಪಂಚಾಯಿತಿಗಳಲ್ಲಿ ಸಮುದಾಯ ಸಹಭಾಗಿತ್ವದೊಂದಿಗೆ ವೈಜ್ಞಾನಿಕ ಮತ್ತು ಸುಸ್ಥಿರ ಅಂತರ್ಜಲ ನಿರ್ವಹಣಾ ಪದ್ಧತಿಗಳ ಮೂಲಕ

ಅಂತರ್ಜಲ ಸಂಪನ್ಮೂಲದ ನಿರ್ವಹಣೆಯನ್ನು 1,202 ಕೋಟಿ ರೂ. ಮೊತ್ತದಲ್ಲಿ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗಿದೆ.

86. ಅಂತರ್ಜಲದ ವಿವೇಚನಾರಹಿತ ಬಳಕೆಯನ್ನು ತಪ್ಪಿಸಲು ಆಯಾ ಪ್ರದೇಶದ ಅಂತರ್ಜಲ ಲಭ್ಯವಾಗುವ ಆಳ, ಇಳುವರಿ ಹಾಗೂ ಅಂತರ್ಜಲ ಮರುಪೂರಣಗೊಳ್ಳುವ ಮಾಹಿತಿಯನ್ನು ಒಳಗೊಂಡ ಅಂತರ್ಜಲ ಲಭ್ಯತಾ ನಕ್ಷೆಗಳನ್ನು ತಯಾರಿಸುವ ಯೋಜನೆಯನ್ನು ಪ್ರಾಯೋಗಿಕವಾಗಿ ಒಂದು ಜಿಲ್ಲೆಯಲ್ಲಿ ಜಾರಿಗೊಳಿಸಲಾಗುವುದು.

87. **ಕೃಷಿ ಮತ್ತು ಪೂರಕ ಚಟುವಟಿಕೆಗಳ ವಲಯಕ್ಕೆ 2022-23ನೇ ಸಾಲಿನಲ್ಲಿ ಒಟ್ಟಾರೆಯಾಗಿ 33,700 ಕೋಟಿ ರೂ. ಅನುದಾನ ಒದಗಿಸಲಾಗಿದೆ.**

## ವಲಯ 2: ಸರ್ವೋದಯ ಮತ್ತು ಕ್ಷೇಮಾಭಿವೃದ್ಧಿ

***ಮರಕ್ಕೆ ಬಾಯಿ ಬೇರೆಂದು ತಳಕ್ಕೆ ನೀರೆರೆದರೆ***
***ಮೇಲೆ ಪಲ್ಲವಿಸಿತ್ತು ನೋಡಾ!***

– ***ಬಸವಣ್ಣ***

ಎಲ್ಲಾ ದುರ್ಬಲ ವರ್ಗದ ಜನರು, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಏಳಿಗೆಯಾಗಬೇಕು ಎಂಬ ಧ್ಯೇಯ ನಮ್ಮದು. ಈ ವರ್ಗಗಳ ಜನರ ಅವಶ್ಯಕತೆಗಳನ್ನು ಆಧರಿಸಿ, ನಮ್ಮ ಸರ್ಕಾರ ಕಾರ್ಯಕ್ರಮಗಳನ್ನು ರೂಪಿಸಿದೆ. ಆರೋಗ್ಯ, ಶಿಕ್ಷಣ ಹಾಗೂ ಪೌಷ್ಟಿಕತೆಯ ವಿಚಾರದಲ್ಲಿ ಅತ್ಯಂತ ಹಿಂದುಳಿದ ತಾಲ್ಲೂಕುಗಳಿಗೆ ಹೆಚ್ಚಿನ ಮಹತ್ವ ನೀಡಿ, ಅವುಗಳನ್ನು

ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅವರ ಸರ್ವತೋಮುಖ ಅಭಿವೃದ್ಧಿಗೆ ವಸ್ತು ಸ್ಥಿತಿ ಆಧರಿಸಿ, ಹೊಸ ಚಿಂತನೆಯೊಂದಿಗೆ ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ನಿಖರ ಹೆಜ್ಜೆಗಳನ್ನಿಡುತ್ತಿದ್ದೇವೆ.

88. **ಮೊಟ್ಟ ಮೊದಲ ಬಾರಿಗೆ ನಮ್ಮ ಸರ್ಕಾರವು ವಿವಿಧ ಅಭಿವೃದ್ಧಿ ಸೂಚಕಗಳಲ್ಲಿ ರಾಜ್ಯ ಸರಾಸರಿಗಿಂತ ಕಡಿಮೆ ಸಾಧನೆ ಮಾಡುತ್ತಿರುವ ತಾಲ್ಲೂಕುಗಳನ್ನು ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳೆಂದು ಗುರುತಿಸಿ, ಈ ತಾಲ್ಲೂಕುಗಳ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಲಿದೆ. ವಿವಿಧ ಇಲಾಖೆಗಳ ಯೋಜನೆಗಳಲ್ಲಿ ಹೆಚ್ಚಿನ ಆದ್ಯತೆಯನ್ನು ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳಿಗೆ ನೀಡಲಾಗುವುದು. ಇದರನ್ವಯ 93 ತಾಲ್ಲೂಕುಗಳಲ್ಲಿ ಶಿಕ್ಷಣ ಗುಣಮಟ್ಟವನ್ನು ವೃದ್ಧಿಸಲು, 100 ತಾಲ್ಲೂಕುಗಳಲ್ಲಿ ಆರೋಗ್ಯ ಸೇವೆಯನ್ನು ಬಲಪಡಿಸಲು ಮತ್ತು 102 ತಾಲ್ಲೂಕುಗಳಲ್ಲಿ ಮಕ್ಕಳ ಅಪೌಷ್ಟಿಕತೆ ನಿವಾರಿಸಲು ಒಟ್ಟಾರೆ 3,000 ಕೋಟಿ ರೂ. ವೆಚ್ಚದಲ್ಲಿ ಫಲಿತಾಂಶ ಕೇಂದ್ರಿತ ಪ್ರಯತ್ನಗಳನ್ನು ಮಾಡಲಾಗುವುದು.**

- ಅ. **ಹೆಚ್ಚಿನ ಕಾರ್ಯದೊತ್ತಡವಿರುವ 100 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು 25 ಹಾಸಿಗೆಯ ಮಾದರಿ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಎರಡು ವರ್ಷಗಳಲ್ಲಿ ಒಟ್ಟಾರೆ 1,000 ಕೋಟಿ ರೂ. ವೆಚ್ಚದಲ್ಲಿ ಉನ್ನತೀಕರಿಸಲಾಗುವುದು.**
- ಆ. **ಲೋಕೋಪಯೋಗಿ ಇಲಾಖೆಗೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ. ಯೋಜನೆಯಡಿ ಒದಗಿಸಿದ ಅನುದಾನದಿಂದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿದ್ಯಾರ್ಥಿಗಳಿಗೆ**

**100 "ಡಾ. ಬಿ. ಆರ್. ಅಂಬೇಡ್ಕರ್ ವಿದ್ಯಾರ್ಥಿನಿಲಯ"ಗಳನ್ನು ಹಾಗೂ 10 ಕ್ರೈಸ್ ವಸತಿ ಶಾಲೆಗಳ ಕಟ್ಟಡಗಳನ್ನು 750 ಕೋಟಿ ರೂ. ವೆಚ್ಚದಲ್ಲಿ ಲೋಕೋಪಯೋಗಿ ಇಲಾಖೆಯ ಮುಖಾಂತರ ನಿರ್ಮಿಸಲಾಗುವುದು.**

ಇ. **165 ಕೋಟಿ ರೂ.ಗಳ ವೆಚ್ಚದಲ್ಲಿ ಬಾಡಿಗೆ ಕಟ್ಟಡಗಳಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 50 "ಕನಕದಾಸ" ವಿದ್ಯಾರ್ಥಿನಿಲಯಗಳಿಗೆ ಸುಸಜ್ಜಿತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು.**

ಈ. ಅಪೌಷ್ಟಿಕತೆಯನ್ನು ನಿವಾರಿಸಲು ವಿವಿಧ ಇಲಾಖೆಗಳ ಕಾರ್ಯಕ್ರಮಗಳನ್ನು ಸಮನ್ವಯಿಸಿ ಕ್ರಮ ವಹಿಸಲಾಗುವುದು. ಸೃಷ್ಟಿ ಮತ್ತು ಕ್ಷೀರಭಾಗ್ಯ ಯೋಜನೆಯಡಿಯಲ್ಲಿ ತೀವ್ರ ಅಪೌಷ್ಟಿಕ ಮಕ್ಕಳಿಗೆ ನೀಡುತ್ತಿರುವ ಸೌಲಭ್ಯಗಳನ್ನು ಸಾಧಾರಣ ಅಪೌಷ್ಟಿಕ ಮಕ್ಕಳಿಗೂ ಪ್ರಸಕ್ತ ಸಾಲಿನಿಂದ ನೀಡಲಾಗುವುದು.

ಉ. ಅಪೌಷ್ಟಿಕ ಮಕ್ಕಳಿಗೆ ಆರೈಕೆಯನ್ನು ಒದಗಿಸಲು ಈಗಾಗಲೇ ಸ್ಥಾಪಿಸಲಾಗಿರುವ 32 ಜಿಲ್ಲಾ ಕೇಂದ್ರಗಳು ಹಾಗೂ 49 ತಾಲ್ಲೂಕು ಕೇಂದ್ರಗಳ ಜೊತೆಗೆ ಹೆಚ್ಚುವರಿಯಾಗಿ 37 ಪೌಷ್ಟಿಕ ಪುನರ್ವಸತಿ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

ಊ. ಸ್ವಂತ ಕಟ್ಟಡಗಳಿಲ್ಲದಿರುವ 1,000 ಅಂಗನವಾಡಿಗಳಿಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯೊಂದಿಗೆ ಸಂಯೋಜಿಸಿ ಕಟ್ಟಡಗಳನ್ನು ನಿರ್ಮಿಸಲಾಗುವುದು.

ಈ ಉದ್ದೇಶಕ್ಕಾಗಿ 50 ಕೋಟಿ ರೂ.ಗಳ ಮೊತ್ತವನ್ನು ಹಂಚಿಕೆ ಮಾಡಲಾಗಿದೆ.

89. **ರಾಜ್ಯದ ಸರ್ಕಾರಿ ಶಾಲೆಗಳಲ್ಲಿನ ಮೂಲಸೌಕರ್ಯ ಅಭಿವೃದ್ಧಿಗೆ 500 ಕೋಟಿ ರೂ.ಗಳನ್ನು ಒದಗಿಸಲಾಗುವುದು. ಈ ಅನುದಾನದಡಿ ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳಿಗೆ ಆದ್ಯತೆ ನೀಡಲಾಗುವುದು.**

90. ರಾಷ್ಟ್ರೀಯ ಶಿಕ್ಷಣ ನೀತಿ–2020ರ ಮಾರ್ಗಸೂಚಿಯಂತೆ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಕರ ಶಿಕ್ಷಣ ಹಾಗೂ ವಯಸ್ಕರ ಶಿಕ್ಷಣ ಕ್ಷೇತ್ರಗಳಿಗೆ ನೂತನ ಪಠ್ಯಕ್ರಮವನ್ನು ರಚಿಸಲಾಗುವುದು.

91. **ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಮಟ್ಟವನ್ನು ಉತ್ತಮಪಡಿಸಲು ಹೋಬಳಿ ಮಟ್ಟದಲ್ಲಿ ಮೂಲಭೂತ ಸೌಕರ್ಯವಿರುವ ಶಾಲೆಗಳನ್ನು "ಮಾದರಿ ಶಾಲೆ" ಗಳಾಗಿ ಉನ್ನತೀಕರಿಸಲಾಗುವುದು.**

92. ಸರ್ಕಾರಿ ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಪೀಠೋಪಕರಣ ಒದಗಿಸಲು 100 ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದು.

93. ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಂದಿದ ಆಯ್ದ ಪ್ರೌಢಶಾಲೆಗಳನ್ನು ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗುವುದು.

94. 2021–22ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ 15,000 ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು

ಅನುಮೋದಿಸಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. ಶಿಕ್ಷಕರ ಖಾಲಿ ಹುದ್ದೆಗಳಿಗೆ ನೇರ ನೇಮಕಾತಿ ಆಗುವವರೆಗೆ ಸುಮಾರು 27,000 ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುವ ಮೂಲಕ ಮಕ್ಕಳ ವಿದ್ಯಾಭ್ಯಾಸಕ್ಕೆ ಯಾವುದೇ ತೊಂದರೆಯಾಗದಂತೆ ನಿರ್ವಹಿಸಲಾಗುತ್ತದೆ.

95. ರಾಷ್ಟ್ರೀಯ ಶಿಕ್ಷಣ ನೀತಿ, 2020ರನ್ವಯ ಎಲ್ಲಾ 3 ರಿಂದ 6ನೇ ವಯೋಮಾನದ ಮಕ್ಕಳಿಗೆ ಗುಣಮಟ್ಟದ ಪೂರ್ವ ಪ್ರಾಥಮಿಕ ಶಿಕ್ಷಣ ಮತ್ತು ಆರೈಕೆ ನೀಡಲು ಪೂರಕವಾಗಿ ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮನ್ವಯದೊಂದಿಗೆ 20,000 ಅಂಗನವಾಡಿಗಳಲ್ಲಿ 30 ಕೋಟಿ ರೂ.ಗಳ ವೆಚ್ಚದಲ್ಲಿ ನೂತನ ಪಠ್ಯಕ್ರಮವನ್ನು ಜಾರಿಗೊಳಿಸಲಾಗುವುದು.

96. ಲೋಕ ಶಿಕ್ಷಣ ನಿರ್ದೇಶನಾಲಯವು ಹಮ್ಮಿಕೊಂಡಿರುವ ಕಾರ್ಯಕ್ರಮಗಳನ್ನು ಇನ್ನು ಮುಂದೆ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಮುಂದುವರೆಸಿ ಮುಂದಿನ 2 ವರ್ಷಗಳಲ್ಲಿ ಒಂದು ಸಾವಿರ ಗ್ರಾಮಪಂಚಾಯಿತಿಗಳನ್ನು ಸಂಪೂರ್ಣ ಸಾಕ್ಷರ ಗ್ರಾಮಪಂಚಾಯತ್‌ಗಳನ್ನಾಗಿ ಮಾಡಲಾಗುವುದು.

97. ಸಾರ್ವಜನಿಕ ಗ್ರಂಥಾಲಯ ಇಲಾಖೆ ವತಿಯಿಂದ ರಾಜ್ಯಾದ್ಯಂತ ಡಿಜಿಟಲ್ ಗ್ರಂಥಾಲಯಗಳನ್ನು ಸ್ಥಾಪಿಸಲಾಗುವುದು ಹಾಗೂ ಎಲ್ಲಾ ಇಲಾಖೆಗಳ ವತಿಯಿಂದ ಈಗಾಗಲೇ ಸ್ಥಾಪಿಸಿರುವ ಡಿಜಿಟಲ್ ಗ್ರಂಥಾಲಯಗಳನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯೊಂದಿಗೆ ಸಂಯೋಜಿಸಲಾಗುವುದು.

98. **ಕೆ.ಪಿ.ಎಸ್.ಸಿ., ಯು.ಪಿ.ಎಸ್.ಸಿ., ಎಸ್.ಎಸ್.ಸಿ., ಬ್ಯಾಂಕಿಂಗ್, ರೈಲ್ವೆ, ಸಿ.ಡಿ.ಎಸ್., NEET, JEE ಮುಂತಾದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ "ಮುಖ್ಯಮಂತ್ರಿ ವಿದ್ಯಾರ್ಥಿ ಮಾರ್ಗದರ್ಶಿನಿ" ಎಂಬ ಹೊಸ ಯೋಜನೆಯಡಿ ವಿದ್ಯಾರ್ಥಿಗಳಿಗೆ ಆನ್‌ಲೈನ್ ವೇದಿಕೆಯ ಮೂಲಕ ಉಚಿತ ಕೋಚಿಂಗ್ ಸೌಲಭ್ಯವನ್ನು ನೀಡಲಾಗುವುದು.**

99. ಮಹಿಳಾ ಧೀಮಂತಿಕೆಯ ದ್ಯೋತಕರಾದ ಶ್ರೀಮತಿ ಸಾವಿತ್ರಿಬಾಯಿ ಫುಲೆಯವರ ಹೆಸರಿನಲ್ಲಿ ರಾಜ್ಯಮಟ್ಟದ "ಆದರ್ಶ ಶಿಕ್ಷಕ/ಶಿಕ್ಷಕಿ" ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುವುದು.

100. **ಅಕ್ಷರ ದಾಸೋಹ ಯೋಜನೆಯಡಿ ಬಿಸಿಯೂಟ ಕಾರ್ಯಕರ್ತರ ಸೇವೆಯನ್ನು ಗುರುತಿಸಿ ಬಿಸಿಯೂಟ ತಯಾರಕರಿಗೆ ಹಾಗೂ ಸಹಾಯಕರಿಗೆ ನೀಡುವ ಗೌರವಧನವನ್ನು 1,000 ರೂ.ಗಳಷ್ಟು ಹೆಚ್ಚಿಸಲಾಗುವುದು.**

101. ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣಾ ಕ್ರಮಗಳೊಂದಿಗೆ ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ರಾಷ್ಟ್ರದಲ್ಲಿ ಜಾರಿಗೊಳಿಸಿದ ಮೊದಲ ರಾಜ್ಯ ನಮ್ಮದಾಗಿದೆ. ಉನ್ನತ ಶಿಕ್ಷಣದ ಗುಣಮಟ್ಟವನ್ನು ಉತ್ತಮಪಡಿಸಿ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವುದಕ್ಕೆ ನಮ್ಮ ಸರ್ಕಾರವು ಬದ್ಧವಾಗಿದೆ.

102. **ಅತ್ಯುನ್ನತ ಗುಣಮಟ್ಟದ ತಾಂತ್ರಿಕ ಬೋಧನೆ-ಕಲಿಕೆಗಳಿಗೆ ಹಾಗೂ ಸಂಶೋಧನೆಯನ್ನು ಉತ್ತೇಜಿಸಲು ರಾಜ್ಯದ ಏಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು Karnataka Institute of Technology ಗಳನ್ನಾಗಿ ಉನ್ನತೀಕರಿಸಿ, ಪ್ರತಿಷ್ಠಿತ ವಿದೇಶಿ ವಿಶ್ವವಿದ್ಯಾಲಯಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗುವುದು.**

103. **ಕಾಲೇಜುಗಳ ಮೇಲ್ವಿಚಾರಣೆಯನ್ನು ಸುಧಾರಿಸಲು ರಾಜ್ಯದ ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶಗಳಲ್ಲಿ ವಿನೂತನ ಮಾದರಿಯ ಏಳು ವಿಶ್ವವಿದ್ಯಾಲಯಗಳನ್ನು ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುವುದು. ಈ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಕಾರ್ಯನಿರ್ವಹಿಸಲಿದೆ. ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ ತಲಾ 2 ಕೋಟಿ ರೂ.ಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸಲಿವೆ.**

104. ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಬೋಧನಾ ಅವಧಿಯನ್ನು ಹೆಚ್ಚಿಸಿ ಮಾಸಿಕ ಗೌರವಧನವನ್ನು ಹಾಲಿ 11,000 ರೂ. ಗಳಿಂದ 32,000 ರೂ. ವರೆಗೆ ಹೆಚ್ಚಿಸಲಾಗಿದೆ.

105. ಕರ್ನಾಟಕದ ಶ್ರೀಮಂತ ಸಾಹಿತ್ಯ, ಸಂಸ್ಕೃತಿ ಹಾಗೂ ಪರಂಪರೆಯ ಅಧ್ಯಯನ ಕೇಂದ್ರವಾಗಿರುವ ಹಂಪಿಯ ಕನ್ನಡ ವಿಶ್ವವಿದ್ಯಾಲಯವನ್ನು ಇನ್ನಷ್ಟು ಬಲಪಡಿಸಲು ಹಾಗೂ ಮತ್ತಷ್ಟು ರಚನಾತ್ಮಕ ಚಟುವಟಿಕೆಗಳನ್ನು ಕೈಗೊಳ್ಳಲು ರೂಪುರೇಷೆಗಳನ್ನು ಸಿದ್ಧಪಡಿಸಲಾಗುವುದು.

106. ರಾಯಚೂರಿನಲ್ಲಿ ಈಗಾಗಲೇ ಸ್ಥಾಪಿಸಲಾಗಿರುವ ವಿಶ್ವವಿದ್ಯಾಲಯಕ್ಕೆ ಪ್ರಯೋಗಶಾಲೆಯನ್ನು ಒದಗಿಸಲು 15 ಕೋಟಿ ರೂ.ಗಳನ್ನು ನೀಡಲಾಗುವುದು.

107. ರಾಜ್ಯದ 215 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು NAAC ಮಾನ್ಯತಾ ಪ್ರಕ್ರಿಯೆಗೆ ಒಳಪಡಿಸಲು ಹಾಗೂ 40 ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು 04 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕೋರ್ಸ್‌ಗಳನ್ನು NBA ಮಾನ್ಯತೆಗೆ ಒಳಪಡಿಸಲು ಕ್ರಮ ಕೈಗೊಳ್ಳಲಾಗಿದೆ.

108. ಕೋವಿಡ್-19 ನಿರ್ವಹಣೆಗೆ ನಮ್ಮ ಸರ್ಕಾರ ಹೆಚ್ಚಿನ ಮಹತ್ವ ನೀಡಿದೆ. ಮೂರನೇ ಅಲೆಯ ಸಮರ್ಪಕ ನಿರ್ವಹಣೆಗಾಗಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ 2,240 ಕೋಟಿ ರೂ. ಗಳ ಪೂರಕ ಅನುದಾನವನ್ನು ಒದಗಿಸಲಾಗಿದೆ. ರಾಜ್ಯದಲ್ಲಿ ಒಟ್ಟಾರೆ 10 ಕೋಟಿಗಿಂತ ಹೆಚ್ಚು ಡೋಸ್ ಲಸಿಕೆಯನ್ನು ನೀಡಲಾಗಿದೆ.

109. ಸುಸ್ಥಿರ ಅಭಿವೃದ್ಧಿ ಗುರಿ 2030ರನ್ವಯ ತಾಯಂದಿರ ಮರಣ ಪ್ರಮಾಣವನ್ನು 70ಕ್ಕಿಂತಲೂ ಕಡಿಮೆಗೆ ಹಾಗೂ ಶಿಶು ಮರಣ ಪ್ರಮಾಣವನ್ನು 10ಕ್ಕಿಂತಲೂ ಕಡಿಮೆಗೆ ಇಳಿಸಬೇಕಾಗಿದ್ದು, ಈ ಗುರಿಯನ್ನು ತಲುಪಲು ನಮ್ಮ ಸರ್ಕಾರವು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ.

110. **ರಾಜ್ಯದ ಪ್ರಮುಖ ನಗರಗಳಲ್ಲಿ 438 "ನಮ್ಮ ಕ್ಲಿನಿಕ್"ಗಳನ್ನು ಸ್ಥಾಪಿಸಲಾಗುವುದು. ಬೆಂಗಳೂರಿನಲ್ಲಿ ಎಲ್ಲಾ ವಾರ್ಡ್‌ಗಳಲ್ಲಿ ಇವುಗಳನ್ನು ಸ್ಥಾಪಿಸಲಾಗುವುದು. ಈ ಕ್ಲಿನಿಕ್‌ಗಳಲ್ಲಿ ಅಸಾಂಕ್ರಾಮಿಕ ರೋಗಗಳ ಪತ್ತೆ ಮತ್ತು ಹೆಚ್ಚಿನ ಚಿಕಿತ್ಸೆಗಾಗಿ ತಜ್ಞರ ಬಳಿ ಕಳುಹಿಸುವ ಸೇವೆ ಒದಗಿಸಲಾಗುವುದು.**

111. ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ 2022-23ನೇ ಸಾಲಿನಲ್ಲಿ 300 ಮಹಿಳಾ ಸ್ವಾಸ್ಥ್ಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಇವು ಮಹಿಳಾ ಸಂಬಂಧಿತ ಆರೋಗ್ಯ

ಸಮಸ್ಯೆಗಳಿಗೆ ಸಲಹೆಯನ್ನು ಪಡೆಯಲು ಹಾಗೂ ಮಹಿಳಾ ಕ್ಷೇಮ ಕೇಂದ್ರಗಳಾಗಿ ಕಾರ್ಯನಿರ್ವಹಿಸಲಿವೆ.

112. **ತಾಲ್ಲೂಕು ಮಟ್ಟದಲ್ಲಿ ಸುಸಜ್ಜಿತ ವೈದ್ಯಕೀಯ ಸೇವೆಗಳನ್ನು ಒದಗಿಸಲು ರಾಜ್ಯದ ಏಳು ತಾಲ್ಲೂಕು ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು.**

113. ಪ್ರಸ್ತುತ ನೀಡುತ್ತಿರುವ ಉಚಿತ ಡಯಾಲಿಸಿಸ್ ಸೇವೆಯನ್ನು ಮತ್ತಷ್ಟು ಬಲಪಡಿಸಿ ಪ್ರತಿ ಮಾಹೆಗೆ 30,000 ಡಯಾಲಿಸಿಸ್ ಸೈಕಲ್‌ಗಳನ್ನು 60,000 ಸೈಕಲ್‌ಗಳಿಗೆ ಹೆಚ್ಚಿಸಲಾಗುವುದು. ಇದಕ್ಕಾಗಿ 20 ಕೋಟಿ ರೂ.ಗಳ ಹೆಚ್ಚುವರಿ ಅನುದಾನವನ್ನು ಒದಗಿಸಲಾಗುವುದು.

114. ರಾಜ್ಯದ 75 ತಾಲ್ಲೂಕು ಆಸ್ಪತ್ರೆಗಳನ್ನು ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯೊಂದಿಗೆ ಮ್ಯಾಪಿಂಗ್ ಮಾಡಿ ಗ್ರಾಮೀಣ ಜನರಿಗೆ ತಾಲ್ಲೂಕು ಮಟ್ಟದಲ್ಲಿಯೇ ಹೃದಯ ಸಂಬಂಧಿ ಚಿಕಿತ್ಸೆ ಒದಗಿಸಲಾಗುವುದು.

115. **ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ಗಳನ್ನು ಜಿಲ್ಲಾ ಮಟ್ಟದಲ್ಲಿ ಪ್ರಾರಂಭಿಸಲು ಅನುವಾಗುವಂತೆ 200ಕ್ಕೂ ಹೆಚ್ಚು ಹಾಸಿಗೆಗಳ ಸಾಮರ್ಥ್ಯವಿರುವ ಸರ್ಕಾರಿ ಆಸ್ಪತ್ರೆಗಳನ್ನು ಎನ್.ಎಂ.ಸಿ. ಅನುಮೋದನೆ ಪಡೆದು ಬೋಧನಾ ಆಸ್ಪತ್ರೆಗಳನ್ನಾಗಿ ಪರಿವರ್ತಿಸಲಾಗುವುದು. ಈ ವರ್ಷ ತುಮಕೂರು ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯಕೀಯ ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲಾಗುವುದು.**

116. ವಿದ್ಯಾರ್ಥಿನಿಯರಲ್ಲಿ ಋತು ಚಕ್ರದ ನೈರ್ಮಲ್ಯವನ್ನು ಕಾಪಾಡಲು ಕ್ರಮವಹಿಸಲಾಗುವುದು. ಶುಚಿ ಯೋಜನೆಯಡಿಯಲ್ಲಿ

ಸುಮಾರು 19 ಲಕ್ಷ ವಿದ್ಯಾರ್ಥಿನಿಯರಿಗೆ ಸ್ಯಾನಿಟರಿ ನ್ಯಾಪಕಿನ್‌ಗಳನ್ನು ವಿತರಿಸುತ್ತಿದ್ದು, ಸದರಿ ಯೋಜನೆಯನ್ನು ಉತ್ತಮಪಡಿಸಲು ಮಹಿಳಾ ಸ್ವಸಹಾಯ ಗುಂಪುಗಳೊಂದಿಗೆ ಕೈಜೋಡಿಸಲಾಗುವುದು. ಅಲ್ಲದೇ, ದಕ್ಷಿಣ ಕನ್ನಡ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಮಧ್ಯಪ್ರದೇಶ ರಾಜ್ಯದ ಮಾದರಿಯಲ್ಲಿ ಮೆನ್‌ಸ್ಟ್ರುಯಲ್ ಕಪ್ (ಮುಟ್ಟಿನ ಕಪ್) ಗಳನ್ನು ವಿತರಿಸಲಾಗುವುದು.

117. ಸಾಮಾನ್ಯ ಜನರ ಮೆದುಳಿನ ಆರೋಗ್ಯವನ್ನು ಕಾಪಾಡಲು ಹಾಗೂ ಜಾಗೃತಿ ಮೂಡಿಸಲು ನಿಮ್ಹಾನ್ಸ್ ಬೆಂಬಲದೊಂದಿಗೆ ಪ್ರಾಯೋಗಿಕವಾಗಿ ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ನಗರ ಜಿಲ್ಲೆಗಳಲ್ಲಿ ಮೆದುಳು ಆರೋಗ್ಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು.

118. ಅಪಘಾತಕ್ಕೊಳಗಾದ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಗಂಟೆಗಳೊಳಗಾಗಿ 76 ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಗಳನ್ನು ಒದಗಿಸುವ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ಪ್ರಾರಂಭಿಸಲಾಗುವುದು.

119. ಗ್ರಾಮೀಣ ಪ್ರದೇಶಗಳಲ್ಲಿ ಮನೆ ಬಾಗಿಲಿಗೆ ಅತ್ಯುತ್ತಮ ವೈದ್ಯಕೀಯ ಸೇವೆ ಒದಗಿಸುವ ಸಲುವಾಗಿ ಬೀದರ್, ಚಾಮರಾಜನಗರ, ಹಾವೇರಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ "ಮುಖ್ಯಮಂತ್ರಿ ಆರೋಗ್ಯ ವಾಹಿನಿ" ಎಂಬ ಹೊಸ ಯೋಜನೆಯಡಿ ಸಂಚಾರಿ ಕ್ಲಿನಿಕ್‌ಗಳನ್ನು 11 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

120. ತಾಲ್ಲೂಕು ಮಟ್ಟದಲ್ಲಿಯೇ ತ್ವರಿತವಾಗಿ ತಜ್ಞ ವೈದ್ಯಕೀಯ ಸೇವೆಗಳನ್ನು ನೀಡಲು ಆಯಾ ಜಿಲ್ಲೆಗಳ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿನ ನುರಿತ ಹಾಗೂ ತಜ್ಞ ವೈದ್ಯರ ಸೇವೆಯನ್ನು ಟೆಲಿಮೆಡಿಸಿನ್ ಯೋಜನೆ ಮೂಲಕ ಒದಗಿಸಲಾಗುವುದು.

121. ಹಾವೇರಿ ಜಿಲ್ಲೆ ಶಿಗ್ಗಾಂವಿ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯನ್ನು 250 ಹಾಸಿಗೆಗಳ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ.

122. **ರಾಜ್ಯದ ಬಡತನ ರೇಖೆಗಿಂತ ಕೆಳಗಿರುವ ಹಿರಿಯ ನಾಗರಿಕರ ಕಣ್ಣಿನ ಸಂರಕ್ಷಣೆಗಾಗಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಉಚಿತ ನೇತ್ರ ತಪಾಸಣೆ ಮಾಡಿ ಅಗತ್ಯವಿದ್ದಲ್ಲಿ ಶಸ್ತ್ರ ಚಿಕಿತ್ಸೆ ಹಾಗೂ ಕನ್ನಡಕ ವಿತರಣೆಯನ್ನು ಕೈಗೊಳ್ಳಲಾಗುವುದು.**

123. ತುರ್ತು ವೈದ್ಯಕೀಯ ಸೇವೆಯನ್ನು ಒದಗಿಸಿ ಅಮೂಲ್ಯ ಜೀವ ರಕ್ಷಿಸಲು ಖಾಸಗಿ ವಲಯದಲ್ಲಿ ಏರ್ ಅಂಬ್ಯುಲೆನ್ಸ್ ಸೇವೆಯನ್ನು ಪ್ರಾರಂಭಿಸಲು ಪ್ರೋತ್ಸಾಹಿಸಲಾಗುವುದು.

124. ಶಿವಮೊಗ್ಗದಲ್ಲಿ ನೂತನವಾಗಿ ಸ್ಥಾಪಿಸಲಾಗಿರುವ ಆಯುಷ್ ವಿಶ್ವವಿದ್ಯಾಲಯವನ್ನು ಬಲಪಡಿಸಲಾಗುವುದು.

125. ಹಾವೇರಿ ಜಿಲ್ಲೆ ಸವಣೂರು ತಾಲ್ಲೂಕಿನಲ್ಲಿ ಒಂದು ಹೊಸ ಆಯುರ್ವೇದ ಕಾಲೇಜನ್ನು ಸ್ಥಾಪಿಸಲಾಗುವುದು.

126. ಯಾದಗಿರಿ ಜಿಲ್ಲಾ ಆಸ್ಪತ್ರೆಯಲ್ಲಿ ಆಯುಷ್ ವಿಭಾಗವನ್ನು ಪ್ರಾರಂಭಿಸಲಾಗುವುದು.

127. **ಸಾರ್ವಜನಿಕ ಆರೋಗ್ಯ ವ್ಯವಸ್ಥೆಯಲ್ಲಿ ಆರೋಗ್ಯ ಇಲಾಖೆ ಹಾಗೂ ಸಮುದಾಯದ ನಡುವಿನ ಕೊಂಡಿಯಂತೆ ಕಾರ್ಯ ನಿರ್ವಹಿಸುತ್ತಿರುವ ಆಶಾ ಕಾರ್ಯಕರ್ತೆಯರ ಮಾಸಿಕ ಗೌರವಧನವನ್ನು 1,000 ರೂ. ಗಳಷ್ಟು ಹೆಚ್ಚಿಸಲಾಗುವುದು.**

128. ಹಲವಾರು ವರ್ಷಗಳ ಹಿಂದೆ ಘೋಷಣೆಯಾದರೂ ನೆನೆಗುದಿಗೆ ಬಿದ್ದಿರುವ ರಾಮನಗರದ ಅರ್ಚಕರಹಳ್ಳಿ ಗ್ರಾಮದಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಕ್ಯಾಂಪಸ್‌ಅನ್ನು ನಮ್ಮ ಸರ್ಕಾರವು 600 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಿದೆ.

129. **ಉತ್ತರ ಕರ್ನಾಟಕ ಭಾಗದಲ್ಲಿ ಹೈಟೆಕ್ ಚಿಕಿತ್ಸೆಯನ್ನು ಲಭ್ಯಪಡಿಸಲು ಹುಬ್ಬಳ್ಳಿಯಲ್ಲಿ ಜಯದೇವ ಹೃದ್ರೋಗ ಸಂಸ್ಥೆಯ ಪ್ರಾದೇಶಿಕ ಹೃದ್ರೋಗ ಕೇಂದ್ರವನ್ನು 250 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.**

130. **ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯಡಿಯಲ್ಲಿನ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ 500 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನು ಹೊಸದಾಗಿ ಮೂರು ಹಂತಗಳಲ್ಲಿ Modular ವಿಧಾನದಲ್ಲಿ ನಿರ್ಮಿಸಲಾಗುವುದು.**

131. ಬೆಂಗಳೂರಿನ ವಾಣಿವಿಲಾಸ ಆಸ್ಪತ್ರೆಯಲ್ಲಿ Fetal Medicine ಮತ್ತು Neonatology ವಿಭಾಗಗಳನ್ನು ಹೊಸದಾಗಿ ಪ್ರಾರಂಭಿಸಲಾಗುವುದು.

132. **ಕ್ಯಾನ್ಸರ್ ರೋಗಿಗಳಿಗೆ ಸಮೀಪದಲ್ಲಿ ಸಕಾಲಿಕ, ಮಿತವ್ಯಯದಾಯಕ ಚಿಕಿತ್ಸೆಯನ್ನು ಒದಗಿಸಲು ಈಗಾಗಲೇ ಬೆಂಗಳೂರು, ತುಮಕೂರು**

**ಮತ್ತು ಕಲಬುರಗಿಯಲ್ಲಿ ಕಿದ್ವಾಯಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಬೆಳಗಾವಿಯಲ್ಲಿ ಕಿದ್ವಾಯಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರವನ್ನು 50 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.**

133. **ಕ್ಯಾನ್ಸರ್ ರೋಗಿಗಳಿಗೆ ಕಿಮೋಥೆರಪಿ ಸೌಕರ್ಯವನ್ನು ಒದಗಿಸಲು ಆಯ್ದ 10 ವೈದ್ಯಕೀಯ ವಿಜ್ಞಾನ ಸಂಸ್ಥೆಗಳಲ್ಲಿ Infusion Center ಗಳನ್ನು ಸ್ಥಾಪಿಸಲಾಗುವುದು.**

134. ದಿವಂಗತ ಪುನೀತ್ ರಾಜಕುಮಾರ್ ಮತ್ತು ಸಂಚಾರಿ ವಿಜಯ್ ಅವರು ತಮ್ಮ ಅಂಗಾಂಗಗಳನ್ನು ದಾನ ಮಾಡಿ ಸಾರ್ಥಕತೆಯನ್ನು ಮೆರೆದಿದ್ದಾರೆ. ಅದರಂತೆಯೇ ಮರಣಾನಂತರ ಅಂಗಾಂಗಗಳನ್ನು ದಾನ ಮಾಡುವಂತೆ ಸಾರ್ವಜನಿಕರನ್ನು ಪ್ರೇರೇಪಿಸಲಾಗುವುದು. ಇದಕ್ಕೆ ಪೂರಕವಾಗಿ ಈಗಾಗಲೇ ಬೆಂಗಳೂರಿನಲ್ಲಿ Institute of Gastroenterology and Organ Transplant ಸಂಸ್ಥೆಯನ್ನು ಲೋಕಾರ್ಪಣೆ ಮಾಡಿದ್ದು, ಪ್ರಸಕ್ತ ಸಾಲಿನಲ್ಲಿ ನಿಮ್ಹಾನ್ಸ್ ಮೂಲಕ ಅಂಗಾಂಗ ಮರುಪಡೆಯುವಿಕೆ ಕೇಂದ್ರವನ್ನು ಪ್ರಾರಂಭಿಸಲಾಗುವುದು.

135. ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯು 2024 ರಲ್ಲಿ ಶತಮಾನೋತ್ಸವ ಆಚರಿಸುವ ಹಿನ್ನಲೆಯಲ್ಲಿ, ಕೆ.ಆರ್. ಆಸ್ಪತ್ರೆಯ ಕಟ್ಟಡಗಳ ನವೀಕರಣವನ್ನು ಮುಂದಿನ ಮೂರು ವರ್ಷದಲ್ಲಿ 89 ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಳ್ಳಲಾಗುವುದು.

136. ಬಡವರಿಗೆ ಸ್ಥಳೀಯವಾಗಿ ಅತ್ಯಾಧುನಿಕ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲು ಚಿತ್ರದುರ್ಗ ಜಿಲ್ಲೆಯಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ.

137. ತುಮಕೂರಿನಲ್ಲಿ 20 ಕೋಟಿ ರೂ.ಗಳ ವೆಚ್ಚದಲ್ಲಿ ಹೊಸದಾಗಿ ಟ್ರಾಮಾ ಕೇರ್ ಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಪ್ರಸಕ್ತ ವರ್ಷ 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

138. ಬಡಮಕ್ಕಳಿಗೆ ವೈದ್ಯಕೀಯ ಶಿಕ್ಷಣ ಪಡೆಯಲು ಅವಕಾಶ ಕಲ್ಪಿಸಲು ಸರ್ಕಾರದ ವತಿಯಿಂದ ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ನೀಟ್ ಪರೀಕ್ಷೆಗೆ ತರಬೇತಿ ನೀಡಲಾಗುವುದು. ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಸಂಸ್ಥೆಗಳಲ್ಲಿ ಸರ್ಕಾರಿ ಕೋಟಾದಲ್ಲಿ ಪ್ರವೇಶ ಪಡೆಯುವ ಬಡ ವಿದ್ಯಾರ್ಥಿಗಳಿಗೆ ಬ್ಯಾಂಕುಗಳಿಂದ ಶೈಕ್ಷಣಿಕ ಸಾಲ ಒದಗಿಸಲು ರಾಜ್ಯ ಸರ್ಕಾರವು ನೆರವಾಗಲಿದೆ. ಖಾಸಗಿ ವೈದ್ಯಕೀಯ ಕಾಲೇಜುಗಳನ್ನು ಎ, ಬಿ, ಸಿ ಮತ್ತು ಡಿ ಎಂದು ವರ್ಗೀಕರಿಸಿ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕ ನಿಗದಿಪಡಿಸಲು ಕ್ರಮವಹಿಸಲಾಗುವುದು.

139. **ರಾಜ್ಯದಲ್ಲಿ ಅಪೌಷ್ಟಿಕತೆಯನ್ನು ಕಡಿಮೆ ಮಾಡುವುದು ನಮ್ಮ ಸರ್ಕಾರದ ದೃಢಸಂಕಲ್ಪವಾಗಿದೆ.**

ಅ. ರಾಷ್ಟ್ರೀಯ ಆರೋಗ್ಯ ಮತ್ತು ಕುಟುಂಬ ಸಮೀಕ್ಷೆಯಲ್ಲಿ ಅಪೌಷ್ಟಿಕತೆ ಸೂಚಕಗಳು ಕಡಿಮೆಯಾಗಿರುವುದರೊಂದಿಗೆ ಅಪೌಷ್ಟಿಕತೆ ನಿವಾರಣೆಯಲ್ಲಿ ಕರ್ನಾಟಕವು ಸ್ಥಿರವಾದ ಪ್ರಗತಿ ಸಾಧಿಸಿದೆ. ಸರ್ಕಾರದ ಮಾತೃಪೂರ್ಣ, ಕ್ಷೀರಭಾಗ್ಯ

ಮುಂತಾದ ಯೋಜನೆಗಳ ಅನುಷ್ಠಾನವು ಉತ್ತಮ ಫಲಿತಾಂಶವನ್ನು ನೀಡುತ್ತಿದೆ.

ಆ. 6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಟಿಕ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ, ಚುಚ್ಚುಮದ್ದು, ಆರೋಗ್ಯ ತಪಾಸಣೆ ಜೊತೆಗೆ ಕ್ಷೀರ ಭಾಗ್ಯದಡಿ ಕೆನೆಭರಿತ ಹಾಲಿನ ಪುಡಿಯನ್ನು ಸುಮಾರು 52 ಲಕ್ಷ ಫಲಾನುಭವಿಗಳಿಗೆ ಒದಗಿಸಲಾಗುತ್ತಿದೆ.

ಇ. 3 ರಿಂದ 6 ವರ್ಷದ ಮಕ್ಕಳ ಪೌಷ್ಟಿಕತೆಯನ್ನು ಹೆಚ್ಚಿಸಲು 300 ದಿನಗಳ ಬಿಸಿಯೂಟ ನೀಡುವ ಜೊತೆಗೆ ಅಂಗನವಾಡಿ ಮಕ್ಕಳಿಗೆ ಹಾಲು ಮತ್ತು ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ. ಈ ಯೋಜನೆಯಲ್ಲಿ 6 ತಿಂಗಳಿಂದ 6 ವರ್ಷದ ಮಕ್ಕಳು, ಗರ್ಭಿಣಿಯರು, ಬಾಣಂತಿಯರನ್ನು ಒಳಗೊಂಡಂತೆ 51.24 ಲಕ್ಷ ಫಲಾನುಭವಿಗಳು ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ.

**ಈ. ಪೌಷ್ಟಿಕ ಕರ್ನಾಟಕವೆಂಬ ಹೊಸ ಯೋಜನೆಯಡಿ ಅಪೌಷ್ಟಿಕತೆಯನ್ನು ನಿವಾರಿಸಲು ಪ್ರಾಯೋಗಿಕವಾಗಿ ರಾಜ್ಯದ 14 ಜಿಲ್ಲೆಗಳಲ್ಲಿ ಅಕ್ಕಿಯೊಂದಿಗೆ ಪೋಷಕಾಂಶಗಳಾದ ಕಬ್ಬಿಣ, ಫೋಲಿಕ್ ಆಮ್ಲ, ವಿಟಮಿನ್ ಬಿ-12 ಸೇರ್ಪಡೆಗೊಳಿಸಿದ ಸಾರವರ್ಧಿತ ಅಕ್ಕಿಯನ್ನು 93 ಕೋಟಿ ರೂ.ಗಳ ವೆಚ್ಚದಲ್ಲಿ ವಿತರಿಸಲಾಗುವುದು.**

ಉ. ರಾಷ್ಟ್ರೀಯ ಆರೋಗ್ಯ ಸಮೀಕ್ಷೆ ಮಾದರಿಯಲ್ಲಿ ರಾಜ್ಯ ಮಟ್ಟದ ಪೌಷ್ಟಿಕತಾ ಸಮೀಕ್ಷೆ ಕೈಗೊಳ್ಳಲಾಗುವುದು.

140. ಒಟ್ಟು 26,959 ತಪಾಸಣೆ ಮಾಡಿರುವ ಮಕ್ಕಳಲ್ಲಿ 2,959 ಮಕ್ಕಳಲ್ಲಿ ತೀವ್ರತರವಾದ ಕಿವುಡುತನ ಕಂಡು ಬಂದಿದ್ದು, ಈ ವರ್ಷ 500 ಹುಟ್ಟು ಕಿವುಡು ಮಕ್ಕಳಿಗೆ ಕಾಕ್ಲಿಯಾರ್ ಇಂಪ್ಲಾಂಟ್ ಅನ್ನು ಅಳವಡಿಸಿ ಅವರ ವಾಕ್-ಶ್ರವಣ ಶಕ್ತಿ ಉತ್ತಮಪಡಿಸಲು 32 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

141. ಬಾಲ್ಯವಿವಾಹವನ್ನು ತಡೆಗಟ್ಟುವ ಉದ್ದೇಶದಿಂದ ಕೊಪ್ಪಳ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿರುವ "ಸ್ಫೂರ್ತಿ" ಯೋಜನೆಯನ್ನು ವಿಸ್ತರಿಸಲಾಗುವುದು.

142. ವ್ಯಾಪಾರ / ಉದ್ಯಮಗಳಲ್ಲಿ ಮಹಿಳೆಯರ ಉಪಸ್ಥಿತಿಯನ್ನು ಹೆಚ್ಚಿಸಲು KITS ರವರು "ಎಲಿವೇಟ್" ಯೋಜನೆಯಡಿ ಗುರುತಿಸಲ್ಪಟ್ಟ ಮಹಿಳಾ ಉದ್ದಿಮೆದಾರರಿಗೆ/ ಮಹಿಳಾ ನೇತೃತ್ವದ ಸ್ಟಾರ್ಟ್‌ಅಪ್‌ಗಳಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ 10 ಲಕ್ಷ ರೂ.ಗಳ ತನಕ ನೇರ ಸಾಲವನ್ನು ಒದಗಿಸಿ ಪ್ರೋತ್ಸಾಹಿಸಲಾಗುವುದು.

143. ಸರ್ಕಾರವು ಪ್ರತಿ ಜಿಲ್ಲೆಯ ಎರಡು ತಾಲ್ಲೂಕು ಕೇಂದ್ರಗಳಲ್ಲಿ ಹಾಗೂ ಅತೀ ಹೆಚ್ಚು ಮಹಿಳಾ ಕಾರ್ಮಿಕರ ಸಾಂದ್ರತೆ ಇರುವ ಪ್ರದೇಶಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

144. **ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ಮಾಹೆಯಾನ ಗೌರವಧನವನ್ನು ಸೇವೆಯ ಆಧಾರದ ಮೇಲೆ ಹೆಚ್ಚಿಸಲು ನಿರ್ಧರಿಸಲಾಗಿದೆ. 20 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ 1,500 ರೂ., 10-20 ವರ್ಷ ಸೇವೆ ಸಲ್ಲಿಸಿದವರಿಗೆ 1,250 ರೂ.**

**ಮತ್ತು 10ಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ 1,000 ರೂ.ಗಳನ್ನು ಹೆಚ್ಚಿಸಲಾಗುವುದು.**

145. ದಿನಾಂಕ: 31.03.2015 ರಿಂದ ಸ್ಥಗಿತಗೊಂಡಿದ್ದ ಎನ್.ಪಿ.ಎಸ್. ಲೈಟ್ ಯೋಜನೆಯಿಂದ ವಂಚಿತರಾದ ಅಂಗನವಾಡಿ ಕಾರ್ಯಕರ್ತೆಯರಿಗೆ 50 ಸಾವಿರ ರೂ. ಮತ್ತು ಅಂಗನವಾಡಿ ಸಹಾಯಕಿಯರಿಗೆ 30 ಸಾವಿರ ರೂ. ಇಡಿಗಂಟು ಪಾವತಿಸಲು ನಿರ್ಧರಿಸಲಾಗಿದೆ.

146. ದುಡಿಯುವ ಮಹಿಳೆಯರ ಮಕ್ಕಳ ಪಾಲನೆ ಮತ್ತು ಪೋಷಣೆಯ ಹಿತದೃಷ್ಟಿಯಿಂದ ರಾಜ್ಯದ 5 ತಾಲ್ಲೂಕುಗಳಲ್ಲಿ ಮಹಾತ್ಮಾ ಗಾಂಧಿ ಎನ್.ಆರ್.ಇ.ಜಿ.ಎ ಯೋಜನೆಯ ಸಹಯೋಗದೊಂದಿಗೆ ಶಿಶು ಪಾಲನಾ ಕೇಂದ್ರಗಳನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲಾಗುವುದು.

147. ಸಂಕಷ್ಟದಲ್ಲಿರುವ 18 ವರ್ಷ ಪೂರ್ಣಗೊಂಡ ಹೆಣ್ಣುಮಕ್ಕಳ ವಿದ್ಯಾಭ್ಯಾಸ ಮತ್ತು ವೃತ್ತಿಪರ ಕೌಶಲ್ಯ ತರಬೇತಿ ಪಡೆಯಲು, ಸ್ವಯಂ ಸೇವಾ ಸಂಸ್ಥೆಯ ನೆರವಿನೊಂದಿಗೆ ಪ್ರಾಯೋಗಿಕವಾಗಿ ಆರು ಹೆಣ್ಣು ಮಕ್ಕಳ ಅನುಪಾಲನಾ ಗೃಹ ಪ್ರಾರಂಭಿಸಲಾಗುವುದು.

148. ಮಹಿಳಾ ಮತ್ತು ಮಕ್ಕಳ ಇಲಾಖೆಯ ವತಿಯಿಂದ ಬೆಂಗಳೂರು, ಮೈಸೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ಮಂಗಳೂರು ಹಾಗೂ ಕಲಬುರಗಿ ನಗರಗಳಲ್ಲಿ ಉದ್ಯೋಗಸ್ಥ ಮಹಿಳೆಯರಿಗೆ ವಸತಿನಿಲಯಗಳನ್ನು ಪ್ರಾರಂಭಿಸಲಾಗುವುದು. ಇದರಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತ ಮಹಿಳೆಯರಿಗೆ ಆದ್ಯತೆ ನೀಡಲಾಗುವುದು.

149. ಲಿಂಗತ್ವ ಅಲ್ಪಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಆದ್ಯತೆ ಮೇರೆಗೆ ಮನೆಯನ್ನು ನಿರ್ಮಿಸಲಾಗುವುದು.

150. ಸಾಮಾಜಿಕ ಸೇವಾ ವಲಯದಲ್ಲಿ ಉತ್ತಮ ಕೆಲಸ ಮಾಡುತ್ತಿರುವ ಧಾರವಾಡದ ಕರ್ನಾಟಕ ಕ್ಯಾನ್ಸರ್ ಇನ್ಸ್ಟಿಟ್ಯೂಟ್, ಬಸವನಗುಡಿಯಲ್ಲಿನ ಅಮೃತ ಶಿಶು ನಿವಾಸ ತಾಯಿ ಮತ್ತು ಮಕ್ಕಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಬಸವ ಕಲ್ಯಾಣದಲ್ಲಿರುವ ಶ್ರೀ ನೀರಜಿ ಭುವ ವಿಸ್ವಸ್ಥ ನಿಧಿ ಹಾಗೂ ಮೈಸೂರಿನ ಶಕ್ತಿಧಾಮ ಸಂಸ್ಥೆಗಳಿಗೆ ವಿಶೇಷ ನೆರವು ನೀಡಲಾಗುವುದು.

151. **ಸ್ವಸ್ಥ ಹಾಗೂ ಸುಶಿಕ್ಷಿತ ಸಮಾಜ ನಿರ್ಮಾಣಕ್ಕಾಗಿ ಹಾಗೂ ಮಕ್ಕಳ ಉಜ್ವಲ ಭವಿಷ್ಯ ರೂಪಿಸುವ ಆಶಯದಿಂದ ಮಕ್ಕಳ ಉದ್ದೇಶಿತ ಯೋಜನೆಗಳಿಗೆ (Child Budget) 2022-23ನೇ ಸಾಲಿನಲ್ಲಿ ಒಟ್ಟಾರೆಯಾಗಿ 40,944 ಕೋಟಿ ರೂ. ಅನುದಾನ ಒದಗಿಸಲಾಗಿದೆ.**

152. **ಮಹಿಳೆಯರ ಸಂರಕ್ಷಣೆ, ಆರ್ಥಿಕ ಸ್ವಾವಲಂಬನೆಗೆ ನಮ್ಮ ಸರ್ಕಾರ ಅತ್ಯಂತ ಮಹತ್ವ ನೀಡಿದೆ. ಈ ನಿಟ್ಟಿನಲ್ಲಿ ಮಹಿಳಾ ಉದ್ದೇಶಿತ ಯೋಜನೆಗಳಿಗೆ (Gender Budget) 2022-23ನೇ ಸಾಲಿನಲ್ಲಿ ಒಟ್ಟಾರೆಯಾಗಿ 43,188 ಕೋಟಿ ರೂ. ಅನುದಾನ ಒದಗಿಸಲಾಗಿದೆ.**

153. **SCSP/TSP ಅಧಿನಿಯಮದಂತೆ ಪ್ರತಿ ವರ್ಷವು ನಮ್ಮ ಸರ್ಕಾರವು ಅಭಿವೃದ್ಧಿಗೆ ಹಂಚಿಕೆ ಮಾಡಿರುವ ಆಯವ್ಯಯದಲ್ಲಿ ಶೇ.24.01ರಷ್ಟನ್ನು SCSP/TSP ಯೋಜನೆಗಳಿಗೆ ಮೀಸಲಿಡಲಾಗಿದೆ. ಪ್ರಸಕ್ತ ಸಾಲಿನಲ್ಲಿ 28,234 ಕೋಟಿ ರೂ.ಗಳನ್ನು ಹಂಚಿಕೆ ಮಾಡಿದ್ದು, ಇದು ಕಳೆದ ಸಾಲಿನ ಹಂಚಿಕೆಗಿಂತ 2,229 ಕೋಟಿ ರೂ.ಗಳಷ್ಟು ಹೆಚ್ಚಾಗಿರುತ್ತದೆ.**

**ಇದಲ್ಲದೆ, ಸಮಾಜ ಕಲ್ಯಾಣ ಇಲಾಖೆಯ ವೇತನ ಮತ್ತು ಆಡಳಿತ ವೆಚ್ಚವು ಒಟ್ಟು 598 ಕೋಟಿ ರೂ.ಗಳನ್ನು SCSP/TSP ಬಜೆಟ್‌ನಲ್ಲಿ ಸೇರಿಸದೇ ವಿನಾಯಿತಿಗೊಳಿಸಲಾಗಿದೆ. ನಮ್ಮ ಸರ್ಕಾರವು SCSP/TSP ಯೋಜನೆಯ ಅನುಷ್ಠಾನವನ್ನು ಇನ್ನಷ್ಟು ಬಲಪಡಿಸಲು ಬದ್ಧವಾಗಿದೆ.**

154. **ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಇತರೆ ವರ್ಗದ ಮಕ್ಕಳಲ್ಲಿ ಉನ್ನತ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು, ಮೊಟ್ಟಮೊದಲ ಬಾರಿಗೆ "ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿನಿಲಯ" ಎಂಬ ಹೊಸ ಯೋಜನೆಯಡಿ ರಾಜ್ಯದ ಶೈಕ್ಷಣಿಕ ಕೇಂದ್ರಗಳಾದ ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಕಲಬುರಗಿ, ಮಂಗಳೂರು ಮತ್ತು ಮೈಸೂರಿನಲ್ಲಿ ತಲಾ 1,000 ಸಾಮರ್ಥ್ಯದ ಬಹುಮಹಡಿಯ ವಿದ್ಯಾರ್ಥಿನಿಲಯ ಸಮುಚ್ಛಯಗಳನ್ನು 250 ಕೋಟಿ ರೂ.ಗಳ ಮೊತ್ತದಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಲಾಗುವುದು.**

155. ವಿದ್ಯಾರ್ಥಿನಿಲಯಗಳಲ್ಲಿ ಉತ್ತಮ ಗುಣಮಟ್ಟದ ಆಹಾರವನ್ನು ಒದಗಿಸಲು ಮಾಸಿಕ ಭೋಜನ ವೆಚ್ಚವನ್ನು 150 ರೂ.ಗಳಷ್ಟು ಹೆಚ್ಚಿಸಲು 107 ಕೋಟಿ ರೂ. ಹೆಚ್ಚುವರಿ ಅನುದಾನ ಒದಗಿಸಲಾಗುವುದು.

156. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಬೇಡಿಕೆ ಮತ್ತು ಹಂಚಿಕೆಯನ್ನು ಸರಿದೂಗಿಸುವ ಉದ್ದೇಶದಿಂದ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು

ಅರ್ಜಿಗಳನ್ನು ಆಹ್ವಾನಿಸಿ, ವಿದ್ಯಾರ್ಥಿನಿಲಯಗಳಲ್ಲಿ ಸಿ.ಇ.ಟಿ. ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲಾಗುವುದು.

157. **ಎಸ್.ಸಿ./ಎಸ್.ಟಿ. ಮಹಿಳೆಯರಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸಲು ಇಲಾಖೆಗಳ ಅಡಿಯಲ್ಲಿರುವ ಎಲ್ಲಾ ಅಭಿವೃದ್ಧಿ ನಿಗಮಗಳ ಸ್ವಯಂ ಉದ್ಯೋಗ ಮತ್ತು ಇತರೆ ಕಾರ್ಯಕ್ರಮಗಳಲ್ಲಿನ ಗುರಿಯಲ್ಲಿ ಎಸ್.ಸಿ./ಎಸ್.ಟಿ. ಮಹಿಳೆಯರಿಗೆ ಶೇ.25ರಷ್ಟನ್ನು ಕಾಯ್ದಿರಿಸಲಿದೆ.**

158. **ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿವಿಧ ಅಭಿವೃದ್ಧಿ ನಿಗಮಗಳಿಂದ ಒಟ್ಟಾರೆ 800 ಕೋಟಿ ರೂ.ಗಳ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು.**

159. ಪರಿಶಿಷ್ಟ ಜಾತಿ ಮತ್ತು ಪಂಗಡಗಳ 300 ಮಹಿಳಾ ಪದವೀಧರರಿಗೆ ಉದ್ಯಮಗಳನ್ನು ಸ್ಥಾಪಿಸಲು ಪೂರಕವಾಗುವಂತೆ ಪ್ರತಿಷ್ಠಿತ ಐ.ಐ.ಎಂ. ಬೆಂಗಳೂರಿನಲ್ಲಿ ಉದ್ಯಮಶೀಲತಾ ತರಬೇತಿ ನೀಡಲಾಗುವುದು.

160. ಕರ್ನಾಟಕ ರಾಜ್ಯದಲ್ಲಿ ಅಸ್ಪೃಶ್ಯತೆಯನ್ನು ಸಂಪೂರ್ಣವಾಗಿ ನಿವಾರಣೆ ಮಾಡುವ ಧ್ಯೇಯದಿಂದ ರಾಜ್ಯಾದ್ಯಂತ ಜಾಗೃತಿ ಮೂಡಿಸಲು "ವಿನಯ ಸಾಮರಸ್ಯ ಯೋಜನೆ" ಯನ್ನು ಜಾರಿಗೆ ತರಲಾಗುವುದು.

161. ಬುಡಕಟ್ಟು ಜನರಿಂದ ಸಂಗ್ರಹಿಸಲ್ಪಟ್ಟ ಕಿರು ಅರಣ್ಯ ಉತ್ಪನ್ನಗಳು ಹಾಗೂ ಕರಕುಶಲ ವಸ್ತುಗಳಿಗೆ ಸ್ಪರ್ಧಾತ್ಮಕ ಬೆಲೆಯನ್ನು ದೊರಕಿಸಲು ನಗರ ಪ್ರದೇಶಗಳಲ್ಲಿ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗುವುದು.

162. 2022–23ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ನಿಗಮಗಳ ಬಳಿ ಲಭ್ಯವಿರುವ 615 ಕೋಟಿ ರೂ.ಗಳ ಜೊತೆಗೆ ಹೊಸದಾಗಿ ಅನುಮೋದಿಸಿರುವ 500 ಕೋಟಿ ರೂ.ಗಳ ಹೆಚ್ಚುವರಿ ಅನುದಾನವೂ ಸೇರಿ ಒಟ್ಟಾರೆ 1,115 ಕೋಟಿ ರೂ.ಗಳ ಮೊತ್ತದಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

163. ವಸತಿ ರಹಿತ ಪರಿಶಿಷ್ಟ ಜಾತಿ ಮತ್ತು ಪಂಗಡದ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರಿಗೆ ರಾಜೀವ ಗಾಂಧಿ ವಸತಿ ನಿಗಮದ ಮೂಲಕ ಆದ್ಯತೆ ಮೇರೆಗೆ ಮನೆಗಳನ್ನು ನಿರ್ಮಿಸಲಾಗುವುದು ಹಾಗೂ ಇತರೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು.

164. ಸಂವಿಧಾನ ಕರ್ತೃ ಡಾ. ಬಿ.ಆರ್. ಅಂಬೇಡ್ಕರ್ ಅವರು ಕರ್ನಾಟಕದಲ್ಲಿ ಭೇಟಿ ನೀಡಿರುವ ಪ್ರಮುಖ ಸ್ಥಳಗಳನ್ನು ಗುರುತಿಸಿ ಅಭಿವೃದ್ಧಿಪಡಿಸಲಾಗುವುದು.

165. ನಮ್ಮ ಸರ್ಕಾರವು ಪ್ರಪ್ರಥಮ ಬಾರಿಗೆ ಪರಿಶಿಷ್ಟ ಜಾತಿ ಮತ್ತು ಪಂಗಡದ ಯುವಕರಲ್ಲಿ ಸ್ವ-ಉದ್ಯೋಗವನ್ನು ಉತ್ತೇಜಿಸಲು ಹಾಗೂ ಆತ್ಮವಿಶ್ವಾಸವನ್ನು ವೃದ್ಧಿಸಲು 1.5 ಲಕ್ಷ ರೂ.ಗಳ ಮೌಲ್ಯದ ವಿದ್ಯುತ್ ಚಾಲಿತ ತ್ರಿಚಕ್ರ ಸರಕು ಸಾಗಣೆ ವಾಹನಗಳ ಖರೀದಿಗೆ 50 ಸಾವಿರ ರೂ.ಗಳ ಧನಸಹಾಯ ನೀಡಲಾಗುವುದು.

166. **ಹಲವಾರು ವರ್ಷಗಳಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ತಮ್ಮದೇ ಆದ ಅಪಾರ ಕೊಡುಗೆ ನೀಡಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯಗಳ ಮಠಗಳು ಹಾಗೂ ಸಂಸ್ಥೆಗಳ**

**ಜೀರ್ಣೋದ್ಧಾರ ಮತ್ತು ಅಭಿವೃದ್ಧಿಗೆ ವಿಶೇಷ ನೆರವನ್ನು ಸರ್ಕಾರದಿಂದ ನೀಡಲಾಗುವುದು.**

167. ಚರ್ಮ ಕುಶಲಕರ್ಮಿಗಳಿಗೆ ಉತ್ತೇಜನ ಮತ್ತು ವಿನೂತನ ವಿನ್ಯಾಸಗಳ ಅಳವಡಿಕೆಯನ್ನು ಪ್ರೋತ್ಸಾಹಿಸಲು ಕೇಂದ್ರ ಸರ್ಕಾರದ ನೆರವಿನೊಂದಿಗೆ ಬಾಗಲಕೋಟೆ ಮತ್ತು ಹಾವೇರಿಯಲ್ಲಿ ಸಾಮಾನ್ಯ ಸೌಲಭ್ಯ ಸಮುಚ್ಚಯಗಳನ್ನು ಸ್ಥಾಪಿಸಲಾಗುವುದು.

168. **ಮಾನವೀಯತೆ, ಸಮಾನತೆಯ ಹರಿಕಾರ, ಶ್ರೀ ನಾರಾಯಣ ಗುರುರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದು ಶ್ರೀ ನಾರಾಯಣ ಗುರು ವಸತಿ ಶಾಲೆಯನ್ನು ಪ್ರಾರಂಭಿಸಲಾಗುವುದು.**

169. ಸರ್ಕಾರದ ಅನುದಾನವು ಯಾವುದೇ ಸೋರಿಕೆಯಾಗದೇ ನೇರವಾಗಿ ವಿದ್ಯಾರ್ಥಿಗಳಿಗೆ ತಲುಪಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ವಿದ್ಯಾರ್ಥಿನಿಲಯಗಳ ಪ್ರವೇಶಾತಿ / ಕಾರ್ಯಾಚರಣೆ, ಆಡಳಿತ, ನಿರ್ವಹಣೆ ಮತ್ತು ವೆಚ್ಚಗಳನ್ನು ಸಂಪೂರ್ಣವಾಗಿ ಗಣಕೀಕೃತ ಆಡಳಿತ ವ್ಯವಸ್ಥೆಯ ಮೂಲಕ ನಿರ್ವಹಿಸಲಾಗುವುದು.

170. **ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ಸ್ಥಾಪಿಸಲಾಗಿರುವ ನಿಗಮಗಳ ಮೂಲಕ 400 ಕೋಟಿ ರೂ.ಗಳ ಮೊತ್ತದಲ್ಲಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗುವುದು. ದೇವರಾಜ ಅರಸು ಅಭಿವೃದ್ಧಿ ನಿಗಮದ ಮೂಲಕ ಹಿಂದುಳಿದ ಹಾಗೂ ಅತೀ ಹಿಂದುಳಿದ ಸಮುದಾಯಗಳಾದ ತಿಗಳ, ಮಾಳಿ, ಮಾಳಿ ಮಾಲಗಾರ,**

**ಕುಂಬಾರ, ಯಾದವ, ದೇವಾಡಿಗ, ಸಿಂಪಿ, ಕ್ಷತ್ರಿಯ, ಮೇದಾರ, ಕುಂಚಿ, ಕುರ್ಮ, ಪಿಂಜಾರ/ನದಾಫ್, ಕುರುಬ, ಬಲಿಜ, ಈಡಿಗ, ಹಡಪದ ಹಾಗೂ ಇತರೆ ಜನಾಂಗದ ಅಭಿವೃದ್ಧಿಗೆ 400 ಕೋಟಿ ರೂ.ಗಳ ಮೊತ್ತದಲ್ಲಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು.**

171. ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ಹಾಗೂ ಒಕ್ಕಲಿಗರ ಅಭಿವೃದ್ಧಿ ನಿಗಮವನ್ನು ಈಗಾಗಲೇ ಘೋಷಿಸಿದ್ದು, ಪ್ರಸಕ್ತ ಸಾಲಿನಲ್ಲಿ ತಲಾ 100 ಕೋಟಿ ರೂ.ಗಳ ಮೊತ್ತದಲ್ಲಿ ಕಾರ್ಯಕ್ರಮ ರೂಪಿಸಲಾಗುವುದು.

172. ಮರಾಠಾ ಅಭಿವೃದ್ಧಿ ನಿಗಮದ ಮೂಲಕ 50 ಕೋಟಿ ರೂ.ಗಳ ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು.

173. ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ 10 ಕೋಟಿ ರೂ. ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುವುದು.

174. ಶಿವಶರಣೆ ನಲೂರು ನಿಂಬೆಕ್ಕರವರ ಜನ್ಮಸ್ಥಳವನ್ನು ಅಭಿವೃದ್ಧಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

175. ಶ್ರೀ ಮಡಿವಾಳ ಮಾಚಿದೇವ ಮೂಲಸ್ಥಾನ ದೇವರಹಿಪ್ಪರಗಿಯಲ್ಲಿ ಮಾಚಿದೇವರ ಎಲ್ಲಾ ಕುರುಹುಗಳನ್ನು ಅಭಿವೃದ್ಧಿಗೊಳಿಸಿ ಸಾರ್ವಜನಿಕ ಯಾತ್ರಾ ಸ್ಥಳಗಳನ್ನಾಗಿ ಮಾಡಲಾಗುವುದು.

176. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಓದುತ್ತಿರುವ ಮಕ್ಕಳಿಗೆ ಸ್ಪೋಕನ್ ಇಂಗ್ಲೀಷ್ ಹಾಗೂ ವ್ಯಕ್ತಿತ್ವ ವಿಕಸನದ ತರಬೇತಿಗಳನ್ನು ಐದು ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು.

177. ಹಿಂದುಳಿದ ವರ್ಗಗಳ ಸುಮಾರು 25,000 ಯುವ ಜನರಿಗೆ ಕೌಶಲ್ಯ ಅಭಿವೃದ್ಧಿ ಪಡಿಸಿ ಉದ್ಯೋಗಮುಖಿಯನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ ITIs, GTTC, KGTTI ರಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು "ಅಮೃತ ಮುನ್ನಡೆ" ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗುವುದು.

178. ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಿಂದ 50,000 ವಿದ್ಯಾರ್ಥಿಗಳಿಗೆ ಸರ್ಕಾರಿ ಉದ್ಯೋಗಕ್ಕೆ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ತರಬೇತಿ ನೀಡಲಾಗುವುದು.

179. **ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಲ್ಲಿನ ವಿವಿಧ ಯೋಜನೆಗಳಡಿಯಲ್ಲಿ ಬಹುವಿಧ ವಸತಿ ಶಾಲೆಗಳನ್ನು ನಡೆಸಲಾಗುತ್ತಿದ್ದು, ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳನ್ನು ಒಂದುಗೂಡಿಸಲಾಗುವುದು. ಪ್ರತಿ ಜಿಲ್ಲೆಯ ಕನಿಷ್ಠ ಒಂದು ಶಾಲೆಯಲ್ಲಿ ಪದವಿ ಪೂರ್ವ ತರಗತಿಗಳನ್ನು ಆರಂಭಿಸಲಾಗುವುದಲ್ಲದೆ, ಸ್ಮಾರ್ಟ್ ಕ್ಲಾಸ್, ಕಂಪ್ಯೂಟರ್ ಮತ್ತು ವಿಜ್ಞಾನ ಪ್ರಯೋಗಾಲಯಗಳನ್ನು ಒದಗಿಸಿ ಉನ್ನತೀಕರಿಸಲಾಗುವುದು. ಈ ಶಾಲೆಗಳನ್ನು "ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ" ಗಳೆಂದು ಮರುನಾಮಕರಣ ಮಾಡಿ ಸಿ.ಬಿ.ಎಸ್.ಇ. ಮಾನ್ಯತೆ ಪಡೆಯಲು ಕ್ರಮವಹಿಸಲಾಗುವುದು. ಈ ಉದ್ದೇಶಕ್ಕಾಗಿ ಒಟ್ಟಾರೆ 25 ಕೋಟಿ ರೂ.ಗಳ ಹಂಚಿಕೆ ಮಾಡಲಾಗುವುದು.**

180. ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ 100 ವಿದ್ಯಾರ್ಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸಲು 10 ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದು.

181. **ನಾಡಿನ ಕ್ರಿಶ್ಚಿಯನ್ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ 50 ಕೋಟಿ ರೂ. ಮೊತ್ತದಲ್ಲಿ ಯೋಜನೆಗಳನ್ನು ರೂಪಿಸಲಾಗುವುದು.**

182. **ಜೈನ್, ಸಿಖ್ ಮತ್ತು ಬೌದ್ಧ ಸಮುದಾಯಗಳ ಸಮಗ್ರ ಅಭಿವೃದ್ಧಿಗೆ 50 ಕೋಟಿ ರೂ. ಮೊತ್ತವನ್ನು ಒದಗಿಸಲಾಗುವುದು.**

183. ರಾಜ್ಯದಲ್ಲಿನ ವಕ್ಫ್ ಆಸ್ತಿಗಳ ಸಮಗ್ರ ಸಂರಕ್ಷಣೆಗಾಗಿ ಅತ್ಯಾಧುನಿಕ ತಂತ್ರಜ್ಞಾನ ಹಾಗೂ ಡ್ರೋನ್ ಟೆಕ್ನಾಲಜಿಯನ್ನು ಬಳಸಿ ಸಂಪೂರ್ಣ ಸರ್ವೆ ಮಾಡಲಾಗುವುದು ಹಾಗೂ ಸದರಿ ಆಸ್ತಿಗಳ ದುರ್ಬಳಕೆಯನ್ನು ತಡೆಯಲು ನಮ್ಮ ಸರ್ಕಾರವು ಉದ್ದೇಶಿಸಿದೆ.

184. ಉರ್ದು ಅಕಾಡೆಮಿ ವತಿಯಿಂದ ಶಾಸ್ತ್ರೀಯ ಭಾಷೆಗಳ ಉತ್ಕೃಷ್ಟ ಸಾಹಿತ್ಯದ ಪುಸ್ತಕಗಳನ್ನು ಉರ್ದು ಭಾಷೆಗೆ ಅನುವಾದ ಮಾಡುವ ಮತ್ತು ಮುದ್ರಣ ಕಾರ್ಯವನ್ನು ಕೈಗೊಳ್ಳಲಾಗುವುದು.

185. ಅಲ್ಪಸಂಖ್ಯಾತರ ಇಲಾಖೆಯಡಿಯಲ್ಲಿನ ಪರವಾನಗಿ ಪಡೆದಿರುವ ಬೀದಿ ಬದಿ ವ್ಯಾಪಾರಿಗಳು, ತಳ್ಳುಗಾಡಿ, ಹೂ ಮಾರಾಟಗಾರರು, ಸಣ್ಣಮುಟ್ಟ ತರಕಾರಿ ಮತ್ತು ಹಣ್ಣು ವ್ಯಾಪಾರಿಗಳಿಗೆ ಹಾಗೂ ಆಟೋ ಚಾಲಕರಿಗೆ ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಸಹಯೋಗದೊಂದಿಗೆ ಆರ್ಥಿಕ ಸಹಾಯವನ್ನು ಒದಗಿಸಲಾಗುವುದು.

186. ಅಲ್ಪಸಂಖ್ಯಾತರ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ಕೊಳಚೆ ಪ್ರದೇಶಗಳ ಅಭಿವೃದ್ಧಿಗಾಗಿ ವಿಶೇಷ ಯೋಜನೆ ರೂಪಿಸಲಾಗುವುದು.

187. ಮನೆಯನ್ನು ಹೊಂದಿಲ್ಲದ ಸರ್ವರಿಗೂ ಸೂರು ಒದಗಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿರುತ್ತದೆ. 2021-22ನೇ ಸಾಲಿನಲ್ಲಿ 2.96 ಲಕ್ಷ ಮನೆಗಳನ್ನು ಪೂರ್ಣಗೊಳಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಮೂರು ಲಕ್ಷ ಮನೆಗಳನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. **ಇದಲ್ಲದೇ, ಇತ್ತೀಚೆಗೆ ನಮ್ಮ ಸರ್ಕಾರವು ಒಟ್ಟು ಐದು ಲಕ್ಷ ಹೊಸ ಮನೆಗಳ ಗುರಿಯನ್ನು 6,612 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಮಂಜೂರು ಮಾಡಿದೆ.**

188. **ಮುಖ್ಯಮಂತ್ರಿಗಳ ಒಂದು ಲಕ್ಷ ಬೆಂಗಳೂರು ಬಹುಮಹಡಿ ವಸತಿ ಯೋಜನೆಯಡಿ ಇಲ್ಲಿಯವರೆಗೆ 53,807 ಮನೆಗಳಿಗೆ ಟೆಂಡರ್ ಕರೆಯಲಾಗಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತವೆ. ಇವುಗಳ ಪೈಕಿ 20,000 ಮನೆಗಳನ್ನು ಪ್ರಸಕ್ತ ಸಾಲಿನ ಅಂತ್ಯಕ್ಕೆ ಪೂರ್ಣಗೊಳಿಸಿ, ಫಲಾನುಭವಿಗಳಿಗೆ ನೀಡಲಾಗುವುದು.**

189. 75ನೇ ಸ್ವಾತಂತ್ರ್ಯದ ಅಮೃತ ಮಹೋತ್ಸವ ಸವಿನೆನಪಿಗಾಗಿ "ಅಮೃತ ಗ್ರಾಮೀಣ ವಸತಿ ಯೋಜನೆ" ಅಡಿ ಆಯ್ದ 750 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ವಸತಿ ರಹಿತ ಮತ್ತು ನಿವೇಶನ ರಹಿತರನ್ನು ಗುರುತಿಸಿ ಸರ್ವರಿಗೂ ವಸತಿ ಕಲ್ಪಿಸಲು ಉದ್ದೇಶಿಸಲಾಗಿದೆ.

190. ಕರ್ನಾಟಕ ಗೃಹ ಮಂಡಳಿಯ ವತಿಯಿಂದ ವಸತಿ ಬಡಾವಣೆಗಳ ಅಭಿವೃದ್ಧಿ, ಮನೆಗಳ ನಿರ್ಮಾಣ ಮತ್ತು ಸಹಭಾಗಿತ್ವದಲ್ಲಿ ವಸತಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು,

10 ಯೋಜನೆಗಳಡಿಯಲ್ಲಿ 10,555 ನಿವೇಶನಗಳು ನಿರ್ಮಾಣ ಮಾಡಲಾಗುತ್ತಿದೆ. ಹೆಚ್ಚುವರಿಯಾಗಿ 11 ವಸತಿ ಯೋಜನೆಗಳು ತಯಾರಿಕಾ ಹಂತದಲ್ಲಿದ್ದು, ಇದರಿಂದ 11,674 ನಿವೇಶನಗಳನ್ನು ಅಭಿವೃದ್ಧಿಪಡಿಸಲಾಗುವುದು.

191. **ಮನೆಗಳು ಹಾಗೂ ವಸತಿ ಬಡಾವಣೆಗಳನ್ನು ನಿರ್ಮಿಸಲು ಅವಶ್ಯಕವಿರುವ ಹಲವು ಇಲಾಖೆಗಳ ಅನುಮತಿ ಪಡೆಯುವ ಪ್ರಕ್ರಿಯೆ ಕ್ಲಿಷ್ಟಕರವಾಗಿದ್ದು, ಅನಗತ್ಯ ವಿಳಂಬವಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ಮನಗಂಡು ನಮ್ಮ ಸರ್ಕಾರವು ಸಂಬಂಧಿತ ಇಲಾಖೆಗಳ ಅನುಮತಿಯನ್ನು ಒಂದೇ ಬಾರಿಗೆ ಪಡೆಯುವ ಸಂಬಂಧ ಚಾಲ್ತಿಯಲ್ಲಿರುವ ಅನುಮೋದನೆ ಪ್ರಕ್ರಿಯೆಗಳನ್ನು ಸರಳೀಕರಿಸಲು ಉದ್ದೇಶಿಸಿದೆ.**

192. ಸರ್ಕಾರಿ ಮಾಲೀಕತ್ವದಲ್ಲಿರುವ ಕೊಳಚೆ ಪ್ರದೇಶಗಳಲ್ಲಿ ವಾಸಿಸುವ ಅಂದಾಜು 3.36 ಲಕ್ಷ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲಾಗುವುದು.

193. ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ (ಗ್ರಾಮೀಣ) ಒಟ್ಟು 25.40 ಲಕ್ಷ ವಸತಿ ಮತ್ತು ನಿವೇಶನ ರಹಿತರ ಮಾಹಿತಿಯನ್ನು ಕೇಂದ್ರ ಸರ್ಕಾರದ AWAS + Database ನಲ್ಲಿ ನಮೂದು ಮಾಡುವ ಪ್ರಸ್ತಾವನೆಯನ್ನು ಇತ್ತೀಚೆಗೆ ಅನುಮೋದಿಸಲಾಗಿದೆ.

194. ಸರ್ಕಾರದ ವಿವಿಧ ವಸತಿ ಯೋಜನೆಯಡಿ ನಿವೇಶನವನ್ನು ಅಡಮಾನ ಮಾಡುವುದರಿಂದ ಸಂಪೂರ್ಣ ವಿನಾಯಿತಿ ನೀಡಲಾಗಿದ್ದು, ಇದರಿಂದ ನೋಂದಣಿ ಮಾಡುವ ಪಕ್ರಿಯೆಯಲ್ಲಿ ಉಂಟಾಗುತ್ತಿರುವ ವಿಳಂಬವನ್ನು ತಪ್ಪಿಸಿ, ಫಲಾನುಭವಿಗಳು ಶೀಘ್ರವಾಗಿ ಮನೆ ನಿರ್ಮಿಸಿಕೊಳ್ಳಲು ಅನುಕೂಲವಾಗುತ್ತದೆ.

195. ಕೇಂದ್ರ ಸರ್ಕಾರವು 2023 ವರ್ಷವನ್ನು ಅಂತಾರಾಷ್ಟ್ರೀಯ ಸಿರಿಧಾನ್ಯಗಳ ವರ್ಷವಾಗಿ ಆಚರಿಸಲು ಘೋಷಿಸಿದೆ. ಅದೇ ರೀತಿಯಲ್ಲಿ ನಮ್ಮ ಸರ್ಕಾರವು ರೈತರಿಗೆ ತರಬೇತಿ, ತಾಂತ್ರಿಕ ನೆರವು, ಆಹಾರ ಸಂಸ್ಕರಣೆ ಮತ್ತು ಮಾರುಕಟ್ಟೆ ಬೆಂಬಲ ನೀಡಲು ಉದ್ದೇಶಿಸಲಾಗಿದೆ.

196. **ಆಹಾರ ಪದ್ಧತಿಯಲ್ಲಿ ಸಿರಿಧಾನ್ಯದ ಬಳಕೆಯನ್ನು ಉತ್ತೇಜಿಸಲು 2022-23ನೇ ಸಾಲಿನಲ್ಲಿ ಸುಮಾರು 4.34 ಕೋಟಿ ಫಲಾನುಭವಿಗಳಿಗೆ ಐದು ಕೆ.ಜಿ. ಅಕ್ಕಿಯನ್ನು ಒದಗಿಸುವುದರ ಜೊತೆಗೆ ಹೆಚ್ಚುವರಿಯಾಗಿ 1400 ಕೋಟಿ ರೂ.ಗಳ ವೆಚ್ಚದಲ್ಲಿ ಒಂದು ಕೆ.ಜಿ. ರಾಗಿ ಅಥವಾ ಜೋಳವನ್ನು ವಿತರಿಸಲಾಗುವುದು.**

197. 2022-23ನೇ ಸಾಲಿನಲ್ಲಿ 2.30 ಲಕ್ಷ ಕಟ್ಟಡ ಕಾರ್ಮಿಕರಿಗೆ ವಿವಿಧ ಯೋಜನೆಗಳನ್ನು ಅಂದಾಜು 2610 ಕೋಟಿ ರೂ.ಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು. ಹಿಂದಿನ ವರ್ಷದಲ್ಲಿ ಕೋವಿಡ್-19 ಲಾಕ್‌ಡೌನ್‌ನಿಂದಾಗಿ ಸಂಕಷ್ಟಕ್ಕೊಳಗಾದ ಸುಮಾರು 11.89 ಲಕ್ಷ ಅಸಂಘಟಿತ ಕಾರ್ಮಿಕರಿಗೆ ರಾಜ್ಯ ಸರ್ಕಾರದ ವತಿಯಿಂದ ಒಟ್ಟು 238 ಕೋಟಿ ರೂ.ಗಳ ನೆರವನ್ನು ವಿತರಿಸಲಾಗಿದೆ.

198. ಕಟ್ಟಡ ಕಾರ್ಮಿಕರ ಮಕ್ಕಳಿಗೆ ನೀಡಲಾಗುತ್ತಿರುವ ಶೈಕ್ಷಣಿಕ ಧನ ಸಹಾಯವನ್ನು ದ್ವಿಗುಣಗೊಳಿಸಿ, ಸರಳೀಕೃತ ಆನ್‌ಲೈನ್ ವ್ಯವಸ್ಥೆ SSP ಪೋರ್ಟಲ್ ಮೂಲಕ ಒಂದು ಲಕ್ಷ ವಿದ್ಯಾರ್ಥಿಗಳಿಗೆ ಸುಮಾರು 150 ಕೋಟಿ ರೂ.ಗಳನ್ನು ಡಿ.ಬಿ.ಟಿ. ಮೂಲಕ ವಿತರಿಸಲಾಗಿದೆ ಹಾಗೂ 500 ಕಟ್ಟಡ ಕಾರ್ಮಿಕರ ಮಕ್ಕಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆ.

199. ನಿರಂತರವಾಗಿ ಕೆಲಸವನ್ನರಸಿ ಸಂಚರಿಸುವ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರಿಗೆ ಉತ್ತಮ ಕೆಲಸದ ವಾತಾವರಣವನ್ನು ಸೃಷ್ಟಿಸಲು ಸುಸಜ್ಜಿತವಾದ ತಾತ್ಕಾಲಿಕ ವಸತಿ ಗೃಹ ಸೌಲಭ್ಯವನ್ನು ಕಟ್ಟಡ ಕಾರ್ಮಿಕರ ಸಂಖ್ಯೆ ಹೆಚ್ಚಿರುವ ಸ್ಥಳಗಳಲ್ಲಿ ನಿರ್ಮಿಸಲಾಗುವುದು.

200. ಕಟ್ಟಡ ಕಾರ್ಮಿಕರ ಸಾಂದ್ರತೆ ಹೆಚ್ಚಿರುವ ಪ್ರಮುಖ ಸ್ಥಳಗಳಲ್ಲಿ ಕಾರ್ಮಿಕರ ಆರೋಗ್ಯ ಕಾಪಾಡುವ ಉದ್ದೇಶದಿಂದ 100 ಹೈಟೆಕ್ ಸಂಚಾರಿ ಕ್ಲಿನಿಕ್‌ಗಳನ್ನು ಪ್ರಾರಂಭಿಸಲಾಗುವುದು.

201. ಕೇಂದ್ರ ಸರ್ಕಾರದ ನೆರವಿನೊಂದಿಗೆ ಹುಬ್ಬಳ್ಳಿ ಮತ್ತು ದಾವಣಗೆರೆ ಕಾರ್ಮಿಕ ರಾಜ್ಯ ವಿಮಾ ಆಸ್ಪತ್ರೆಗಳ ಹಾಸಿಗೆಗಳ ಸಾಮರ್ಥ್ಯವನ್ನು ಹಾಲಿಯಿರುವ 50 ರಿಂದ 100ಕ್ಕೆ ಪ್ರಸಕ್ತ ಸಾಲಿನಲ್ಲಿ ಹೆಚ್ಚಿಸಲಾಗುವುದು ಹಾಗೂ ರಾಜ್ಯದಲ್ಲಿ 19 ಹೊಸ ಚಿಕಿತ್ಸಾಲಯಗಳನ್ನು ಪ್ರಾರಂಭಿಸಲಾಗುವುದು.

202. **ಯುವಕರು ಮತ್ತು ಮಹಿಳೆಯರಿಗೆ, ವಿಶೇಷವಾಗಿ ದುರ್ಬಲವರ್ಗದವರಿಗೆ ಉದ್ಯೋಗ ಒದಗಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ. ಗ್ರಾಮೀಣ ಜೀವನೋಪಾಯ ಅಭಿಯಾನವು ಒಂದು ದಶಕವನ್ನು ಪೂರ್ಣಗೊಳಿಸುವ ಹಿನ್ನೆಲೆಯಲ್ಲಿ, 2022–23ನೇ ವರ್ಷವನ್ನು "ಜೀವನೋಪಾಯ ವರ್ಷ" ಎಂದು ಆಚರಿಸಲಾಗುವುದು. ಈ ಅಭಿಯಾನದಡಿ ಒಟ್ಟು 1,100 ಕೋಟಿ ರೂ.ಗಳ ಕ್ರಿಯಾಯೋಜನೆಯನ್ನು ಪ್ರಸ್ತಾಪಿಸಲಾಗಿದೆ.**

203. 2021–22 ರ ಅವಧಿಯಲ್ಲಿ ಒಂದು ಲಕ್ಷ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿಯನ್ನು ನೀಡಲಾಗಿದ್ದು, 25,000 ಅಭ್ಯರ್ಥಿಗಳಿಗೆ ನೇರ

ಉದ್ಯೋಗ ಒದಗಿಸಲಾಗಿದೆ. 2022–23 ರ ಅವಧಿಯಲ್ಲಿ 2.50 ಲಕ್ಷ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲಾಗುವುದು.

204. **ಸ್ವ–ಸಹಾಯ ಸಂಘಗಳನ್ನು ಸಣ್ಣ ಉದ್ಯಮಗಳನ್ನಾಗಿ ಮಾಡಲು ನನ್ನ ಸರ್ಕಾರವು ಈಗಾಗಲೇ ಅಮೃತ ಯೋಜನೆಯನ್ನು ಘೋಷಿಸಿದೆ. ರಾಜ್ಯದ ಸ್ವ–ಸಹಾಯ ಸಂಘಗಳನ್ನು ಉತ್ತೇಜಿಸಲು ಈ ಕೆಳಗಿನಂತೆ ಪ್ರಸ್ತಾಪಿಸಿದೆ.**

ಅ. ಆಯ್ದ ಸ್ವ–ಸಹಾಯ ಸಂಘಗಳಿಗೆ ಅವುಗಳು ಆರ್ಥಿಕ ಸ್ವಾತಂತ್ರ್ಯ ಗಳಿಸಲು ಸಾಧ್ಯವಾಗಲು ಹಾಗೂ ತಮ್ಮ ಉದ್ಯಮಶೀಲತೆಯನ್ನು ಮತ್ತಷ್ಟು ವೃದ್ಧಿಪಡಿಸಿಕೊಳ್ಳುವುದಕ್ಕಾಗಿ ತಲಾ 1.5 ಲಕ್ಷ ರೂ.ಗಳ ನೆರವನ್ನು ಒದಗಿಸಲಾಗುವುದು. ಇದಕ್ಕಾಗಿ ಪ್ರಸಕ್ತ ವರ್ಷದಲ್ಲಿ 500 ಕೋಟಿ ರೂ.ಗಳನ್ನು ಒದಗಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡದವರ ಗುಂಪುಗಳಿಗೆ ವಿಶೇಷ ಆದ್ಯತೆಯನ್ನು ನೀಡಲು 50 ಕೋಟಿ ರೂ.ಗಳ ಮೊತ್ತದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಇದರಿಂದ ಸುಮಾರು 3.9 ಲಕ್ಷ ಮಹಿಳೆಯರಿಗೆ ಅನುಕೂಲವಾಗಲಿದೆ.

ಆ. ಮಹಿಳಾ ಸ್ವ–ಸಹಾಯ ಸಂಘಗಳು ವಾಣಿಜ್ಯ ಬ್ಯಾಂಕುಗಳಿಂದ ಸಾಲ ಸೌಲಭ್ಯಗಳನ್ನು ಪಡೆಯುವುದು ಕಷ್ಟಸಾಧ್ಯವಾಗಿರುತ್ತದೆ. ಇದನ್ನು ಮನಗಂಡು ನಮ್ಮ ಸರ್ಕಾರವು ಸಾರ್ವಜನಿಕ ವಲಯದ ಬ್ಯಾಂಕುಗಳ ಸಹಯೋಗದೊಂದಿಗೆ ಏಕಗವಾಕ್ಷಿ ಸಾಲ ಸೌಲಭ್ಯವನ್ನು ರಾಷ್ಟ್ರೀಯ ಗ್ರಾಮೀಣ ಜೀವನೋಪಾಯದ ಮುಖೇನ ಲಭ್ಯಪಡಿಸಲಾಗುವುದು. ಇದಕ್ಕೆ ಸಾರ್ವಜನಿಕ ವಲಯದ

ಒಂದು ಬ್ಯಾಂಕನ್ನು Anchor Bank ಎಂದು ಗುರುತಿಸಲಾಗುವುದು.

ಇ. ಸ್ವ-ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳಿಗೆ ಬ್ರ್ಯಾಂಡಿಂಗ್, ಮೌಲ್ಯವರ್ಧನೆ, ಆಕರ್ಷಣೀಯ ಪ್ಯಾಕಿಂಗ್ ವ್ಯವಸ್ಥೆಯನ್ನು ಒದಗಿಸಿ ಬೃಹತ್ ಮಟ್ಟದಲ್ಲಿ ಮಾರುಕಟ್ಟೆ ವೇದಿಕೆಗಳ ಅವಕಾಶಕ್ಕಾಗಿ "ಅಸ್ಮಿತೆ" ಹೆಸರಿನಡಿ ಎಲ್ಲಾ ಉತ್ಪನ್ನಗಳಿಗೆ ಮಾರಾಟ ವ್ಯವಸ್ಥೆ ಅಭಿವೃದ್ಧಿಪಡಿಸಲಾಗುವುದು. ಈ ಉದ್ದೇಶಕ್ಕಾಗಿ ಹೋಬಳಿ / ಜಿಲ್ಲೆ / ರಾಜ್ಯ ಮಟ್ಟದಲ್ಲಿ ಮಾರಾಟ ಮೇಳಗಳನ್ನು ನಡೆಸಲಾಗುವುದು. ಸರ್ಕಾರದ ವಿವಿಧ ಇಲಾಖೆಗಳಡಿಯಲ್ಲಿ ಮಾಡಲಾಗುವ ಸಂಗ್ರಹಣೆಯಲ್ಲಿ ಸ್ವ-ಸಹಾಯ ಗುಂಪುಗಳಿಂದ ತಯಾರಿಸಲ್ಪಟ್ಟ ಉತ್ಪನ್ನಗಳಿಗೆ ಆದ್ಯತೆ ನೀಡಲಾಗುವುದು.

ಈ. ಸ್ತ್ರೀಶಕ್ತಿ ಒಕ್ಕೂಟದ ಸದಸ್ಯರು ತಮ್ಮ ಚಟುವಟಿಕೆಗಳನ್ನು ಕೈಗೊಳ್ಳಲು ಅನುಕೂಲವಾಗುವಂತೆ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಪ್ರಸ್ತುತ 200 ವರ್ಕ್ ಶೆಡ್‌ಗಳನ್ನು ಈಗಾಗಲೇ ನಿರ್ಮಿಸಲಾಗಿದ್ದು, 2022-23ನೇ ಸಾಲಿನಲ್ಲಿ ಹೆಚ್ಚುವರಿಯಾಗಿ 750 ವರ್ಕ್ ಶೆಡ್‌ಗಳನ್ನು ನಿರ್ಮಿಸಲಾಗುವುದು.

ಉ. ಮಹಿಳಾ ಸ್ವ-ಸಹಾಯ ಗುಂಪುಗಳನ್ನು ಉತ್ತೇಜಿಸಲು ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ಸರ್ಕಾರಿ ಕಛೇರಿ ಸಂಕೀರ್ಣದಲ್ಲಿ ಮಹಿಳಾ ಸ್ವಸಹಾಯ ಸಂಘಗಳು ನಡೆಸುವ ಕ್ಯಾಂಟೀನ್ ಮತ್ತು ಮಾರಾಟ ಮಳಿಗೆಯನ್ನು ಸ್ಥಾಪಿಸಲಾಗುವುದು.

ಊ. ವೇತನ, ವಹಿವಾಟು, ಉದ್ಯೋಗ ಮತ್ತು ರಫ್ತು ಹೆಚ್ಚಳ ಗುರಿಯೊಂದಿಗೆ ಚಿಕ್ಕಬಳ್ಳಾಪುರದಲ್ಲಿ ಚರ್ಮದ ಬೊಂಬೆ, ಧಾರವಾಡದಲ್ಲಿ ಕಸೂತಿ, ಕೊಪ್ಪಳದಲ್ಲಿ ಕೌದಿ ಮತ್ತು ಕಿನ್ಹಾಳ ಬೊಂಬೆ, ಮೈಸೂರಿನಲ್ಲಿ ಅಗರಬತ್ತಿ, ನವಲಗುಂದದಲ್ಲಿ ಜಮಖಾನಾ, ಚನ್ನಪಟ್ಟಣದಲ್ಲಿ ಆಟಿಕೆ, ಇಳಕಲ್-ಗುಳೇದಗುಡ್ಡ, ಬೆಳಗಾವಿ-ಶಹಾಪುರ, ಶಿಡ್ಲಘಟ್ಟ ಮತ್ತು ಮೊಳಕಾಲ್ಮೂರುಗಳಲ್ಲಿ ಸೀರೆ ಮೈಕ್ರೋಕ್ಲಸ್ಟರ್ ಅನ್ನು ಅಭಿವೃದ್ಧಿಪಡಿಸಲಾಗುವುದು.

205. ಹೊಸೂರು ರಸ್ತೆಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಟ್ಟಡ ಮತ್ತು ಕಾರ್ಯಾಗಾರವನ್ನು ಏಳು ಕೋಟಿ ರೂ. ಗಳ ವೆಚ್ಚದಲ್ಲಿ ನಮ್ಮ ಮೆಟ್ರೋ, ಬೆಂಗಳೂರು ಸಹಯೋಗದೊಂದಿಗೆ ನವೀಕರಿಸಿ ಮತ್ತು ಉನ್ನತೀಕರಿಸಲಾಗುವುದು.

206. 2021-22 ರ ಅವಧಿಯಲ್ಲಿ 150 ಸರ್ಕಾರಿ ITI ಗಳನ್ನು ಟಾಟಾ ಟೆಕ್ನಾಲಜಿ ಸಹಯೋಗದೊಂದಿಗೆ ಮೇಲ್ದರ್ಜೆಗೇರಿಸಲಾಗಿದೆ. 2022-23 ರ ಅವಧಿಯಲ್ಲಿ ಇನ್ನು 30 ಸರ್ಕಾರಿ ಐಟಿಐಗಳು ಹಾಗೂ ಆಯ್ದ ಪಾಲಿಟೆಕ್ನಿಕ್‌ಗಳನ್ನು ಪಿ.ಪಿ.ಪಿ ಮಾದರಿಯಲ್ಲಿ ಮೇಲ್ದರ್ಜೆಗೇರಿಸಲಾಗುವುದು.

207. ದೇವನಹಳ್ಳಿ, ಶಿಗ್ಗಾಂವ್ ಮತ್ತು ಮಾಗಡಿ ತಾಲ್ಲೂಕಿನಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (GTTC) ಗಳಲ್ಲಿ Aerospace, Precision Engineering, Mechatronics, Electronic ಮತ್ತು Industrial Automation ಕ್ಷೇತ್ರಗಳಲ್ಲಿ ತರಬೇತಿದಾರರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸಲಾಗುವುದು.

208. **ಸರ್ವೋದಯ ಮತ್ತು ಕ್ಷೇಮಾಭಿವೃದ್ಧಿ ವಲಯಕ್ಕೆ 2022–23ನೇ ಸಾಲಿನಲ್ಲಿ ಒಟ್ಟಾರೆಯಾಗಿ 68,479 ಕೋಟಿ ರೂ. ಅನುದಾನ ಒದಗಿಸಲಾಗಿದೆ.**

209. **ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಹಾಗೂ ದುರ್ಬಲ ವರ್ಗಗಳ ಕಲ್ಯಾಣಕ್ಕಾಗಿ ನಮ್ಮ ಸರ್ಕಾರವು ಅತ್ಯಂತ ಹೆಚ್ಚಿನ ಪ್ರಾಮುಖ್ಯತೆ ನೀಡಿದ್ದು, ಕಳೆದ ಸಾಲಿನ ಆಯವ್ಯಯಕ್ಕಿಂತ ಪ್ರಸ್ತುತ ಸಾಲಿನಲ್ಲಿ ಶಿಕ್ಷಣ, ಆರೋಗ್ಯ, ಕೌಶಲ್ಯಾಭಿವೃದ್ಧಿ ಮತ್ತು ವಿವಿಧ ಕಲ್ಯಾಣ ಇಲಾಖೆಗಳಿಗೆ 6,329 ಕೋಟಿ ರೂ.ಗಳನ್ನು ಹೆಚ್ಚುವರಿಯಾಗಿ ನಾನು ನೀಡಿರುತ್ತೇನೆ.**

## ವಲಯ 3: ಆರ್ಥಿಕ ಅಭಿವೃದ್ಧಿಗೆ ಉತ್ತೇಜನೆ

***'ಸರ್ವೋದಯಕ್ಕೆ ಭದ್ರವಾದ ಆಧಾರ ಮತ್ತು ಬಲಿಷ್ಠ ಅಸ್ತಿಭಾರವಿರುವುದು ಸರ್ವರಿಗೆ ಸಮಬಾಳು, ಸರ್ವರಿಗೆ ಸಮಪಾಲು ಎಂಬ ಆರ್ಥಿಕ ಸಮತೆಯಲ್ಲಿ'***

***– ಕುವೆಂಪು***

ರಾಜ್ಯದಲ್ಲಿ ಉದ್ಯೋಗ ಸೃಷ್ಟಿಗೆ ಹೆಚ್ಚಿನ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಹಲವಾರು ಕ್ರಮಗಳನ್ನು ಕೈಗೊಂಡಿದೆ. ಇದರ ಪರಿಣಾಮವಾಗಿ ರಾಜ್ಯವು ದೇಶದಲ್ಲಿ ಹೂಡಿಕೆದಾರ ಸ್ನೇಹಿ ರಾಜ್ಯಗಳ ಸಾಲಿನಲ್ಲಿ ಮುಂಚೂಣಿಯಲ್ಲಿದೆ. ಹೆಚ್ಚು ಕೈಗಾರಿಕೆಗಳನ್ನು ಆಕರ್ಷಿಸುವ ಜೊತೆಗೆ ಹೆಚ್ಚು ಉದ್ಯೋಗ ಸೃಜನೆಯನ್ನೂ ಪ್ರೋತ್ಸಾಹಿಸಲಾಗುತ್ತದೆ. ರಾಜ್ಯದ ಆರ್ಥಿಕತೆಗೆ

ಹೆಚ್ಚಿನ ಕೊಡುಗೆ ನೀಡುವ ಐಟಿ/ಬಿಟಿ ವಲಯಗಳಿಗೂ ಉತ್ತೇಜನ ನೀಡಲಾಗುತ್ತಿದ್ದು, ಯುವಕರಲ್ಲಿ ಉದ್ಯಮಶೀಲತೆ ಅಭಿವೃದ್ಧಿ ಪಡಿಸಲೂ ಒತ್ತು ನೀಡಲಾಗುತ್ತಿದೆ.

ಈ ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಅಗತ್ಯ ಮೂಲಸೌಕರ್ಯ, ಸಾರಿಗೆ ಸಂಪರ್ಕ, ವಿದ್ಯುತ್ ಉತ್ಪಾದನೆ ಮತ್ತಿತರ ಕ್ಷೇತ್ರಗಳಿಗೂ ಆದ್ಯತೆ ನೀಡಲಾಗಿದೆ.

210. **2024ರೊಳಗೆ ದೇಶದ ಎಲ್ಲಾ ಗ್ರಾಮೀಣ ಮನೆಗಳಿಗೆ ನಳ ಸಂಪರ್ಕದ ಮೂಲಕ ಕುಡಿಯುವ ನೀರನ್ನು ಒದಗಿಸಲು ಜಲಜೀವನ್ ಮಿಷನ್ ಯೋಜನೆ ಜಾರಿಗೊಂಡಿರುತ್ತದೆ. ಈ ಯೋಜನೆಯಡಿ ಇದುವರೆಗೆ 3,592 ಕೋಟಿ ರೂ. ಗಳ ವೆಚ್ಚದಲ್ಲಿ 21.28 ಲಕ್ಷ ಮನೆಗಳಿಗೆ ನಳ ಸಂಪರ್ಕ ಒದಗಿಸಲಾಗಿದ್ದು, ಮುಂದಿನ ಎರಡು ವರ್ಷಗಳಲ್ಲಿ ತಲಾ 25 ಲಕ್ಷ ಮನೆಗಳಿಗೆ ನಳ ಸಂಪರ್ಕ ಒದಗಿಸಲು ಉದ್ದೇಶಿಸಲಾಗಿದೆ. 2022-23ನೇ ಸಾಲಿನಲ್ಲಿ 7,000 ಕೋಟಿ ರೂ.ಗಳನ್ನು ವೆಚ್ಚ ಮಾಡುವ ಗುರಿ ಹೊಂದಲಾಗಿದೆ.**

211. 2021-22ನೇ ಸಾಲಿಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ 13 ಕೋಟಿ ಮಾನವ ದಿನಗಳ ಉದ್ಯೋಗವನ್ನು ಸೃಜಿಸುವ ಗುರಿಗೆದುರಾಗಿ 14.05 ಕೋಟಿ ಮಾನವ ದಿನಗಳನ್ನು ಸೃಜಿಸಲಾಗಿದೆ. ಈ ಯೋಜನೆಯಡಿಯಲ್ಲಿ ರೈತರು ತಮ್ಮ ಹೊಲಕ್ಕೆ ಹೋಗುವ ರಸ್ತೆಗಳನ್ನು ಆದ್ಯತೆ ಮೇಲೆ ತೆಗೆದುಕೊಳ್ಳಲಾಗುವುದು.

212. PMGSY ಯೋಜನೆಯಡಿಯಲ್ಲಿ ಇದುವರೆವಿಗೂ 1,214 ಕಿ.ಮೀ.ಗಳ ಉದ್ದದ ರಸ್ತೆಗಳನ್ನು ನಿರ್ಮಿಸಲಾಗಿದ್ದು,

ಇನ್ನೂ 1,286 ಕಿ.ಮೀ.ಗಳ ಉದ್ದದ ರಸ್ತೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ.

213. ರಾಜ್ಯ ಸರ್ಕಾರದ ಅನುದಾನದಲ್ಲಿ ಗ್ರಾಮೀಣ ರಸ್ತೆಗಳ ಸುಧಾರಣೆಗಾಗಿ 1,600 ಕೋಟಿ ರೂ.ಗಳ ಕಾಮಗಾರಿಗಳನ್ನು 2022-23ನೇ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು. ಮಳೆಗಾಲದಲ್ಲಿ ಹಾನಿಯಾಗಿರುವ ರಸ್ತೆಗಳ ಸುಧಾರಣೆಗಾಗಿ 300 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

214. ಅಮೃತ್ ಗ್ರಾಮ ಪಂಚಾಯಿತಿ ಯೋಜನೆಯು ಯಶಸ್ವಿಯಾಗಿ ಅನುಷ್ಠಾನಗೊಳಿಸಿರುವ 750 ಗ್ರಾಮ ಪಂಚಾಯಿತಿಗಳಿಗೆ ತಲಾ 25 ಲಕ್ಷ ರೂ.ಗಳಂತೆ ಅನಿರ್ಬಂಧಿತ ಅನುದಾನ ನೀಡಲು ಒಟ್ಟು 188 ಕೋಟಿ ರೂ.ಗಳನ್ನು ಒದಗಿಸಲಾಗುವುದು. ಪ್ರಸಕ್ತ ವರ್ಷದಲ್ಲಿ ಹೆಚ್ಚುವರಿ 750 ಗ್ರಾಮ ಪಂಚಾಯಿತಿಗಳಲ್ಲಿ ಈ ಯೋಜನೆಯನ್ನು ವಿಸ್ತರಿಸಲು ಉದ್ದೇಶಿಸಿದೆ.

215. ಕೋವಿಡ್ ಸಂದರ್ಭದಲ್ಲಿ ರಾಜ್ಯದ 2,814 ಗ್ರಾಮ ಪಂಚಾಯಿತಿಗಳಿಗೆ ಆರೋಗ್ಯ ಕಿಟ್ ವಿತರಿಸುವ "ಪಂಚಾಯಿತಿ ಆರೋಗ್ಯ ಯೋಜನೆ"ಯನ್ನು ಉಳಿದ 3,146 ಗ್ರಾಮ ಪಂಚಾಯಿತಿಗಳಿಗೆ ವಿಸ್ತರಿಸಲಾಗುವುದು.

216. ರಾಜ್ಯದ 33,000 ಗ್ರಾಮ ಪಂಚಾಯಿತಿ ಕೆರೆಗಳನ್ನು ಸರ್ವೆ ಮಾಡಿಸಿ, ಪ್ರಸ್ತುತ ಪ್ರಾರಂಭಿಕ ಹಂತವಾಗಿ 1,000 ಕೆರೆಗಳನ್ನು ಗುರುತಿಸಿ ಪ್ರತಿ ಕೆರೆಗೆ 10 ಲಕ್ಷ ರೂ.ಗಳ ವೆಚ್ಚದಲ್ಲಿ ಕೆರೆಗಳನ್ನು ಅಭಿವೃದ್ಧಿಪಡಿಸಲು 100 ಕೋಟಿ ರೂ.ಗಳ ಹಂಚಿಕೆ ಮಾಡಲಾಗುವುದು.

217. ಬೆಂಗಳೂರು ಒನ್ ಮಾದರಿಯಲ್ಲಿ ಸರ್ಕಾರಿ ಸೇವೆಗಳನ್ನು ಗ್ರಾಮಸ್ಥರಿಗೆ ತಲುಪಿಸಲು 12 ಜಿಲ್ಲೆಗಳಲ್ಲಿ ಆರಂಭಿಸಿರುವ ಗ್ರಾಮ ಒನ್ ಯೋಜನೆಯನ್ನು ರಾಜ್ಯಾದ್ಯಂತ ವಿಸ್ತರಿಸಲಾಗುವುದು. ಜೊತೆಗೆ ಜನನ, ಮರಣ ಮತ್ತು ವಿವಾಹ ನೋಂದಣಿಯನ್ನು ಗ್ರಾಮ ಪಂಚಾಯಿತಿಗಳ ಮೂಲಕ ಮಾಡಲಾಗುವುದು.

218. ಡಾ॥ ನಂಜುಂಡಪ್ಪ ನೇತೃತ್ವದ ಉನ್ನತಾಧಿಕಾರ ಸಮಿತಿಯ ಶಿಫಾರಸ್ಸಿನನ್ವಯ ಜಾರಿಗೊಳಿಸಿದ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಈವರೆಗೆ 28,429 ಕೋಟಿ ರೂ.ಗಳ ವೆಚ್ಚ ಮಾಡಲಾಗಿದೆ. ಈ ಯೋಜನೆಯನ್ನು ಮಾನವ ಅಭಿವೃದ್ಧಿಗೆ ಬಹುಮುಖ್ಯವಾಗಿರುವ ಶಿಕ್ಷಣ, ಆರೋಗ್ಯ, ಅಪೌಷ್ಟಿಕತೆ, ಬಡತನ ನಿರ್ಮೂಲನೆ, ನೀರು ಪೂರೈಕೆ ಮತ್ತು ಶುಚಿತ್ವ ಇತ್ಯಾದಿ ಕ್ಷೇತ್ರಗಳ ಮೇಲೆ ಹೆಚ್ಚಿನ ಆದ್ಯತೆ ನೀಡಿ ಇನ್ನಷ್ಟು ಬಲಪಡಿಸುವ ಬಗ್ಗೆ ಪರಿಶೀಲಿಸಲು ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದ್ದು, ಇದರ ಶಿಫಾರಸ್ಸಿನನ್ವಯ ಮುಂದಿನ ಕ್ರಮ ಕೈಗೊಳ್ಳಲಾಗುವುದು.

***ಕಲ್ಯಾಣ ಕೈಲಾಸವೆಂಬ ನುಡಿ ಹಸನಾಯಿತ್ತು***

***– ಅಕ್ಕಮಹಾದೇವಿ***

219. **ಕಲ್ಯಾಣ ಕರ್ನಾಟಕದ "ಅಮೃತ ಮಹೋತ್ಸವ"ದ ಹಿನ್ನೆಲೆಯಲ್ಲಿ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ 3,000 ಕೋಟಿ ರೂ.ಗಳ 'ಅಮೃತ ಆಯವ್ಯಯ' ನೀಡಲಾಗುವುದು. ಈ ಪೈಕಿ ಶಿಕ್ಷಣ, ಸಾಮಾಜಿಕ ಮತ್ತು ಆರ್ಥಿಕ**

**ಅಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳಿಗೆ 1,500 ಕೋಟಿ ರೂ. ಹಾಗೂ ಮೈಕ್ರೋ ಯೋಜನೆಗಳಿಗೆ 1,500 ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ.**

220. ನಮ್ಮ ಸರ್ಕಾರವು 2021-22ನೇ ಸಾಲಿನ ಆಯವ್ಯಯದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಒದಗಿಸಿದ ಮೊತ್ತವನ್ನು ಸಂಪೂರ್ಣವಾಗಿ ಬಿಡುಗಡೆಗೊಳಿಸಿದೆ.

221. **ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಮೂಲಭೂತ ಸೌಕರ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಅಮೃತ್ ನಗರೋತ್ಥಾನ ಯೋಜನೆಯನ್ನು ಒಟ್ಟು 3,885 ಕೋಟಿ ರೂ.ಗಳ ಮೊತ್ತದಲ್ಲಿ 2022-23ನೇ ಸಾಲಿನಿಂದ 2024-25ನೇ ಸಾಲಿನ ಅವಧಿಯಲ್ಲಿ ಅನುಷ್ಠಾನಗೊಳಿಸಲಾಗುವುದು.**

222. **ರಾಜ್ಯದ ಆಯ್ದ ನಗರಗಳಲ್ಲಿ ನೀರಿನ ಸಂಪರ್ಕ ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಮುಂದಿನ ಐದು ವರ್ಷಗಳಲ್ಲಿ ಕೇಂದ್ರ ಪುರಸ್ಕೃತ 'ಅಮೃತ್' 2.0 ಯೋಜನೆಯನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರವು 4,615 ಕೋಟಿ ರೂ.ಗಳನ್ನು ಹಂಚಿಕೆ ಮಾಡಿದೆ.**

223. **ಕೇಂದ್ರ ಪುರಸ್ಕೃತ ಯೋಜನೆಯಾದ ಸ್ವಚ್ಛ ಭಾರತ ಮಿಷನ್-2.0 ಅನ್ನು ಮುಂದಿನ ಐದು ವರ್ಷಗಳ ಅವಧಿಯಲ್ಲಿ 2,245 ಕೋಟಿ ರೂ.ಗಳ ಕೇಂದ್ರದ ನೆರವಿನೊಂದಿಗೆ ಅನುಷ್ಠಾನ ಗೊಳಿಸಲಾಗುವುದು.**

224. **ಪೌರ ಕಾರ್ಮಿಕರು ಕ್ಲಿಷ್ಟಕರ ಹಾಗೂ ಅಪಾಯಕರ ಪರಿಸ್ಥಿತಿಯಲ್ಲಿ ಕಾರ್ಯನಿರ್ವಹಿಸುವುದನ್ನು ಗಮನದಲ್ಲಿಟ್ಟುಕೊಂಡು, ಮೊಟ್ಟಮೊದಲ**

**ಬಾರಿಗೆ ಪೌರಕಾರ್ಮಿಕರಿಗೆ ಮಾಸಿಕ 2,000 ರೂ.ಗಳ ಸಂಕಷ್ಟ ಭತ್ಯೆಯನ್ನು (Hardship Allowance) ಘೋಷಿಸಿದೆ.**

225. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಪ್ರಸ್ತುತ ಒಟ್ಟು 5,878 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಲ್ಲಿ, 2021-22ನೇ ಸಾಲಿನಲ್ಲಿ 18 ಯೋಜನೆಗಳು ಹಾಗೂ 2022-23ನೇ ಸಾಲಿನಲ್ಲಿ 38 ಯೋಜನೆಗಳನ್ನು ಪೂರ್ಣಗೊಳಿಸಲು ಉದ್ದೇಶಿಸಿದೆ.

226. ವಿದ್ಯುತ್ ರಹಿತವೆಂದು ಗುರುತಿಸಲಾದ ರಾಜ್ಯದ 1.65 ಲಕ್ಷ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಜಾರಿಗೊಳಿಸಿದ "ಬೆಳಕು" ಕಾರ್ಯಕ್ರಮದಡಿಯಲ್ಲಿ 98,448 ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಉಳಿದಿರುವ ಎಲ್ಲಾ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು.

227. ನಮ್ಮ ಸರ್ಕಾರವು ಪ್ರಪ್ರಥಮ ಬಾರಿಗೆ ವಿದ್ಯುತ್ ಸರಬರಾಜು ನಿಗಮಗಳ ಪುನರ್ ರಚನೆ, ಆಸ್ತಿ ಹಣಗಳಿಕೆ, ಆರ್ಥಿಕ ಸ್ವಾವಲಂಬನೆ ಹಾಗೂ ಸಂಪನ್ಮೂಲ ಕ್ರೋಢೀಕರಣ ಮಾಡುವ ಸಲುವಾಗಿ ತಜ್ಞ ಸಮಿತಿಯನ್ನು ರಚಿಸಲಾಗಿದೆ.

228. ಕೈಗಾರಿಕಾ ಪ್ರದೇಶಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವ ನಿಟ್ಟಿನಲ್ಲಿ ವಿದ್ಯುತ್ ಅಡಚಣೆ ಎದುರಿಸುತ್ತಿರುವ 15 ಕೈಗಾರಿಕಾ ಪ್ರದೇಶಗಳನ್ನು ಗುರುತಿಸಲಾಗಿದ್ದು, KPTCL ಮತ್ತು ವಿದ್ಯುತ್ ಸರಬರಾಜು ಕಂಪನಿಗಳ (ESCOMs) ವತಿಯಿಂದ ತ್ವರಿತ ಕ್ರಮ ವಹಿಸಲಾಗುವುದು.

229. ರಾಜ್ಯದ ನವೀಕರಿಸಬಹುದಾದ ಇಂಧನ ಮೂಲಗಳನ್ನು ಹೆಚ್ಚಿಸಲು KPCL ನಿಂದ 2,000 ಮೆ.ವ್ಯಾ. ಸಾಮರ್ಥ್ಯದ ಭೂಗರ್ಭ ವಿದ್ಯುತ್ ಕೇಂದ್ರವನ್ನು ಶರಾವತಿ ಸಂಕೀರ್ಣದಲ್ಲಿ 5,391 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ.

230. KPTCL ವತಿಯಿಂದ 64 ಹೊಸ ಉಪಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಇದರಿಂದ ನಿರಂತರವಾಗಿ ಗುಣಮಟ್ಟದ ವಿದ್ಯುತ್ತನ್ನು ಸರಬರಾಜು ಮಾಡಲು ಅನುಕೂಲವಾಗುವುದು.

231. PM-KUSUM Component-B ಯೋಜನೆಯಡಿಯಲ್ಲಿ 227 ಕೋಟಿ ರೂ.ಗಳ ವೆಚ್ಚದಲ್ಲಿ 10,000 ಸೌರಶಕ್ತಿ ಆಧಾರಿತ ನೀರಾವರಿ ಪಂಪ್‌ಸೆಟ್‌ಗಳನ್ನು ಕ್ರೆಡಲ್ ಸಂಸ್ಥೆ ವತಿಯಿಂದ ಅನುಷ್ಠಾನಗೊಳಿಸಲಾಗುವುದು.

232. ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ "ರಾಷ್ಟ್ರೀಯ ಗ್ರೀನ್ ಹೈಡ್ರೋಜನ್ ಮಿಷನ್" ನೀತಿಗೆ ಕೈಜೋಡಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಗ್ರೀನ್ ಹೈಡ್ರೋಜನ್ ನೀತಿಯನ್ನು ರೂಪಿಸಲು ಉದ್ದೇಶಿಸಿದೆ. ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಪ್ರಾಯೋಗಿಕವಾಗಿ ಗ್ರೀನ್ ಹೈಡ್ರೋಜನ್ ಯೋಜನೆಯ ಸಾಧ್ಯಾಸಾಧ್ಯತೆಗಳನ್ನು ಪರಿಶೀಲಿಸಲಾಗುವುದು.

233. ರಾಜ್ಯದ 8 ಜಿಲ್ಲೆಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸುಮಾರು 5,000 ಮೆಗಾ ವ್ಯಾಟ್ ಸಾಮರ್ಥ್ಯದ ಹೈಬ್ರಿಡ್ ಪಾರ್ಕ್ ಅನ್ನು ಸ್ಥಾಪಿಸುವ ಸಾಧ್ಯಾಸಾಧ್ಯತೆಗಳನ್ನು ಪರಿಶೀಲಿಸಲಾಗುವುದು.

234. ವಿದ್ಯುತ್ ಜಾಲದ Real Time Operation ನಿಯಂತ್ರಣಾ ವ್ಯವಸ್ಥೆಗೆ ಅನುಕೂಲವಾಗಲು ಹಾಲಿಯಿರುವ SCADA ವ್ಯವಸ್ಥೆಯನ್ನು 99 ಕೋಟಿ ರೂ.ಗಳ ವೆಚ್ಚದಲ್ಲಿ ಮೇಲ್ದರ್ಜೆಗೇರಿಸುವುದು ಹಾಗೂ ಬೆಂಗಳೂರು ನಗರದ BMAZ ವ್ಯಾಪ್ತಿಯಲ್ಲಿ ಹಾಲಿಯಿರುವ Distribution Automation System ಅನ್ನು 388 ಕೋಟಿ ರೂ. ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲು ಪ್ರಸ್ತಾಪಿಸಲಾಗಿದೆ.

235. **ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ ಹಂತ–4 ರ ಘಟ್ಟ–2ರಲ್ಲಿ ಒಟ್ಟು 2,275 ಕಿ.ಮೀ. ಉದ್ದದ ರಾಜ್ಯ ಹೆದ್ದಾರಿಯನ್ನು 3,500 ಕೋಟಿ ರೂ.ಗಳಲ್ಲಿ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗಿದೆ.**

236. ಎಸ್.ಹೆಚ್.ಡಿ.ಪಿ ಫೇಸ್–4, ಘಟ್ಟ–3ರಡಿ ಕೆಶಿಪ್–1 ಮತ್ತು ಕೆಶಿಪ್–2 ಯೋಜನೆಗಳಡಿ ಅಭಿವೃದ್ಧಿಪಡಿಸಿದ 1,008 ಕಿ.ಮೀ ಉದ್ದದ ರಾಜ್ಯ ಹೆದ್ದಾರಿಗಳ ಜೀವಿತಾವಧಿ ಮುಕ್ತಾಯಗೊಂಡಿದ್ದು, ಇವುಗಳನ್ನು ಸುಮಾರು 440 ಕೋಟಿ ರೂ.ಮೊತ್ತದಲ್ಲಿ ಮರುಡಾಂಬರೀಕರಣ ಕೈಗೊಳ್ಳಲಾಗುವುದು.

237. ರಾಜ್ಯದ 55 ಪ್ರಮುಖ ಸೇತುವೆಗಳ ಪುನರ್ ನಿರ್ಮಾಣವನ್ನು ಕೆ.ಆರ್.ಡಿ.ಸಿ.ಎಲ್ ವತಿಯಿಂದ ಕೈಗೊಳ್ಳಲು ಯೋಜನಾ ವರದಿ ತಯಾರಿಸಲಾಗುವುದು.

238. **ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಮಸ್ಕಿ, ಸಿಂಧನೂರು, ಗದಗ ಮತ್ತು ಯಾದಗಿರಿ ನಗರಗಳಿಗೆ ಬೈ–ಪಾಸ್ ರಸ್ತೆ ನಿರ್ಮಾಣವನ್ನು ಕೈಗೊಳ್ಳಲಾಗುವುದು. ಈ ಯೋಜನೆಗಳಿಗೆ ಅವಶ್ಯಕವಿರುವ ಭೂಸ್ವಾಧೀನ ವೆಚ್ಚದಲ್ಲಿ ರಾಜ್ಯ ಸರ್ಕಾರದ ಪಾಲನ್ನು ಭರಿಸಲು ತಾತ್ವಿಕ ಒಪ್ಪಿಗೆ ನೀಡಿರುತ್ತದೆ.**

239. ರಾಜ್ಯದ ಪ್ರಮುಖ ನಗರಗಳಲ್ಲಿ ವರ್ತುಲ ರಸ್ತೆಯನ್ನು ನಿರ್ಮಿಸಲು ಕೇಂದ್ರ ಸರ್ಕಾರದ ಜೊತೆಗೆ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗುವುದು.

240. ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿಗಳ ಅಕ್ಕಪಕ್ಕದಲ್ಲಿರುವ ನದಿಗಳಲ್ಲಿ ಹೂಳೆತ್ತುವಿಕೆ ಮತ್ತು ಹೊಸ ಕೆರೆಗಳನ್ನು ನಿರ್ಮಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಸಹಭಾಗಿತ್ವದಲ್ಲಿ ಹೊಸ ಯೋಜನೆ ರೂಪಿಸಲಾಗುವುದು.

241. ಕರ್ನಾಟಕ ರಾಜ್ಯದಲ್ಲಿ ರೈಲ್ವೆ ಸಾಂದ್ರತೆಯನ್ನು ಹೆಚ್ಚಿಸುವ ಮೂಲಕ ಸಾಮಾಜಿಕ, ಆರ್ಥಿಕ ಬೆಳವಣಿಗೆಗೆ ಉತ್ತೇಜನ ನೀಡಲು ನಮ್ಮ ಸರ್ಕಾರವು ನಿರ್ಧರಿಸಿದೆ. ಒಂಭತ್ತು ನೂತನ ರೈಲ್ವೆ ಮಾರ್ಗ ನಿರ್ಮಾಣವನ್ನು ರೈಲ್ವೆ ಇಲಾಖೆಯೊಂದಿಗೆ ಶೇ. 50:50ರ ವೆಚ್ಚ ಹಂಚಿಕೆಯ ಆಧಾರದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಗಿಣಿಗೇರಾ-ರಾಯಚೂರು, ತುಮಕೂರು-ರಾಯದುರ್ಗ, ಗದಗ-ವಾಡಿ, ಕುಡಚಿ-ಬಾಗಲಕೋಟೆ, ಶಿವಮೊಗ್ಗ-ಶಿಕಾರಿಪುರ-ರಾಣೆಬೆನ್ನೂರು, ತುಮಕೂರು-ಚಿತ್ರದುರ್ಗ-ದಾವಣಗೆರೆ, ಚಿಕ್ಕಮಗಳೂರು-ಬೇಲೂರು ಹಾಗೂ ಬೇಲೂರು- ಹಾಸನ ರೈಲು ಮಾರ್ಗ ಯೋಜನೆಗಳಿಗೆ ಚಾಲನೆ ನೀಡಲಾಗಿದೆ.

242. **55 ಕಿ.ಮೀ. ಉದ್ದದ ಗದಗ-ಯಲವಿಗಿ ನೂತನ ರೈಲು ಮಾರ್ಗ ಯೋಜನೆಯನ್ನು 640 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ರಾಜ್ಯ ಸರ್ಕಾರದ ವತಿಯಿಂದ ಭೂ ಸ್ವಾಧೀನ ವೆಚ್ಚವನ್ನು ಭರಿಸಿ ಕೇಂದ್ರದ ಪಾಲಿನೊಂದಿಗೆ ಜಾರಿಗೊಳಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು.**

243. **ಉತ್ತರ ಕರ್ನಾಟಕದ ಬಹುದಿನಗಳ ನಿರೀಕ್ಷೆಯ ಧಾರವಾಡ–ಕಿತ್ತೂರು–ಬೆಳಗಾವಿ ನೂತನ ರೈಲು ಮಾರ್ಗ ಯೋಜನೆಯನ್ನು 927 ಕೋಟಿ ರೂ. ಅಂದಾಜು ವೆಚ್ಚದಲ್ಲಿ ತ್ವರಿತವಾಗಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುವುದು.**

244. ಕೇಂದ್ರ ಸರ್ಕಾರವು 460 ಕಿ.ಮೀ. ಉದ್ದದ ಚೆನ್ನೈ–ಬೆಂಗಳೂರು–ಮೈಸೂರು ಹೈಸ್ಪೀಡ್ ರೈಲು ಕಾರಿಡಾರ್ ಅನ್ನು ನಿರ್ಮಿಸಲು National High Speed Railway Project ರವರಿಂದ ವಿಸ್ತೃತ ಯೋಜನಾ ವರದಿಯನ್ನು (DPR) ಸಿದ್ಧಪಡಿಸುತ್ತಿದ್ದು, ಈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಂದಿಗೆ ಕೈಜೋಡಿಸಲಿದೆ.

245. ಹೆದ್ದಾರಿಗಳಲ್ಲಿ ವಾಹನ ದಟ್ಟಣೆ ತಡೆಯಲು 20 ನೂತನ ರೈಲ್ವೆ / ರಸ್ತೆ ಮೇಲ್ಸೇತುವೆಗಳನ್ನು ರೈಲ್ವೆ ಇಲಾಖೆಯೊಂದಿಗೆ ವೆಚ್ಚ ಹಂಚಿಕೆ ಮಾದರಿಯಲ್ಲಿ ನಿರ್ಮಿಸಲು ತೀರ್ಮಾನಿಸಿದೆ.

246. ರಾಯಚೂರಿನಲ್ಲಿ ಗ್ರೀನ್–ಫೀಲ್ಡ್ ವಿಮಾನ ನಿಲ್ದಾಣವನ್ನು ಜಿಲ್ಲಾ ಖನಿಜ ನಿಧಿ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಆರ್ಥಿಕ ನೆರವಿನೊಂದಿಗೆ 186 ಕೋಟಿ ರೂ. ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು. ಇದಕ್ಕಾಗಿ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದೊಂದಿಗೆ ಒಡಂಬಡಿಕೆಯನ್ನು ಮಾಡಲಾಗುವುದು.

247. ದಾವಣಗೆರೆ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ವಿಮಾನ ನಿಲ್ದಾಣಗಳನ್ನು ಸ್ಥಾಪಿಸಲು ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲಾಗುವುದು.

248. ಕೇಂದ್ರ ಸರ್ಕಾರದ ನೆರವಿನೊಂದಿಗೆ ಮೈಸೂರು ವಿಮಾನ ನಿಲ್ದಾಣದ ರನ್‌ವೇ ಯನ್ನು ವಿಸ್ತರಿಸಲಾಗುವುದು.

249. ರಾಜ್ಯದಲ್ಲಿ ವಾಯುಮಾರ್ಗ ಸಂಪರ್ಕ ವ್ಯವಸ್ಥೆಯನ್ನು ಬಲಪಡಿಸಲು ಮಡಿಕೇರಿ, ಚಿಕ್ಕಮಗಳೂರು ಮತ್ತು ಹಂಪಿಯಲ್ಲಿ ಪಿ.ಪಿ.ಪಿ ಮಾದರಿಯಡಿ ಹೆಲಿಪೋರ್ಟ್‌ಗಳನ್ನು 30 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

250. **ನಮ್ಮ ಸರ್ಕಾರವು ರಾಜ್ಯದ ಕರಾವಳಿ ಪ್ರದೇಶದಲ್ಲಿ ಬಂದರು ಅಭಿವೃದ್ಧಿ ಹಾಗೂ ಕಡಲತೀರದ ವ್ಯಾಪಾರಕ್ಕೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಲು ಬಯಸಿದೆ. ಈ ನಿಟ್ಟಿನಲ್ಲಿ ಅಂದಾಜು 1,880 ಕೋಟಿ ರೂ. ವೆಚ್ಚದ 24 ಯೋಜನೆಗಳನ್ನು ಕೇಂದ್ರ ಸರ್ಕಾರದ ಸಾಗರಮಾಲಾ ಯೋಜನೆಯಡಿ ಕೈಗೊಳ್ಳಲು ಉದ್ದೇಶಿಸಿದೆ. ಇದರಡಿಯಲ್ಲಿ ಕಾರವಾರ ಬಂದರಿನ ವಿಸ್ತರಣೆಯನ್ನು ಪ್ರಸ್ತಾಪಿಸಲಾಗಿದೆ. ಬೈಂದೂರು ಮತ್ತು ಮಲ್ಪೆ ಪ್ರದೇಶಗಳಲ್ಲಿ ವಿವಿಧೋದ್ದೇಶ ಬಂದರುಗಳನ್ನು ನಿರ್ಮಿಸಲು ಕಾರ್ಯಸಾಧ್ಯತಾ ವರದಿ ತಯಾರಿಸಲಾಗುತ್ತಿದೆ.**

251. ಉತ್ತರ ಕನ್ನಡ ಜಿಲ್ಲೆಯ ಮಾಜಾಳಿಯಲ್ಲಿ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ 250 ಕೋಟಿ ರೂ. ವೆಚ್ಚದಲ್ಲಿ ಅತ್ಯಾಧುನಿಕ ಮೀನುಗಾರಿಕಾ ಬಂದರನ್ನು ನಿರ್ಮಿಸಲು ಪ್ರಸ್ತಾಪಿಸಲಾಗಿದೆ.

252. **ಭಾರತ ಸರ್ಕಾರದ ನೆರವಿನೊಂದಿಗೆ 350 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಮಂಗಳೂರು ಬಂದರನ್ನು ವಿಸ್ತರಿಸಲಾಗುವುದು ಹಾಗೂ ಲಕ್ಷದ್ವೀಪ ಕೇಂದ್ರಾಡಳಿತ ಪ್ರದೇಶಕ್ಕೆ ಮೀಸಲಾದ ಜೆಟ್ಟಿ ಮತ್ತು**

**ಇತರ ಸಂಬಂಧಿತ ಮೂಲಸೌಕರ್ಯ ಸೌಲಭ್ಯಗಳನ್ನು ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ.**

253. **ಸಾರ್ವಜನಿಕ ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಕೇಣಿ-ಬೆಳಕೇರಿಯಲ್ಲಿ ಗ್ರೀನ್‌ಫೀಲ್ಡ್ ಬಂದರನ್ನು ಅಭಿವೃದ್ಧಿಪಡಿಸಲು ಪ್ರಸ್ತಾಪಿಸಲಾಗಿದೆ. ಈ ಬೃಹತ್ ಬಂದರಿನಿಂದ ಕರಾವಳಿ ಮತ್ತು ಒಳನಾಡು ಪ್ರದೇಶಗಳ ಆರ್ಥಿಕ ಸಮೃದ್ಧಿಗೆ ಸಹಕಾರಿಯಾಗುತ್ತದೆ.**

254. ಸುಸ್ಥಿರ ಮತ್ತು ಪರಿಸರ ಸ್ನೇಹಿ ಪ್ರವಾಸೋದ್ಯಮ ಚಟುವಟಿಕೆಗಳಿಗಾಗಿ ತದಡಿ ಬಂದರಿನಲ್ಲಿ ಸಮಗ್ರ ಪರಿಸರ-ಪ್ರವಾಸೋದ್ಯಮ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲಾಗುವುದು.

255. **ಮೊಟ್ಟಮೊದಲ ಬಾರಿಗೆ ರಾಜ್ಯ ಮತ್ತು ಕೇಂದ್ರದ ಸಂಬಂಧಿತ ಸಂಸ್ಥೆಗಳ ಸಹಯೋಗದೊಂದಿಗೆ ಕಾರವಾರದಲ್ಲಿ ಜಲಸಾರಿಗೆ ಮತ್ತು ಮೀನುಗಾರಿಕೆ ತರಬೇತಿ ಸಂಸ್ಥೆಯನ್ನು ಸ್ಥಾಪಿಸಲು ಪ್ರಸ್ತಾಪಿಸುತ್ತೇನೆ.**

256. ಕರಾವಳಿ ಭಾಗದಲ್ಲಿ ಕಡಲು ಕೊರೆತವನ್ನು ತಡೆಗಟ್ಟಲು ಹೊಸ ತಂತ್ರಜ್ಞಾನವನ್ನು ಬಳಸಿ ಕ್ರಮವಹಿಸಲಾಗುವುದು.

257. ರಾಜ್ಯ ಸರ್ಕಾರ ಪ್ರವಾಸೋದ್ಯಮಕ್ಕೆ ಪೂರಕವಾಗಿ ಮತ್ತು ಸ್ಥಳೀಯ ಜನರ ಸಾರಿಗೆ ಅಗತ್ಯಗಳನ್ನು ಪೂರೈಸಲು ತದಡಿ-ಅಘನಾಶಿನಿ ಮಧ್ಯೆ ಕಡವು ದೋಣಿ ಮಾರ್ಗವನ್ನು ಈ ವರ್ಷ ಪ್ರಾರಂಭಿಸಲು ಪ್ರಸ್ತಾಪಿಸಲಾಗಿದೆ.

258. **ನಮ್ಮ ಸರ್ಕಾರವು ಉದ್ಯೋಗ ಸೃಜನೆಗೆ ಒತ್ತು ನೀಡುವ ಸಮಗ್ರ ಉದ್ಯೋಗ ನೀತಿ ಜಾರಿಗೊಳಿಸಲಿದೆ. ರಾಜ್ಯದ ಜನರಿಗೆ ಹೆಚ್ಚಿನ ಉದ್ಯೋಗ ನೀಡುವ ಕೈಗಾರಿಕೆಗಳಿಗೆ ಹೆಚ್ಚುವರಿ ಪ್ರೋತ್ಸಾಹಕಗಳನ್ನು**

**ನೀಡಲು ಕ್ರಮ ವಹಿಸಲಾಗುವುದು. ಇದರೊಂದಿಗೆ, ಅತಿ ಹೆಚ್ಚು ಉದ್ಯೋಗ ಸೃಷ್ಟಿಸುವ ವಲಯಗಳಾದ ಜವಳಿ, ಆಟಿಕೆ ತಯಾರಿಕೆ, FMCG, ಚರ್ಮ ಉತ್ಪನ್ನಗಳು, ಆಹಾರ ಸಂಸ್ಕರಣೆ ಮತ್ತು Jewellery ಮೇಲೆ ಹೆಚ್ಚಿನ ಒತ್ತು ನೀಡಿ ಹೂಡಿಕೆದಾರರನ್ನು ಆಕರ್ಷಿಸಲಾಗುವುದು.**

259. **'ನವಕರ್ನಾಟಕದಿಂದ ನವಭಾರತ ನಿರ್ಮಾಣ' ಎಂಬುವ ಧ್ಯೇಯದಡಿಯಲ್ಲಿ ನವಕರ್ನಾಟಕ ನಿರ್ಮಾಣದ ಪರಿಕಲ್ಪನೆಯನ್ನು ಯೋಜನಾ ಬದ್ಧವಾಗಿ ಪರಿಸರ ಸ್ನೇಹಿ ನವನಗರಗಳನ್ನು (Integrated Townships) ನಿರ್ಮಿಸಲು ಉದ್ದೇಶಿಸಿದೆ. ಇದರಲ್ಲಿ, ಮೂಲಭೂತ ಸೌಲಭ್ಯ, ವಸತಿ, ಶಿಕ್ಷಣ, ಆರೋಗ್ಯ ಹಾಗೂ ವಾಣಿಜ್ಯ ಕೈಗಾರಿಕಾ ಪ್ರದೇಶಗಳನ್ನು ವಿಶೇಷವಾಗಿ ಅಳವಡಿಸಿ ಭವಿಷ್ಯದ ನಗರಗಳನ್ನಾಗಿ ನಿರ್ಮಾಣ ಮಾಡಲಾಗುವುದು. ಎಲ್ಲಾ ಕಂದಾಯ ವಿಭಾಗಗಳಲ್ಲಿ ತಲಾ ಒಂದು ನಗರವನ್ನು ಖಾಸಗಿ ಸಾರ್ವಜನಿಕ ಸಹಭಾಗಿತ್ವದಲ್ಲಿ ನಿರ್ಮಿಸಲಾಗುವುದು. ಇದಕ್ಕಾಗಿ ಅಂತಾರಾಷ್ಟ್ರೀಯ ನಗರ ಯೋಜನಾ ಪರಿಣಿತರ ಸಹಾಯವನ್ನು ಪಡೆಯಲಾಗುವುದು.**

260. **ರಾಜ್ಯದಲ್ಲಿ ಆರ್ಥಿಕವಾಗಿ ದುರ್ಬಲ ವರ್ಗದವರು ಉದ್ಯಮಶೀಲರಾಗುವುದನ್ನು ಉತ್ತೇಜಿಸಲು ಕೆ.ಐ.ಎ.ಡಿ.ಬಿ./ ಕೆ.ಎಸ್.ಎಸ್.ಐ.ಡಿ.ಸಿ. (KIADB/ KSSIDC) ಸಂಸ್ಥೆಗಳು ಸ್ಥಾಪಿಸುವ ಹೊಸ ಕೈಗಾರಿಕಾ ಪ್ರದೇಶಗಳಲ್ಲಿನ ಸಣ್ಣ ನಿವೇಶನಗಳಲ್ಲಿ ಆರ್ಥಿಕವಾಗಿ ದುರ್ಬಲ ವರ್ಗದವರಿಗಾಗಿ ಆದ್ಯತೆ ನೀಡಲಾಗುವುದು.**

261. ಚೆನ್ನೈ-ಬೆಂಗಳೂರು-ಮುಂಬಯಿ ಕಾರಿಡಾರ್ ವ್ಯಾಪ್ತಿಯಲ್ಲಿ ಬರುವ ಚಿತ್ರದುರ್ಗ, ದಾವಣಗೆರೆ, ಹಾವೇರಿ, ಧಾರವಾಡ ಮತ್ತು ಬೆಳಗಾವಿಯಲ್ಲಿ ಕೈಗಾರಿಕೆಯನ್ನು ಸ್ಥಾಪಿಸಲು ಉತ್ತೇಜನ ನೀಡಲಾಗುವುದು.

262. ರಾಜ್ಯದಲ್ಲಿ ದೊಡ್ಡ ಗಾತ್ರದ ಹೂಡಿಕೆ ಪ್ರದೇಶಗಳು ಮತ್ತು ಕೈಗಾರಿಕಾ ವಸಾಹತುಗಳ ಸ್ಥಾಪನೆ, ಕಾರ್ಯಾಚರಣೆ, ನಿಯಂತ್ರಣ ಮತ್ತು ನಿರ್ವಹಣೆಗಾಗಿ "ಕರ್ನಾಟಕ ವಿಶೇಷ ಹೂಡಿಕೆ ಪ್ರದೇಶ ಅಧಿನಿಯಮ"ವನ್ನು ರಚಿಸಲಾಗುವುದು. ಆರಂಭದಲ್ಲಿ, ತುಮಕೂರು ಮತ್ತು ಧಾರವಾಡ ಜಿಲ್ಲೆಗಳಲ್ಲಿ ವಿಶೇಷ ಹೂಡಿಕೆ ಪ್ರದೇಶವನ್ನು ಅಧಿಸೂಚಿಸಲಾಗುವುದು.

263. **ಚಿನ್ನ ಮತ್ತು ಆಭರಣದ ಕುಶಲಕರ್ಮಿಗಳ ಹಾಗೂ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ forward and backward linkage ಸೌಲಭ್ಯವನ್ನು ಒದಗಿಸಲು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ "ಮೆಗಾ ಜ್ಯುವೆಲ್ಲರಿ ಪಾರ್ಕ್" ಅನ್ನು ಬೆಂಗಳೂರಿನಲ್ಲಿ ಸ್ಥಾಪಿಸಲಾಗುವುದು. ಇದರಿಂದ ಸುಮಾರು ಹತ್ತು ಸಾವಿರ ಜನರಿಗೆ ಉದ್ಯೋಗಾವಕಾಶ ಲಭಿಸಲಿದೆ.**

264. ಸಾಮಾನ್ಯ ಸೌಲಭ್ಯ ಕೇಂದ್ರಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನೊಳಗೊಂಡ ಬಹುಮಹಡಿ ಕಾರ್ಖಾನೆ ಪರಿಕಲ್ಪನೆಯ ಅವಶ್ಯಕ ಪ್ಲಗ್ & ಪ್ಲೇ ಮೂಲಭೂತ ಸೌಲಭ್ಯಗಳನ್ನು ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಕಲಬುರಗಿ, ಬೀದರ್ ಜಿಲ್ಲೆಗಳಲ್ಲಿ ಕೇಂದ್ರ ಸರ್ಕಾರದ TIES ಯೋಜನೆ ಸಹಯೋಗದೊಂದಿಗೆ ರೂಪಿಸಲು ಕ್ರಮವಹಿಸಲಾಗುವುದು.

265. ಬೀದರ್‌ನಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ 90 ಕೋಟಿ ರೂ.ಗಳ ವೆಚ್ಚದಲ್ಲಿ ಸೆಂಟ್ರಲ್ ಇನ್ಸ್ಟಿಟ್ಯೂಟ್ ಆಫ್ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಹಾಗೂ ಟೆಕ್ನಾಲಜಿ (CIPET) ಕೇಂದ್ರವನ್ನು ಆರಂಭಿಸಲಾಗುವುದು.

266. **ರಾಜ್ಯಕ್ಕೆ ವಿದೇಶಿ ಹೂಡಿಕೆಗಳನ್ನು ಆಕರ್ಷಿಸಲು ಬೆಂಗಳೂರಿನಲ್ಲಿ ದಿನಾಂಕ 2 ರಿಂದ 4ನೇ ನವೆಂಬರ್ 2022 ರವರೆಗೆ "ಇನ್ವೆಸ್ಟ್ ಕರ್ನಾಟಕ-2022" ಜಾಗತಿಕ ಹೂಡಿಕೆದಾರರ ಸಭೆಯನ್ನು ಆಯೋಜಿಸಲಾಗುವುದು.**

267. **ಧಾರವಾಡದಲ್ಲಿ FMCG Cluster ಅನ್ನು ಅಭಿವೃದ್ಧಿ ಪಡಿಸಲಾಗುವುದು ಮತ್ತು ಈ ಕ್ಲಸ್ಟರ್ ನಲ್ಲಿ ಬರುವ ಕೈಗಾರಿಕೆಗಳಿಗೆ ವಿಶೇಷ ಪ್ರೋತ್ಸಾಹಕ ಪ್ಯಾಕೇಜ್ ಘೋಷಿಸಲಾಗುವುದು.**

268. **ನೋಂದಾಯಿತ ಕೈಮಗ್ಗ ನೇಕಾರರಿಗೆ "ನೇಕಾರರ ಸಮ್ಮಾನ್" ಯೋಜನೆಯಡಿಯಲ್ಲಿ 2,000 ರೂ.ಗಳ ವಾರ್ಷಿಕ ಆರ್ಥಿಕ ನೆರವನ್ನು ನೀಡಲಾಗುತ್ತಿದ್ದು, ಇದನ್ನು 5,000 ರೂ.ಗಳಿಗೆ ಹೆಚ್ಚಿಸಲಾಗುವುದು.**

269. **ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಎದುರಿಸುತ್ತಿರುವ ಬಂಡವಾಳ ಕೊರತೆಯನ್ನು ನೀಗಿಸಲು ರಾಜ್ಯದ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್‌ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8ರಷ್ಟು ಬಡ್ಡಿ ಸಹಾಯಧನವನ್ನು ರಾಜ್ಯ ಸರ್ಕಾರ ನೀಡಲಾಗುವುದು.**

270. ನೇಕಾರರು ಆರ್ಥಿಕವಾಗಿ ಹಿಂದುಳಿದಿದ್ದನ್ನು ಮನಗಂಡು, ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ವಿದ್ಯಾರ್ಥಿ ವೇತನ ನೀಡಲಾಗುವುದು.

271. **2019-20ರಿಂದ ಸ್ಥಗಿತಗೊಂಡಿರುವ ಮೈಶುಗರ್ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಲು ನಮ್ಮ ಸರ್ಕಾರವು ನಿರ್ಧರಿಸಿದ್ದು, ಈ ನಿಟ್ಟಿನಲ್ಲಿ ಮುಂದಿನ ಎರಡು ವರ್ಷಗಳ ಕಾಲ ಪ್ರಾಯೋಗಿಕವಾಗಿ ಸರ್ಕಾರದ ವತಿಯಿಂದ ಮೈಶುಗರ್ ಕಾರ್ಖಾನೆಯನ್ನು ನಡೆಸಲಾಗುವುದು. ಕಾರ್ಖಾನೆಯ ಯಂತ್ರೋಪಕರಣಗಳ ದುರಸ್ತಿಗಾಗಿ 50 ಕೋಟಿ ರೂ.ಗಳನ್ನು ಒದಗಿಸುವುದಲ್ಲದೆ ಹಣಕಾಸು ಸಂಸ್ಥೆಗಳಿಂದ ದುಡಿಯುವ ಬಂಡವಾಳವನ್ನು ಪಡೆಯಲು ವ್ಯವಸ್ಥೆ ಮಾಡಲಾಗುವುದು.**

272. **ಕಲಬುರಗಿ ಮತ್ತು ವಿಜಯಪುರದಲ್ಲಿ ಮೆಗಾ-ಟೆಕ್ಸ್‌ಟೈಲ್ ಪಾರ್ಕ್‌ನ್ನು ಕೇಂದ್ರ ಸರ್ಕಾರದ ನೆರವಿನೊಂದಿಗೆ ಸ್ಥಾಪಿಸಲು ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು. ಬಳ್ಳಾರಿಯಲ್ಲಿ ಜೀನ್ಸ್ ಮತ್ತು ಉಡುಪುಗಳನ್ನು ಉತ್ತೇಜಿಸಲು ಟೆಕ್ಸ್‌ಟೈಲ್ ಪಾರ್ಕ್‌ನ್ನು ಪ್ರಾರಂಭಿಸಲು ಉದ್ದೇಶಿಸಿದೆ.**

273. **ಧಾರವಾಡ ಜಿಲ್ಲೆಯ ನವಲಗುಂದದಲ್ಲಿ ಹಾಗೂ ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನಲ್ಲಿ ನೂತನ ಜವಳಿ ಪಾರ್ಕ್‌ಗಳನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಪ್ರಾರಂಭಿಸಲಾಗುವುದು. ಇದರಿಂದ ಸುಮಾರು 5,000 ಉದ್ಯೋಗ ಸೃಷ್ಟಿಯಾಗಲಿದೆ.**

274. **ಕಲಬುರಗಿ ಜಿಲ್ಲೆಯ ಪ್ರಸಿದ್ಧ ಶಹಬಾದ್ ಕಲ್ಲನ್ನು ಹೊಸ ವಿನ್ಯಾಸ ಮತ್ತು ತಂತ್ರಜ್ಞಾನವನ್ನು ಅಳವಡಿಸಿ ವ್ಯಾಪಕ ಮಾರುಕಟ್ಟೆ ಅವಕಾಶಗಳನ್ನು ಕಲ್ಪಿಸಲಾಗುವುದು. ಇದೇ ಮಾದರಿಯಲ್ಲಿ ಇಳ್ಕಲ್ ಗ್ರಾನೈಟ್, ಶಿವಾರಪಟ್ಟಣದಲ್ಲಿ ಶಿಲ್ಪಕಲೆ ಮತ್ತು ಚಳ್ಳಕೆರೆಯಲ್ಲಿನ ಖಾದ್ಯ ತೈಲ ಉದ್ಯಮಗಳಿಗೆ ಪ್ರೋತ್ಸಾಹಿಸಲು ಕ್ರಮವಹಿಸಲಾಗುವುದು.**

275. ಬಿದರಿ ಕಲೆಗೆ ನೆರವು ನೀಡಲು ಬೀದರ್ ನಗರದಲ್ಲಿ ಸಾಮೂಹಿಕ ಸೌಲಭ್ಯ ಕೇಂದ್ರವನ್ನು ಸ್ಥಾಪಿಸಿ ಕೌಶಲ್ಯ ತರಬೇತಿ, ಮಾರುಕಟ್ಟೆ ಮತ್ತು ಗುಣಮಟ್ಟ ಪರೀಕ್ಷಾ ಸೌಲಭ್ಯವನ್ನು ಒದಗಿಸಲಾಗುವುದು.

276. **ಏಪ್ರಿಲ್ – ಡಿಸೆಂಬರ್ 2021ರ ಅವಧಿಯಲ್ಲಿ ಭಾರತದ ಒಟ್ಟು ವಿದೇಶಿ ನೇರ ಹೂಡಿಕೆಯ (ಎಫ್‌ಡಿಐ) ಹರಿವಿನ ಪ್ರಮಾಣದಲ್ಲಿ ಕರ್ನಾಟಕವು ಶೇ.40ರಷ್ಟನ್ನು (1.27 ಲಕ್ಷ ಕೋಟಿ ರೂ.) ಆಕರ್ಷಿಸಿದ್ದು, ರಾಷ್ಟ್ರದಲ್ಲಿಯೇ ಅಗ್ರಸ್ಥಾನದಲ್ಲಿದೆ.**

277. ಬೆಂಗಳೂರು ಮೂಲದ 34 ನವೋದ್ಯಮಗಳು ಬಿಲಿಯನ್ ಡಾಲರ್ ಅಥವಾ ಹೆಚ್ಚಿನ ಮೌಲ್ಯವನ್ನು ಹೊಂದಿವೆ ಎಂಬುದು, ರಾಜ್ಯದ ಸ್ಟಾರ್ಟ್‌ಅಪ್ ಉತ್ತೇಜಕ ವಾತಾವರಣಕ್ಕೆ ಸಾಕ್ಷಿಯಾಗಿದೆ.

278. ಕರ್ನಾಟಕವು ವಿದ್ಯುನ್ಮಾನ, Semi-Conductor ವಿನ್ಯಾಸ ಮತ್ತು ತಯಾರಿಕಾ (ESDM) ವಲಯದಲ್ಲಿ ದೇಶದಲ್ಲಿ 4ನೇ ಸ್ಥಾನ ಪಡೆದಿದೆ. ಕರ್ನಾಟಕವು 300ಕ್ಕೂ ಹೆಚ್ಚು ತಯಾರಿಕಾ ಘಟಕಗಳನ್ನು ಹೊಂದಿದ್ದು, ವಿದ್ಯುನ್ಮಾನ ಉತ್ಪನ್ನ/ ಸೇವೆಗಳ ವಲಯದಲ್ಲಿ ದೇಶದ ಒಟ್ಟಾರೆ ಉತ್ಪನ್ನದ ಶೇ.10 ರಷ್ಟು ಕೊಡುಗೆ ನೀಡುತ್ತಿದೆ. ESDM ರಫ್ತಿನಲ್ಲಿ ರಾಜ್ಯದ ಪಾಲು ಶೇ. 64 ರಷ್ಟು ಪಾಲನ್ನು ಹೊಂದಿದ್ದು, ರಾಜ್ಯದ ಆಂತರಿಕ ಉತ್ಪನ್ನಕ್ಕೆ ಶೇ. 17 ರಷ್ಟು ಕೊಡುಗೆ ನೀಡುತ್ತಿದೆ.

279. **ಭಾರತ ಸರ್ಕಾರದ 76 ಸಾವಿರ ಕೋಟಿ ರೂ. ವೆಚ್ಚದ ಸೆಮಿಕಂಡಕ್ಟರ್ ಭಾರತ್ ಅಭಿಯಾನದ ಗರಿಷ್ಠ ಲಾಭ ಪಡೆದುಕೊಂಡು ರಾಜ್ಯದಲ್ಲಿ ಸೆಮಿಕಂಡಕ್ಟರ್ ತಯಾರಿಕೆಗೆ**

**ಹೂಡಿಕೆದಾರರನ್ನು ಆಕರ್ಷಿಸಲು ರಾಜ್ಯ ಸರ್ಕಾರದ ವತಿಯಿಂದ ವಿಶೇಷ ಪ್ರೋತ್ಸಾಹಕಗಳನ್ನು ನೀಡಲು ಉದ್ದೇಶಿಸಿದೆ.**

280. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KKRDB)ಯ ಸಹಯೋಗದೊಂದಿಗೆ ನಾವೀನ್ಯತೆಯುಳ್ಳ Kalyan Karnataka ಭಾಗದ 25 ನವೋದ್ಯಮಗಳನ್ನು ಆಯ್ಕೆ ಮಾಡಲು Elevate - Kalyan Karnataka ವನ್ನು ಹಮ್ಮಿಕೊಳ್ಳಲಾಗುವುದು.

281. ಬೆಂಗಳೂರಿನಾಚೆ ಸ್ಟಾರ್ಟ್‌ಅಪ್‌ಗಳನ್ನು ಉತ್ತೇಜಿಸಲು ಮೈಸೂರು, ಮಂಗಳೂರು ಮತ್ತು ಹುಬ್ಬಳ್ಳಿಯಲ್ಲಿ ಕರ್ನಾಟಕ ಡಿಜಿಟಲ್ ಎಕನಾಮಿ ಮಿಷನ್ ನಿಂದ ನಿರ್ವಹಿಸಲಾಗುವ ಕ್ಲಸ್ಟರ್‌ಗೆ 20 ಕೋಟಿ ರೂ.ಗಳಂತೆ Beyond Bengaluru Cluster Seed Fund for Startups ಸ್ಥಾಪಿಸಲಾಗುವುದು. ಈ ಯೋಜನೆಗೆ ಪ್ರಸಕ್ತ ಸಾಲಿನಲ್ಲಿ 12 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

282. ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರ ಆತ್ಮನಿರ್ಭರ ಭಾರತ ದೃಷ್ಟಿಕೋನದನ್ವಯ ಇಂಜಿನಿಯರಿಂಗ್ ಸಂಶೋಧನೆ ಮತ್ತು ಅಭಿವೃದ್ಧಿಗೆ ನೆಲೆಯಾಗಿ ಕರ್ನಾಟಕದ ಸ್ಪರ್ಧಾತ್ಮಕತೆಯನ್ನು ವೃದ್ಧಿಸಲು ಉದ್ಯಮದವರ ಪಾಲುದಾರಿಕೆಯೊಂದಿಗೆ 150 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಬೆಳಗಾವಿಯಲ್ಲಿ Global Emerging Technology Design Centre ಸ್ಥಾಪಿಸಲಾಗುವುದು.

283. ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ [KSOU]ದಲ್ಲಿ ಸುಮಾರು 30 ಕೋಟಿ ರೂ. ಯೋಜನಾ ವೆಚ್ಚದಲ್ಲಿ Mysuru The Global Technology Center

Plug & Play ಸೌಲಭ್ಯವನ್ನು 2 ವರ್ಷಗಳ ಅವಧಿಯಲ್ಲಿ ಸ್ಥಾಪಿಸಲಾಗುವುದು. ಈ ಉದ್ದೇಶಕ್ಕಾಗಿ 2022-23ರಲ್ಲಿ 10 ಕೋಟಿ ರೂ. ಒದಗಿಸಲಾಗುವುದು..

284. ರಾಜ್ಯದ 15 ಪ್ರವಾಸಿ ತಾಣಗಳ AR/VR ತುಣುಕುಗಳನ್ನು 15 ಕೋಟಿ ರೂ. ವೆಚ್ಚದಲ್ಲಿ ಸೃಜಿಸಲು ಉದ್ದೇಶಿಸಿದ್ದು, ಮೊದಲಿಗೆ ಪ್ರಾಯೋಗಿಕವಾಗಿ ಮೈಸೂರು ಅರಮನೆಯ ತುಣುಕುಗಳನ್ನು ಸೃಜಿಸಲಾಗುವುದು.

285. ಕೇಂದ್ರ ಸರ್ಕಾರದ ಹಾಗೂ ಉದ್ಯಮಿಗಳ ಸಹಭಾಗಿತ್ವದಲ್ಲಿ ಒಟ್ಟು 50 ಕೋಟಿ ರೂ. ಯೋಜನಾ ವೆಚ್ಚದಲ್ಲಿ Karnataka Acceleration - network ಸ್ಥಾಪಿಸಲು ಉದ್ದೇಶಿಸಲಾಗಿದ್ದು, ರಾಜ್ಯ ಸರ್ಕಾರದ ವತಿಯಿಂದ 20 ಕೋಟಿ ರೂ. ನೀಡಲಾಗುವುದು.

286. ವಿದ್ಯಾರ್ಥಿಗಳು 'ನೋಡಿ ಕಲಿ ಮಾಡಿ ತಿಳಿ' ಪರಿಕಲ್ಪನೆಯಡಿ ವಿಜ್ಞಾನ ತತ್ವಗಳನ್ನು ಅರ್ಥೈಸಿಕೊಳ್ಳಲು ಅನುವಾಗುವಂತೆ, ರಾಜ್ಯದ 169 ಸರ್ಕಾರಿ ಬಾಲಕಿಯರ ಪ್ರೌಢಶಾಲೆಗಳಿಗೆ ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದಿಂದ ತಯಾರಿಸಲಾದ ಲ್ಯಾಬ್-ಇನ್-ಎ-ಕಿಟ್‌ಗಳನ್ನು ವಿತರಿಸಲಾಗುವುದು.

287. **ರಾಜ್ಯದ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ನೀಡುವ ಉದ್ದೇಶಕ್ಕಾಗಿ 2022-23ನೇ ಸಾಲಿನಲ್ಲಿ ಒಟ್ಟಾರೆಯಾಗಿ 55,657 ಕೋಟಿ ರೂ. ಅನುದಾನ ಒದಗಿಸಲಾಗಿದೆ.**

## ವಲಯ-4: ಬೆಂಗಳೂರು ಸಮಗ್ರ ಅಭಿವೃದ್ಧಿ

ಬೆಂಗಳೂರು ನಗರ ಅಂತಾರರಾಷ್ಟ್ರೀಯ ಮಟ್ಟದಲ್ಲಿ ಗಮನ ಸೆಳೆದ ನಗರವಾಗಿದೆ. ಐಟಿ, ಬಿಟಿ, ಸಂಶೋಧನಾ ವಲಯಗಳಂತಹ ಜ್ಞಾನಾಧಾರಿತ ಉದ್ದಿಮೆಗಳ ನೆಲೆಯಾಗಿದೆ. ಈ ಎಲ್ಲಾ ಕಾರಣಗಳಿಗೆ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ನಗರದಲ್ಲಿ ಜನ ಜೀವನ ಸುಗಮ ಗೊಳಿಸಲು ಎಲ್ಲಾ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಲಾಗುವುದು. ಸಂಚಾರ ದಟ್ಟಣೆ ನಿವಾರಣೆಗೆ ರೂಪಿಸಲಾದ ನಮ್ಮ ಮೆಟ್ರೋ, ಸಬ್ ಅರ್ಬನ್ ರೈಲು, ಪೆರಿಫೆರಲ್ ರಿಂಗ್ ರೋಡ್ ಮತ್ತಿತರ ಯೋಜನೆಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ಒತ್ತು ನೀಡಲಾಗುವುದು. ಜೊತೆಗೆ ನಗರದ ಪರಿಸರದಲ್ಲಿ ಕೆರೆಗಳ ಅಭಿವೃದ್ಧಿ ಹಾಗೂ ಹಸಿರು ಹೊದಿಕೆ ಹೆಚ್ಚಿಸುವ ಮೂಲಕ ಸೌಂದರ್ಯ ವೃದ್ಧಿಗೂ ಆದ್ಯತೆ ನೀಡಲಾಗುವುದು.

288. **ಬೆಂಗಳೂರು ನಗರದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು 6,000 ಕೋಟಿ ರೂ.ಗಳ ವೆಚ್ಚದಲ್ಲಿ 'ಅಮೃತ್ ನಗರೋತ್ಥಾನ' ಯೋಜನೆಯನ್ನು ಮುಂದಿನ 3 ವರ್ಷಗಳಲ್ಲಿ ಅನುಷ್ಠಾನಗೊಳಿಸಲಾಗುವುದು. ಈ ಯೋಜನೆಯಡಿಯಲ್ಲಿ ಪಾಲಿಕೆ ವ್ಯಾಪ್ತಿಯ ರಸ್ತೆ ಅಭಿವೃದ್ಧಿ, ಗ್ರೇಡ್ ಸೆಪರೇಟರ್, ಕೆರೆ ಅಭಿವೃದ್ಧಿ, ಬೃಹತ್ ನೀರುಗಾಲುವೆ ಅಭಿವೃದ್ಧಿ, ಉದ್ಯಾನವನಗಳ ಅಭಿವೃದ್ಧಿ, ಕಟ್ಟಡಗಳು, ಘನತ್ಯಾಜ್ಯ ನಿರ್ವಹಣೆ, ಬೀದಿ ದೀಪಗಳು, ಕೊಳಚೆ ಪ್ರದೇಶ ಅಭಿವೃದ್ಧಿ ಇತ್ಯಾದಿಗಳನ್ನು ಕೈಗೆತ್ತಿಕೊಳ್ಳಲಾಗುವುದು**

289. 2021–22ನೇ ಸಾಲಿನಲ್ಲಿ ನಮ್ಮ ಮೆಟ್ರೊ ಹಂತ–2ರಲ್ಲಿ 7.53 ಕಿ.ಮೀ.ಗಳ ಹೆಚ್ಚುವರಿ ಮಾರ್ಗವನ್ನು ಕಾರ್ಯಾರಂಭ ಮಾಡಿದ್ದು, 2022–23ನೇ ಸಾಲಿನಲ್ಲಿ 33 ಕಿ.ಮೀ.ಗಳ ಮಾರ್ಗವನ್ನು ಸೇರಿಸಲಾಗುವುದು. ಇದರಿಂದ ಒಟ್ಟಾರೆ 89 ಕಿ.ಮೀ.ಗಳ ಉದ್ದದ ಮೆಟ್ರೋ ಮಾರ್ಗವನ್ನು ಹೊಂದಿದಂತಾಗುತ್ತದೆ. ಸೆಂಟ್ರಲ್ ಸಿಲ್ಕ್‌ಬೋರ್ಡ್ ನಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸಂಪರ್ಕಿಸುವ 58.19 ಕಿ.ಮೀ.ಗಳು ಉದ್ದದ ಮೆಟ್ರೋ ಕಾಮಗಾರಿ ಪ್ರಾರಂಭಗೊಂಡಿದ್ದು, ಮಾರ್ಚ್ 2025ರೊಳಗೆ ಪೂರ್ಣಗೊಳ್ಳಲಿದೆ.

290. **ಬೆಂಗಳೂರು ಮೆಟ್ರೊ ಹಂತ–3 ಯೋಜನೆಯನ್ನು ಅಂದಾಜು 11,250 ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಳ್ಳಲು ವಿಸ್ತೃತ ಯೋಜನಾ ವರದಿಯನ್ನು (ಡಿ.ಪಿ.ಆರ್) ಕೇಂದ್ರ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗುವುದು. ಇದು ಹೆಬ್ಬಾಳದಿಂದ ಜೆ.ಪಿ. ನಗರದವರೆಗೆ 32 ಕಿ.ಮೀ.ಗಳ ಹೊರವರ್ತುಲ ರಸ್ತೆ ಮಾರ್ಗ ಹಾಗೂ ಹೊಸಹಳ್ಳಿಯಿಂದ ಕಡಬಗೆರೆವರೆಗೆ 13 ಕಿ.ಮೀ.ಗಳ ಮಾರ್ಗವನ್ನು ಒಳಗೊಂಡಿದೆ.**

291. **2022–23ನೇ ಸಾಲಿನಲ್ಲಿ 37 ಕಿ.ಮೀ. ಉದ್ದದ ಸರ್ಜಾಪುರದಿಂದ ಅಗರ, ಕೋರಮಂಗಲ ಮತ್ತು ಡೈರಿ ವೃತ್ತದ ಮೂಲಕ ಹೆಬ್ಬಾಳದವರೆಗೆ 15,000 ಕೋಟಿ ರೂ. ಅಂದಾಜು ವೆಚ್ಚದಲ್ಲಿ 36 ಕಿ.ಮೀ. ಉದ್ದದ ಹೊಸ ಮಾರ್ಗಕ್ಕೆ ವಿಸ್ತೃತ ಯೋಜನಾ ವರದಿ (ಡಿಪಿಆರ್) ತಯಾರಿಸಲು ಕ್ರಮವಹಿಸಲಾಗುವುದು.**

292. ಪಾದಚಾರಿಗಳು ಮತ್ತು ರಸ್ತೆ ಬದಿ ವ್ಯಾಪಾರಿಗಳ ಸುರಕ್ಷತೆಗಾಗಿ ಹಾಗೂ ಮೆಟ್ರೋ ನಿಲ್ದಾಣವನ್ನು ಬಸ್ ನಿಲ್ದಾಣದೊಂದಿಗೆ ಸಂಪರ್ಕಿಸಲು ಬನಶಂಕರಿ ಜಂಕ್ಷನ್‌ನಲ್ಲಿ 45 ಕೋಟಿ ರೂ. ವೆಚ್ಚದಲ್ಲಿ "ಸ್ಕೈವಾಕ್" ನಿರ್ಮಿಸಲಾಗುವುದು.

293. ವೈಟ್‌ಫೀಲ್ಡ್, ಕೆ.ಆರ್. ಪುರಂ, ಬೈಯ್ಯಪ್ಪನಹಳ್ಳಿ, ಯಶವಂತಪುರ, ಜ್ಞಾನಭಾರತಿ ಮತ್ತು ಯಲಹಂಕ ರೈಲ್ವೆ ನಿಲ್ದಾಣಗಳಲ್ಲಿ 55 ಕೋಟಿ ರೂ. ವೆಚ್ಚದಲ್ಲಿ ಭಾರತೀಯ ರೈಲ್ವೆಯೊಂದಿಗೆ ಮೆಟ್ರೋ ನಿಲ್ದಾಣದ ಸಂಪರ್ಕದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

294. **ಬೆಂಗಳೂರು ನಗರದ ರಸ್ತೆಗಳಲ್ಲಿನ ವಾಹನ ದಟ್ಟಣೆಯನ್ನು ಕಡಿಮೆ ಮಾಡಲು 2006 ರಿಂದ ನೆನಗುದಿಗೆ ಬಿದ್ದಿರುವ ತುಮಕೂರು ರಸ್ತೆಯಿಂದ ಬಳ್ಳಾರಿ ರಸ್ತೆ ಹಾಗೂ ಹಳೇ ಮದ್ರಾಸ್ ರಸ್ತೆಯನ್ನು ಹಾದು ಹೋಗಿ ಹೊಸೂರು ರಸ್ತೆ ಸೇರುವ 73 ಕಿ.ಮೀ ಉದ್ದ ಹಾಗೂ 100 ಮೀ ಅಗಲದ ಫೆರಿಫೆರಲ್ ರಿಂಗ್ ರಸ್ತೆ ನಿರ್ಮಾಣ ಮಾಡಲು ಭೂ ಸ್ವಾಧೀನ ವೆಚ್ಚ ಸೇರಿ 21,091 ಕೋಟಿ ರೂ.ಗಳನ್ನು ಈಗಾಗಲೇ ಅನುಮೋದಿಸಿದ್ದು, ಪ್ರಸಕ್ತ ವರ್ಷದಲ್ಲಿ ಕಾಮಗಾರಿಯನ್ನು ನಿರ್ವಹಿಸಲು DBFOT ಮಾದರಿಯಲ್ಲಿ ಗುತ್ತಿಗೆದಾರರೇ ಭೂ ಸ್ವಾಧೀನ ಮತ್ತು ನಿರ್ಮಾಣ ವೆಚ್ಚ ಭರಿಸುವುದರೊಂದಿಗೆ ಟೆಂಡರ್‌ನ್ನು ಕರೆದು ಕಾಮಗಾರಿಯನ್ನು ಚಾಲನೆಗೊಳಿಸಲಾಗುವುದು.**

295. ಗೊರಗುಂಟೆಪಾಳ್ಯ ಜಂಕ್ಷನ್‌ನಲ್ಲಿ ಸಂಚಾರ ದಟ್ಟಣೆ ನಿವಾರಿಸಿ, ಎಲ್ಲಾ ವಾಹನಗಳ ಸಿಗ್ನಲ್ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡಲು ಗ್ರೇಡ್ ಸೆಪರೇಟರ್ ಮತ್ತು ಮೇಲುಸೇತುವೆ

ಕಾಮಗಾರಿಗಳನ್ನು ಬಿ.ಬಿ.ಎಂಪಿ., ಬಿ.ಡಿ.ಎ. ಮತ್ತು ಎನ್.ಹೆಚ್.ಎ.ಐ ಸಂಸ್ಥೆಗಳ ವತಿಯಿಂದ ಜಂಟಿಯಾಗಿ ಕೈಗೆತ್ತಿಕೊಳ್ಳಲಾಗುವುದು.

296. ನಾಡಪ್ರಭು ಕೆಂಪೇಗೌಡ ಬಡಾವಣೆಯನ್ನು ನಿರ್ಮಿಸಲು 2671 ಎಕರೆ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದ್ದು, ಬಡಾವಣೆ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. ಬಾಕಿ 1297 ಎಕರೆ ಜಮೀನಿನ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ ಆಧುನಿಕ ಸ್ಮಾರ್ಟ್ ಸಿಟಿಯನ್ನಾಗಿ ಅಭಿವೃದ್ಧಿಪಡಿಸಲಾಗುತ್ತಿದೆ.

297. ಸರ್.ಎಂ.ವಿಶ್ವೇಶರಯ್ಯ, ಬನಶಂಕರಿ 6ನೇ ಹಂತ ಮತ್ತು ಅಂಜನಾಪುರ ಬಡಾವಣೆಗಳಲ್ಲಿನ ರಸ್ತೆ, ಚರಂಡಿಗಳು, ಒಳಚರಂಡಿ ಮತ್ತು ಕೊಳಚೆ ನೀರು ಸಂಸ್ಕರಣಾ ಘಟಕವನ್ನು 404 ಕೋಟಿ ರೂ ವೆಚ್ಚದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಿ ಮುಂದಿನ ನಿರ್ವಹಣೆಗಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಗುವುದು.

298. **ಸಾರ್ವಜನಿಕರಲ್ಲಿ ಸುಸ್ಥಿರ ಜೀವನ ಶೈಲಿಯ ಅರಿವನ್ನು ಸೃಷ್ಟಿ ಮಾಡುವುದು ಅತ್ಯಂತ ಅವಶ್ಯಕವಾಗಿರುವುದರಿಂದ ಬೆಂಗಳೂರಿನ ಹೃದಯ ಭಾಗದಲ್ಲಿರುವ NGEF ನ 105 ಎಕರೆ ಪ್ರದೇಶದಲ್ಲಿ ಸಿಂಗಾಪುರ್ ಮಾದರಿಯಲ್ಲಿ ಗ್ರೀನ್ ಎಕ್ಸ್‌ಪೋ ಅನ್ನು ನಿರ್ಮಿಸಲಾಗುವುದು. ಗ್ರೀನ್ ಎಕ್ಸ್‌ಪೋ ಮೂಲಕ ಪರಿಸರ ಸ್ನೇಹಿ ತಂತ್ರಜ್ಞಾನ, ಪರಿಸರ ಸ್ನೇಹಿ ಸಾರಿಗೆ, ಹಸಿರು ಮೂಲಸೌಕರ್ಯ,**

ಹಸಿರು ನವೋದ್ಯಮ ಮುಂತಾದವುಗಳ ಪ್ರಾತ್ಯಕ್ಷಿಕೆಯನ್ನು ಸಾರ್ವಜನಿಕರಿಗೆ ನೀಡಲಾಗುವುದು.

299. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆರು ಲಕ್ಷಕ್ಕೂ ಹೆಚ್ಚು ಸ್ವತ್ತುಗಳ ವಿವರಗಳನ್ನು ಬಿ ವಹಿಯಲ್ಲಿ ದಾಖಲಿಸಲಾಗಿದ್ದು, ಸದರಿ ಸ್ವತ್ತುಗಳನ್ನು ಎ ವಹಿಗೆ ದಾಖಲಿಸಲು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಅಧಿನಿಯಮ ಹಾಗೂ ಕರ್ನಾಟಕ ಭೂ ಕಂದಾಯ ಅಧಿನಿಯಮಗಳಡಿಯಲ್ಲಿ ಪರಿಶೀಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.

300. ಬೆಂಗಳೂರು ಉಪನಗರ ರೈಲ್ವೆ ಯೋಜನೆಯನ್ನು 15,267 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ 2026ರ ವೇಳೆಗೆ ಪೂರ್ಣಗೊಳಿಸಲು ಉದ್ದೇಶಿಸಿದೆ. 148 ಕಿ.ಮೀ. ಉದ್ದದ ಈ ಯೋಜನೆಯಡಿ ನಾಲ್ಕು ಕಾರಿಡಾರ್‌ಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು, ಚಿಕ್ಕಬಾಣಾವರ-ಬೈಯ್ಯಪ್ಪನಹಳ್ಳಿ ಕಾರಿಡಾರ್‌ನ ಸಿವಿಲ್ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದ್ದು, ಶೀಘ್ರವೇ ಕಾಮಗಾರಿಯನ್ನು ಆರಂಭಿಸಲಾಗುವುದು.

301. ಬೆಂಗಳೂರು ನಗರಕ್ಕೆ ಹೆಚ್ಚುವರಿಯಾಗಿ 775 ದಶಲಕ್ಷ ಲೀಟರ್ ಕಾವೇರಿ ನೀರನ್ನು ತರಲು 5,550 ಕೋಟಿ ರೂ.ಗಳ ವೆಚ್ಚದಲ್ಲಿ ಕಾವೇರಿ ನೀರು ಸರಬರಾಜು ಯೋಜನೆ (5ನೇ ಹಂತ) ಜಾರಿಯಲ್ಲಿದ್ದು, ಇಲ್ಲಿಯವರೆಗೆ 1,556 ಕೋಟಿ ರೂ.ಗಳು ವೆಚ್ಚವಾಗಿದೆ. ಯೋಜನೆಯು ಪೂರ್ಣ ಪ್ರಮಾಣದಲ್ಲಿ ಪ್ರಗತಿಯಲ್ಲಿದ್ದು, 2024-25ನೇ ಸಾಲಿನ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು.

302. ಜಲ ಮಾಲಿನ್ಯ ತಡೆಗಟ್ಟಲು ಬೆಂಗಳೂರು ನಗರದ ವಿವಿಧ ಸ್ಥಳಗಳಲ್ಲಿರುವ ಹಳೆಯ 20 ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ ಪುನರುಜ್ಜೀವನ ಮತ್ತು ಉನ್ನತೀಕರಣದ ಕಾಮಗಾರಿಯನ್ನು 1,500 ಕೋಟಿ ರೂ.ಗಳ ವೆಚ್ಚದಲ್ಲಿ ಬೆಂಗಳೂರು ಜಲಮಂಡಳಿಯ ವತಿಯಿಂದ ಕೈಗೊಳ್ಳಲಾಗುವುದು.

303. ಮೆಗಾಸಿಟಿ ರಿವಾಲ್‌ವಿಂಗ್ ನಿಧಿ ಅಡಿಯಲ್ಲಿ ಅರ್ಕಾವತಿ ನೀರಿನ ಮೂಲವನ್ನು ಪುನರುಜ್ಜೀವನಗೊಳಿಸುವುದರ ಜೊತೆಗೆ ಎತ್ತಿನಹೊಳೆ ಯೋಜನೆಯಿಂದ 1.7 ಟಿ.ಎಂ.ಸಿ. ನೀರನ್ನು ಯೋಜನಾಬದ್ಧವಾಗಿ ಬಳಸಿಕೊಳ್ಳುವ ಸಲುವಾಗಿ 312 ಕೋಟಿ ರೂ. ಮೊತ್ತದಲ್ಲಿ ಕೈಗೊಳ್ಳುತ್ತಿರುವ ತಿಪ್ಪಗೊಂಡನಹಳ್ಳಿ ಜಲಾಶಯ ಪುನಶ್ಚೇತನ ಕಾಮಗಾರಿಯನ್ನು 2022–23ನೇ ಸಾಲಿನಲ್ಲಿ ಮುಕ್ತಾಯಗೊಳಿಸಲಾಗುವುದು.

304. ಬೆಂಗಳೂರು ನಗರದ ರಾಜಕಾಲುವೆಗಳಲ್ಲಿ ಕೊಳಚೆ ನೀರನ್ನು ಬೇರ್ಪಡಿಸಿ, ಪುನರುಜ್ಜೀವನಗೊಳಿಸಿ, ನಾಗರಿಕರಿಗೆ ವಿಹಾರ ತಾಣವಾಗಿ ಅಭಿವೃದ್ಧಿಪಡಿಸುವ ಮಹತ್ವದ ಯೋಜನೆ ಕೆ–100 ಸಿಟಿಜನ್ ವಾಟರ್ ವೇ. ಈ ಯೋಜನೆಯಡಿ 195 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೋರಮಂಗಲ ರಾಜಕಾಲುವೆಯನ್ನು ಕೆ.ಆರ್. ಮಾರುಕಟ್ಟೆ ಜಂಕ್ಷನ್ ನಿಂದ ಬೆಳ್ಳಂದೂರು ಕೆರೆಯವರೆಗೆ ಅಭಿವೃದ್ಧಿಪಡಿಸಲಾಗುತ್ತಿದೆ.

305. **ಬೆಂಗಳೂರು ನಗರದ ಮಳೆ ನೀರು ಹರಿವಿಕೆಗೆ ಬೃಹತ್ ಮಳೆ ನೀರುಗಾಲುವೆಗಳನ್ನು ಮತ್ತು ಮಳೆ ಸುರಿದಾಗ ಪ್ರವಾಹ ಉಂಟಾಗದಂತೆ ತಡೆಯಲು ರಾಜಕಾಲುವೆ ಅಭಿವೃದ್ಧಿಗಾಗಿ**

**1,500 ಕೋಟಿ ರೂ.ಗಳ ಮೊತ್ತದಲ್ಲಿ ಯೋಜನೆ ರೂಪಿಸಲಾಗುವುದು.**

306. ಬೆಂಗಳೂರಿನ ಪೀಣ್ಯ ಕೈಗಾರಿಕಾ ಪ್ರದೇಶದ ಸಾಮರ್ಥ್ಯದ ಸಂಪೂರ್ಣ ಬಳಕೆಯಾಗಿರುವ ಹಿನ್ನೆಲೆಯಲ್ಲಿ ಅಲ್ಲಿರುವ ಕೈಗಾರಿಕಾ ಘಟಕಗಳ ಬೆಳವಣಿಗೆಗೆ ಇನ್ನೊಂದು ಸಣ್ಣ ಮತ್ತು ಪೂರಕವಾಗಿ ಅತಿ ಸಣ್ಣ ಕೈಗಾರಿಕಾ ಪಾರ್ಕ್ ಅಭಿವೃದ್ಧಿಪಡಿಸಲಾಗುವುದು.

307. **ದಿನೇ ದಿನೇ ಹೆಚ್ಚುತ್ತಿರುವ ಬೆಂಗಳೂರಿನ ಜನಸಂಖ್ಯೆಗೆ ಅನುಗುಣವಾಗಿ ನಗರದ ನಾಲ್ಕು ಭಾಗಗಳಲ್ಲಿ 500 ಹಾಸಿಗೆ ಸಾಮರ್ಥ್ಯವುಳ್ಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಾಣ ಮಾಡಲಾಗುವುದು.**

308. **ನಮ್ಮ ಸರ್ಕಾರವು ಬೆಂಗಳೂರಿನ ಆಯ್ದ ಸರ್ಕಾರಿ ಶಾಲೆಗಳಲ್ಲಿ ಅಗತ್ಯ ಮೂಲಸೌಕರ್ಯ ಹಾಗೂ ಗುಣಮಟ್ಟದ ಶಿಕ್ಷಣ ಒದಗಿಸಲು ಸವಿವರವಾದ ಯೋಜನೆಯನ್ನು ರೂಪಿಸಲಾಗಿದೆ. ಈ ಯೋಜನೆಯಡಿಯಲ್ಲಿ 89 ಕೋಟಿ ರೂ.ಗಳ ವೆಚ್ಚದಲ್ಲಿ ಬೆಂಗಳೂರಿನ ಆಯ್ದ 20 ಶಾಲೆಗಳನ್ನು "ಬೆಂಗಳೂರು ಪಬ್ಲಿಕ್ ಶಾಲೆ" ಗಳಾಗಿ ಅಭಿವೃದ್ಧಿಪಡಿಸಲಾಗುವುದು.**

309. ಬೆಂಗಳೂರಿನ ಮಡಿವಾಳ ಮತ್ತು ಎಲೆಮಲ್ಲಪ್ಪಶೆಟ್ಟಿ ಕೆರೆಗಳ ಸಮಗ್ರ ಅಭಿವೃದ್ಧಿಗೆ ಬಿ.ಬಿ.ಎಂ.ಪಿ ವತಿಯಿಂದ ರೂಪುರೇಷೆಗಳನ್ನು ಸಿದ್ಧಪಡಿಸಲಾಗುವುದು.

310. **ಬೆಂಗಳೂರು ನಗರದ ಸಮಗ್ರ ಅಭಿವೃದ್ಧಿಗಾಗಿ 2022-23ನೇ ಸಾಲಿನಲ್ಲಿ ಒಟ್ಟಾರೆಯಾಗಿ 8,409 ಕೋಟಿ ರೂ. ಅನುದಾನ ಒದಗಿಸಲಾಗಿದೆ.**

# ವಲಯ–5: ಸಂಸ್ಕೃತಿ, ಪರಂಪರೆ ಮತ್ತು ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ

***ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ***
***ಹಸಿಗೋಡೆಯ ಹರಳಿನಂತೆ ಹುಸಿಹೋಗದ ಕನ್ನಡ***
***ಹೊಸೆದ ಹಾಗೆ ಹುರಿಗೊಳ್ಳುವ ಗುರಿ ತಾಗುವ ಕನ್ನಡ:***

– ***ಚನ್ನವೀರ ಕಣವಿ***

ಕನ್ನಡ ನಾಡಿನ ಸಾಹಿತ್ಯ ಹಾಗೂ ಸಂಸ್ಕೃತಿಯ ರಕ್ಷಣೆ, ಅಭಿವೃದ್ಧಿಯ ಜೊತೆಗೆ ಸಮೃದ್ಧ ನೈಸರ್ಗಿಕ ಸಂಪನ್ಮೂಲವನ್ನೂ ಕಾಪಾಡುವುದು ನಮ್ಮ ಗುರಿಯಾಗಿದೆ. ಈಗಾಗಲೇ ಪರಿಸರ ಮಾಲಿನ್ಯದಿಂದಾದ ಕೊರತೆಯನ್ನು ಸರಿದೂಗಿಸಿ, ಪರಿಸರ ಸಂರಕ್ಷಿಸುವ ಉದ್ದೇಶದಿಂದ ನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇವೆ.

311. **ನಮ್ಮ ನಾಡು ನುಡಿ ಸಂಸ್ಕೃತಿ ಬಿಂಬಿಸಲು ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಾವೇರಿಯಲ್ಲಿ ಆಯೋಜಿಸಲು 20 ಕೋಟಿ ರೂ.ಗಳನ್ನು ಒದಗಿಸಲಾಗುವುದು**

312. ಕರ್ನಾಟಕ ಕಲಾಗ್ರಾಮವನ್ನು ಪೂರ್ಣ ಪ್ರಮಾಣದಲ್ಲಿ ಸಾಂಸ್ಕೃತಿಕವಾಗಿ ಸಜ್ಜುಗೊಳಿಸಿ ನಿರಂತರವಾಗಿ ಸಾಂಸ್ಕೃತಿಕ ಚಟುವಟಿಕೆಗಳು ನಡೆಸಲು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುವುದು.

313. ಯಕ್ಷಗಾನ ಕಲೆಯ ಸಮಗ್ರ ಆಯಾಮಗಳ ಕುರಿತು ರಾಜ್ಯಮಟ್ಟದ ಯಕ್ಷಗಾನ ಸಮ್ಮೇಳನ ಆಯೋಜಿಸಲಾಗುವುದು.

314. **ಚಿಕ್ಕಬಳ್ಳಾಪುರ ಜಿಲ್ಲೆ ಕೈವಾರ ನಾಡಿನಲ್ಲಿ ಜನ್ಮತಾಳಿದ ಶ್ರೀ ಯೋಗಿನಾರೇಯಣಾ ಯತೀಂದ್ರರು (ಕೈವಾರ ತಾತಯ್ಯ) ಸಮಾಜ ಸುಧಾರಕರು, ವೇದಾಂತ ಸಾರವಳಿ, ತತ್ವಗಳು, ಕೀರ್ತನೆಗಳು ಹಾಗೂ ಹಲವಾರು ಪ್ರವಚನಗಳು ಆಧ್ಯಾತ್ಮಿಕ ಗ್ರಂಥಗಳನ್ನು ಬರೆದು ವರಕವಿಗಳಾಗಿದ್ದಾರೆ. ಶ್ರೀ ಯೋಗಿನಾರೇಯಣಾ ಯತೀಂದ್ರರ ಜಯಂತಿಯನ್ನು ರಾಜ್ಯ ಸರ್ಕಾರದ ವತಿಯಿಂದ ಪ್ರತಿ ವರ್ಷ ಮಾರ್ಚ್ 27ರಂದು ಆಚರಿಸಲಾಗುವುದು**

315. ನಶಿಸಿ ಹೋಗುತ್ತಿರುವ ತಳಸಮುದಾಯದಲ್ಲಿರುವ ವಿಶಿಷ್ಟ ಕಲೆಗಳನ್ನು ಉಳಿಸಿ ಮುನ್ನಲೆಗೆ ತರಲು ರಾಜ್ಯದ ಪ್ರತಿ ವಿಭಾಗ ಮಟ್ಟದಲ್ಲಿ ಒಂದರಂತೆ ಒಟ್ಟು ನಾಲ್ಕು ಸಾಂಸ್ಕೃತಿಕ ಶಿಬಿರ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

316. ಕರ್ನಾಟಕದ ಹೆಸರಾಂತ ಸಾಹಿತಿಗಳಾದ ಡಾ.ಸಿದ್ಧಲಿಂಗಯ್ಯ, ಡಾ. ಎಂ. ಚಿದಾನಂದಮೂರ್ತಿ, ಡಾ. ಚಂದ್ರಶೇಖರ ಪಾಟೀಲ್, ಶ್ರೀ ಚನ್ನವೀರ ಕಣವಿ ರವರ ಅಮೂಲ್ಯ ಸಾಹಿತ್ಯಗಳನ್ನು ಉಳಿಸಲು ವಿಶೇಷ ಯೋಜನೆ ರೂಪಿಸಲಾಗುವುದು.

317. ಡಾ॥ ಮಹಾದೇವ ಬಣಕಾರರ ಸಾಂಸ್ಕೃತಿಕ ಭವನವನ್ನು ಹಾವೇರಿ ಜಿಲ್ಲೆಯಲ್ಲಿ ಎರಡು ಕೋಟಿ ರೂ.ಗಳಲ್ಲಿ ನಿರ್ಮಿಸಲಾಗುವುದು.

318. ಮಂಗಳೂರು ವಿಶ್ವವಿದ್ಯಾಲಯದಲ್ಲಿ ಅರೆಭಾಷೆ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲಾಗುವುದು.

319. **ನೆರೆ ರಾಜ್ಯಗಳಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಅಭಿವೃದ್ಧಿಪಡಿಸಲು, ಕಾಸರಗೋಡಿನಲ್ಲಿ ಕಯ್ಯಾರ ಕಿಂಞಣ್ಣ ರೈ ರವರ ಹೆಸರಿನಲ್ಲಿ, ಅಕ್ಕಲಕೋಟೆಯಲ್ಲಿ ಜಯದೇವಿತಾಯಿ ಲಿಗಾಡೆ ರವರ ಹೆಸರಿನಲ್ಲಿ ಮತ್ತು ಗೋವಾದಲ್ಲಿ ಕನ್ನಡ ಭವನವನ್ನು ನಿರ್ಮಿಸಲಾಗುವುದು.**

320. ಗಡಿಯಲ್ಲಿರುವ ಪ್ರದೇಶಗಳಲ್ಲಿ ಸಂಪರ್ಕ ರಸ್ತೆಗಳು, ಕುಡಿಯುವ ನೀರಿನ ವ್ಯವಸ್ಥೆ, ಬೀದಿ ದೀಪಗಳು ಮುಂತಾದ ಮೂಲಭೂತ ಸೌಕರ್ಯಗಳನ್ನು ಗ್ರಾಮ ಪಂಚಾಯಿತಿಗಳ ಮೂಲಕ ಒದಗಿಸಿ ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುವುದು.

321. **ನಮ್ಮ ಸರ್ಕಾರವು ಪ್ರಪ್ರಥಮವಾಗಿ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ "ಸ್ವಾಮಿ ವಿವೇಕಾನಂದ ಯುವಕರ ಸ್ವಸಹಾಯ ಗುಂಪು"ಗಳನ್ನು ರಚಿಸಿ, ಸ್ವ-ಉದ್ಯೋಗ ಹಾಗೂ ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು ಯುವಕರನ್ನು ಪ್ರೋತ್ಸಾಹಿಸಲಾಗುವುದು.**

322. ಸರ್ಕಾರಿ ವೈಮಾನಿಕ ತರಬೇತಿ ಶಾಲೆ ಜಕ್ಕೂರು ಇಲ್ಲಿನ ವಿಮಾನ ನಿಲ್ದಾಣವನ್ನು ನವೀಕರಿಸಿ ಹಲವಾರು ವರ್ಷಗಳಿಂದ ಸ್ಥಗಿತಗೊಂಡಿದ್ದ ತರಬೇತಿ ಶಾಲೆಯನ್ನು ಪುನರಾರಂಭಿಸಲಾಗಿದ್ದು, 100 ಯುವ ಜನರಿಗೆ ಪೈಲೆಟ್ ತರಬೇತಿಗೆ ಚಾಲನೆ ನೀಡಲಾಗಿದೆ. ಈ ಶಾಲೆಯನ್ನು ಸಾರ್ವಜನಿಕ / ಖಾಸಗಿ ಸಹಭಾಗಿತ್ವದಲ್ಲಿ ಉತ್ಕೃಷ್ಟ ಮಟ್ಟಕ್ಕೆ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುತ್ತಿದೆ.

323. ರಾಜ್ಯ ಹಾಗೂ ಜಿಲ್ಲಾ ಮಟ್ಟದ ಕ್ರೀಡಾಂಗಣವನ್ನು ಉನ್ನತೀಕರಿಸಿ ಅತ್ಯಾಧುನಿಕ ಕ್ರೀಡಾ ಉಪಕರಣಗಳನ್ನು ಒದಗಿಸಲು

ಒಟ್ಟು 100 ಕೋಟಿ ರೂ.ಗಳ ಮೊತ್ತದಲ್ಲಿ ಸಮಗ್ರ ಯೋಜನೆಯನ್ನು ರೂಪಿಸಲಾಗುವುದು.

324. ಗ್ರಾಮೀಣ ಹಾಗೂ ದೇಸಿ ಕ್ರೀಡೆಗಳನ್ನು ಉತ್ತೇಜಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ನರೇಗಾ ಯೋಜನೆಯಡಿ 'ಕ್ರೀಡಾ ಅಂಕಣ' ಗಳನ್ನು ಒಟ್ಟು 504 ಕೋಟಿ ರೂ.ಗಳ ಮೊತ್ತದಲ್ಲಿ ನಿರ್ಮಿಸಲಾಗುವುದು.

325. ರಾಜ್ಯದ ಕ್ರೀಡಾಂಗಣಗಳನ್ನು ಸಮರ್ಪಕವಾಗಿ ನಿರ್ವಹಿಸಲು ಮತ್ತು ಆರ್ಥಿಕ ಸ್ವಾವಲಂಬನೆಗೊಳಿಸಿ ಮೇಲ್ದರ್ಜೆಗೇರಿಸಲು 'ಬಳಕೆದಾರರ ಶುಲ್ಕ' (Pay and Play) ವ್ಯವಸ್ಥೆಯನ್ನು ಅಳವಡಿಸಲಾಗುವುದು.

326. ರಾಜ್ಯದಲ್ಲಿ ಸಾಹಸ ಕ್ರೀಡೆ ಮತ್ತು ಸಾಹಸ ಪ್ರವಾಸೋದ್ಯಮವನ್ನು ಉತ್ತೇಜಿಸಲು ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಯನ್ನು ಉನ್ನತೀಕರಿಸಿ ಅಗತ್ಯ ಸಾಹಸ ಕ್ರೀಡಾ ಮೂಲಸೌಕರ್ಯವನ್ನು ಒದಗಿಸಲಾಗುವುದು.

327. ಮೈಸೂರು ನಗರದಲ್ಲಿ ಈಗಾಗಲೇ ಅನುಷ್ಠಾನಗೊಳಿಸಿರುವಂತೆ ರಾಜ್ಯಾದ್ಯಂತ ಯುವ ಕೇಂದ್ರಿತ ವಿವಿಧ ಯೋಜನೆಗಳನ್ನು ಸಂಯೋಜಿಸಿ ಯುವಜನತೆಗೆ ಉತ್ತಮ ಸೇವೆಗಳನ್ನು ದೊರಕಿಸಲಾಗುವುದು.

328. ನೇತಾಜಿ ಸುಭಾಷ್‌ಚಂದ್ರ ಬೋಸ್ ಅವರ 125ನೇ ಜನ್ಮ ದಿನಾಚರಣೆಯ ಅಂಗವಾಗಿ NCC ಕೆಡೆಟ್‌ಗಳಿಗೆ ತರಬೇತಿ ನೀಡಲಾಗುವುದು. ಜೊತೆಗೆ ಉತ್ತರ ಕನ್ನಡ, ಚಿತ್ರದುರ್ಗ,

ರಾಮನಗರ ಮತ್ತು ಕೆ.ಆರ್.ಎಸ್ ಮತ್ತು ಆಲಮಟ್ಟಿ ಹಿನ್ನೀರಿನಲ್ಲಿ ಸಾಹಸ ಕ್ರೀಡಾ ತರಬೇತಿಯನ್ನು ನೀಡಲಾಗುವುದು.

329. ಖೇಲೋ ಇಂಡಿಯಾ ಯೂನಿವರ್ಸಿಟಿ ಗೇಮ್ಸ್-2021ನ್ನು ಪ್ರಸಕ್ತ ಸಾಲಿನಲ್ಲಿ ಬೆಂಗಳೂರಿನಲ್ಲಿ ಆಯೋಜಿಸಲಾಗುವುದು. ಈ ಕ್ರೀಡಾಕೂಟದಲ್ಲಿ 8,000ಕ್ಕೂ ಅಧಿಕ ಕ್ರೀಡಾಪಟುಗಳು ಹಾಗೂ 20 ವಿವಿಧ ಕ್ರೀಡೆಗಳಲ್ಲಿ ಸ್ಪರ್ಧೆಗಳನ್ನು ಸಂಘಟಿಸಲಾಗುವುದು.

330. ಕೇಂದ್ರದ ಪ್ರಾಯೋಜಕತ್ವದ ಎನ್.ಎಸ್.ಡಿ.ಎಫ್. ಯೋಜನೆಯಡಿ ಶಿವಮೊಗ್ಗ ನಗರದಲ್ಲಿ ಹೊಸದಾಗಿ ಕ್ರೀಡಾ ಅಕಾಡೆಮಿ ಸ್ಥಾಪಿಸಲು ಉದ್ದೇಶಿಸಿದ್ದು, ಇದಕ್ಕಾಗಿ 20 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು.

331. **2024ರ ಒಲಂಪಿಕ್ಸ್ ಮತ್ತು ಪ್ಯಾರಾಲಂಪಿಕ್ಸ್‌ಗೆ ರಾಜ್ಯದಿಂದ ಕನಿಷ್ಟ 75 ಕ್ರೀಡಾಪಟುಗಳನ್ನು ಸಿದ್ಧಪಡಿಸಲು 'ಅಮೃತ ಕ್ರೀಡಾ ದತ್ತು ಯೋಜನೆ' ಯಡಿ ತಲಾ 10 ಲಕ್ಷ ರೂ. ಗಳವರೆಗೆ ಪ್ರತಿ ವರ್ಷ ಶ್ರೇಷ್ಠ ಮಟ್ಟದ ತರಬೇತಿ ಪಡೆಯಲು ವಿನಿಯೋಗಿಸಲಾಗುವುದು.**

332. **50 ವರ್ಷ ಮೇಲ್ಪಟ್ಟ ಕಷ್ಟ ಪರಿಸ್ಥಿತಿಯಲ್ಲಿರುವ ಕುಸ್ತಿ ಕ್ರೀಡಾಪಟುಗಳಿಗೆ ನೀಡುತ್ತಿರುವ ಮಾಸಾಶನವನ್ನು 1,000 ರೂ.ನಂತೆ ಹೆಚ್ಚಿಸಲು ನಮ್ಮ ಸರ್ಕಾರವು ಘೋಷಿಸುತ್ತದೆ.**

333. **ಪ್ರವಾಸೋದ್ಯಮವನ್ನು ಉತ್ತೇಜಿಸಲು ಹಂಪಿ-ಬಾದಾಮಿ-ಐಹೊಳೆ-ಪಟ್ಟದಕಲ್ಲು-ವಿಜಯಪುರ ಪ್ರವಾಸಿ ವೃತ್ತವನ್ನು ಮತ್ತು ಮೈಸೂರು-ಶ್ರೀರಂಗಪಟ್ಟಣ-ಹಾಸನ-ಬೇಲೂರು-ಹಳೇಬೀಡು ಪ್ರವಾಸಿ ವೃತ್ತವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದೆ.**

334. **ಬೇಲೂರು, ಹಳೇಬೀಡು, ಸೋಮನಾಥಪುರಗಳನ್ನು ಒಳಗೊಂಡಂತೆ ಹೊಯ್ಸಳರ ಪವಿತ್ರ ತಾಣಗಳ ವ್ಯಾಪ್ತಿಯಲ್ಲಿ ಬರುವ ಸ್ಮಾರಕಗಳನ್ನು ಪ್ರಸಕ್ತ ಸಾಲಿನಲ್ಲಿ ಯುನೆಸ್ಕೊ ವಿಶ್ವ ಪರಂಪರೆ ತಾಣಗಳ (UNESCO World Heritage Sites) ಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುವುದು.**

335. ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ಜೋಗಜಲಪಾತದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಹೋಟೆಲ್ ಹಾಗೂ ರೋಪ್‌ವೇ ಅಭಿವೃದ್ಧಿ ಕಾಮಗಾರಿಗಳನ್ನು 116 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುವುದು.

336. ನಂದಿ ಬೆಟ್ಟದಲ್ಲಿ ಪಿ.ಪಿ.ಪಿ ಅಡಿ ರೋಪ್‌ವೇ ಅನ್ನು 93 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲು ಅನುಮೋದನೆ ನೀಡಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಯಾಣದಲ್ಲಿ ಖಾಸಗಿ ಸಹಭಾಗಿತ್ವದೊಂದಿಗೆ ರೋಪ್‌ವೇ ನಿರ್ಮಿಸಲು ಯೋಜನೆ ರೂಪಿಸಲಾಗುವುದು.

337. ಶ್ರೀ ಆಂಜನೇಯ ಸ್ವಾಮಿಯ ಜನ್ಮಸ್ಥಳವೆಂದು ಪ್ರಸಿದ್ಧವಾದ ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಬೆಟ್ಟದ ಸಮಗ್ರ ಅಭಿವೃದ್ಧಿಗೆ ಯೋಜನೆ ರೂಪಿಸಲಾಗುವುದು. ಪ್ರವಾಸಿಗಳಿಗೆ ಮೂಲಭೂತ ಸೌಕರ್ಯ, ರೋಪ್‌ವೇ ಒಳಗೊಂಡಂತೆ ಕಾಮಗಾರಿಗಳನ್ನು 100 ಕೋಟಿ ರೂ.ಗಳ ಮೊತ್ತದಲ್ಲಿ ಅನುಷ್ಠಾನಗೊಳಿಸಲಾಗುವುದು.

338. ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಹಾಗೂ ಚಿಕ್ಕಮಗಳೂರಿನ ಮುಳ್ಳಯ್ಯನಗಿರಿ ದತ್ತಪೀಠ ಬೆಟ್ಟದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ರೋಪ್‌ವೇ ಅನ್ನು ನಿರ್ಮಾಣ ಮಾಡಲು ಕೇಂದ್ರ

ಸರ್ಕಾರದ "ಪರ್ವತಮಾಲಾ" ಯೋಜನೆಯಡಿ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು.

339. **ಕಡಲತೀರದಲ್ಲಿ ಪರಿಸರ ಸ್ನೇಹಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸಿ.ಆರ್.ಜಡ್ ಮಾನದಂಡಗಳನ್ನು ಸಡಿಲಗೊಳಿಸಲು ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿ ಅನುಮೋದನೆ ಪಡೆಯಲು ಎಲ್ಲಾ ಕ್ರಮಗಳನ್ನು ನಮ್ಮ ಸರ್ಕಾರವು ಕೈಗೊಳ್ಳಲಿದೆ.**

340. ಪಾರಂಪರಿಕ ಪ್ರವಾಸಿ ತಾಣಗಳಾದ ಬೀದರ್ ಹಾಗೂ ಕಲಬುರಗಿ ಕೋಟೆಗಳಲ್ಲಿ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (Archaeological Survey of India)ಯ ಸಹಯೋಗದೊಂದಿಗೆ ಪುನರುಜ್ಜೀವನಗೊಳಿಸಲು ಉದ್ದೇಶಿಸಲಾಗಿದೆ.

341. ರಾಜ್ಯದ ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ "Adopt a Monument" ಯೋಜನೆ ಮೂಲಕ ದತ್ತು ಪಡೆಯಲು ಅವಕಾಶ ಕಲ್ಪಿಸಲಾಗುವುದು.

342. ಪ್ರವಾಸೋದ್ಯಮ ಇಲಾಖೆಯಲ್ಲಿ ನೋಂದಣಿಯಾಗಿರುವ 400 ಪ್ರವಾಸಿ ಮಾರ್ಗದರ್ಶಿಗಳಿಗೆ ಮಾಸಿಕ 2000 ರೂ.ಗಳ ಪ್ರೋತ್ಸಾಹಕವನ್ನು ನೀಡಿ ಸಂವಹನ ಕೌಶಲ್ಯ ತರಬೇತಿ ನೀಡಲಾಗುವುದು.

343. ಬೆಂಗಳೂರು ವಿಶ್ವದ ಪ್ರಮುಖ ವ್ಯವಹಾರಿಕ ಕೇಂದ್ರವಾಗಿದ್ದು, ನಮ್ಮ ದೇಶದ ಐ.ಟಿ. ರಾಜಧಾನಿಯಾಗಿದೆ. ವಿಶ್ವ ದರ್ಜೆಯ ಮೂಲಭೂತ ಸೌಕರ್ಯ, ಸಾರಿಗೆ ಸಂಪರ್ಕ, ತಂತ್ರಜ್ಞಾನ Ease of Doing Business, ಮತ್ತು ಉತ್ತಮ ಹವಾಮಾನ ಇರುವುದರಿಂದ ಬೆಂಗಳೂರು ನಗರವನ್ನು

Meeting, Incentives, conferences & Exhibitions (MICE) ಹಬ್ ಆಗಿ ಮೇಲ್ದರ್ಜೆಗೇರಿಸಲಾಗುವುದು.

344. **ಕಳೆದ ಐದು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಅರಣ್ಯ ಜೀವಿಶಾಸ್ತ್ರ ವ್ಯವಸ್ಥೆಯ ಮೇಲೆ ಪ್ರಾಕೃತಿಕ ಮತ್ತು ಮಾನವ ನಿರ್ಮಿತ ಒತ್ತಡಗಳಿಂದ ಉಂಟಾದ ದುಷ್ಪರಿಣಾಮವನ್ನು ಸರಿದೂಗಿಸುವ (compensate) ಉದ್ದೇಶಕ್ಕಾಗಿ ಹಸಿರು ಆಯವ್ಯಯವನ್ನು (Eco-Budget) ರೂಪಿಸಿ, 100 ಕೋಟಿ ರೂ. ಅನುದಾನವನ್ನು ಹಂಚಿಕೆ ಮಾಡಲಾಗುವುದು.**

345. **ಕರಾವಳಿ ಭಾಗದ ಜಲಮೂಲಗಳನ್ನು ಕಲುಷಿತಗೊಳಿಸುತ್ತಿರುವ ಪ್ಲಾಸ್ಟಿಕ್ ಮಾಲಿನ್ಯವನ್ನು ನಿರ್ವಹಿಸಲು ವಿಶ್ವಬ್ಯಾಂಕ್ ನೆರವಿನೊಂದಿಗೆ ವಿನೂತನವಾದ "ಬ್ಲೂ-ಪ್ಲಾಸ್ಟಿಕ್ ನಿರ್ವಹಣೆ ಯೋಜನೆ" ಯನ್ನು ಮುಂದಿನ 5 ವರ್ಷಗಳ ಅವಧಿಗೆ ಒಟ್ಟು 840 ಕೋಟಿ ರೂ.ಗಳ ವೆಚ್ಚದಲ್ಲಿ ದೇಶದಲ್ಲೇ ಮೊಟ್ಟಮೊದಲಿಗೆ ಜಾರಿಗೆ ತರಲಾಗುವುದು.**

346. ಖಾಸಗಿ ಭೂಮಿಗಳಲ್ಲಿ ಶ್ರೀಗಂಧ ಮರಗಳನ್ನು ಬೆಳೆಸುವಂತೆ ಉತ್ತೇಜನ ನೀಡಲು ಶ್ರೀಗಂಧದ ಮರಗಳ ಕತ್ತಾವಣೆ, ಸಾಗಾಣಿಕೆ ಮತ್ತು ಮಾರಾಟ ಪ್ರಕ್ರಿಯೆಗಳನ್ನು ಸರಳೀಕರಣ ಮಾಡಲು ಶ್ರೀಗಂಧ ನೀತಿಯನ್ನು ರೂಪಿಸಲಾಗುವುದು.

347. ವನ್ಯಜೀವಿ ಸಂರಕ್ಷಣೆ ಅಧಿನಿಯಮ, 1972ರಡಿ ಅಧಿಸೂಚಿಸಿರುವ ಸಂರಕ್ಷಣಾ ಮೀಸಲು (Conservation Reserves) ಪ್ರದೇಶಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಐದು ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದು.

348. ಹಾಸನ, ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳಲ್ಲಿ ಆನೆ ಹಾವಳಿಯನ್ನು ತಡೆಗಟ್ಟಲು 100 ಕೋಟಿ ರೂ.ಗಳ ಅನುದಾನದಲ್ಲಿ ರೈಲುಹಳಿ ತಡೆಗೋಡೆ ನಿರ್ಮಿಸಲಾಗುವುದು.

349. ಖಾಸಗಿ ಭೂಮಿಗಳಲ್ಲಿ ರೈತರು ಬೆಳೆದಿರುವ ಮರಗಳ ಕಡಿಯುವ ಮತ್ತು ಸಾಗಾಣಿಕೆ ಅನುಮತಿ ಪ್ರಕ್ರಿಯೆಯನ್ನು ಸರಳೀಕೃತಗೊಳಿಸಲಾಗುವುದು.

350. ಪರಿಸರವನ್ನು ಸಂರಕ್ಷಿಸಲು ಜಾರಿಗೊಳಿಸಿರುವ ಅಧಿನಿಯಮಗಳ ಉದ್ದೇಶಗಳನ್ನು ಈಡೇರಿಸಲು ಮತ್ತು ಅವುಗಳ ಅನುಷ್ಠಾನವನ್ನು ಬಲಪಡಿಸಲು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಆಡಳಿತ ವಿಧಾನಗಳಲ್ಲಿ ಸುಧಾರಣೆ ತರಲಾಗುವುದು.

351. ಬೆಳಗಾವಿ ಜಿಲ್ಲೆಯ ಹಿಡ್ಕಲ್ ಅಣೆಕಟ್ಟು ಪ್ರದೇಶವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಿ, ಪಕ್ಷಿಗಳ ಹಾಗೂ ಚಿಟ್ಟೆಗಳ ಸಂರಕ್ಷಣೆಗಾಗಿ ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಪಕ್ಷಿಧಾಮ ಹಾಗೂ ಚಿಟ್ಟೆಗಳ ಉದ್ಯಾನವನ್ನು ಸ್ಥಾಪಿಸಲಾಗುವುದು.

352. **ಸಂಸ್ಕೃತಿ, ಪರಂಪರೆ ಮತ್ತು ನೈಸರ್ಗಿಕ ಸಂಪನ್ಮೂಲಗಳ ರಕ್ಷಣೆಗೆ 2022-23ನೇ ಸಾಲಿನಲ್ಲಿ ಒಟ್ಟಾರೆಯಾಗಿ 3,012 ಕೋಟಿ ರೂ. ಅನುದಾನ ಒದಗಿಸಲಾಗಿದೆ.**

## ವಲಯ-6: ಆಡಳಿತ ಸುಧಾರಣೆ ಮತ್ತು ಸಾರ್ವಜನಿಕ ಸೇವೆ

ಕೋವಿಡ್-19 ಯಶಸ್ವಿ ನಿರ್ವಹಣೆ ಹಾಗೂ ಪ್ರಕೃತಿ ವಿಕೋಪಕ್ಕೆ ತ್ವರಿತ ಸ್ಪಂದನೆ ಮಾಡಿರುವ ನಮ್ಮ ಸರ್ಕಾರ ಜನರಿಗೆ ಇನ್ನಷ್ಟು ಹತ್ತಿರವಾಗುವ ಹಲವಾರು ಉಪಕ್ರಮಗಳನ್ನು ಕೈಗೊಂಡಿದೆ. ತಂತ್ರಜ್ಞಾನದ ನೆರವಿನಿಂದ ಸರ್ಕಾರಿ ಸವಲತ್ತುಗಳನ್ನು ಪಡೆಯಲು ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಆದ್ಯತೆ ನೀಡಿದೆ. ಎರಡನೇ ಆಡಳಿತ ಸುಧಾರಣಾ ಆಯೋಗದ ಹಲವಾರು ಶಿಫಾರಸುಗಳನ್ನು ಜಾರಿಗೊಳಿಸಿ, ಜನಸ್ನೇಹಿ ಆಡಳಿತಕ್ಕೆ ನಮ್ಮ ಬದ್ಧತೆಯನ್ನು ದೃಢಪಡಿಸಿದೆ.

353. **ನಮ್ಮ ಸರ್ಕಾರವು ವಿವಿಧ ಸಾಮಾಜಿಕ ಭದ್ರತಾ ಪಿಂಚಣಿ ಯೋಜನೆಗಳಡಿ 59.45 ಲಕ್ಷ ಫಲಾನುಭವಿಗಳಿಗೆ ನೀಡುತ್ತಿರುವ ಮಾಸಾಶನ ಮೊತ್ತವನ್ನು ಹೆಚ್ಚಿಸಿದೆ. ಪ್ರಸಕ್ತ ಸಾಲಿನಿಂದ ಅವಿವಾಹಿತ, ವಿಚ್ಛೇದಿತ ಮಹಿಳೆಯರಿಗೆ ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ನೀಡಲಾಗುತ್ತಿರುವ ಮಾಸಿಕ ಪಿಂಚಣಿ ಮೊತ್ತವನ್ನು 600 ರೂ.ಗಳಿಂದ 800 ರೂ.ಗಳಿಗೆ ಹೆಚ್ಚಿಸಲಾಗುವುದು. ಇದರಿಂದ 1.32 ಲಕ್ಷ ಫಲಾನುಭವಿಗಳಿಗೆ ಅನುಕೂಲವಾಗಲಿದೆ.**

354. ಪ್ರವಾಹದಿಂದ ಹಾನಿಗೊಳಗಾದ ಬೆಳೆಗಳಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ 2,453 ಕೋಟಿ ರೂ.ಗಳ ಇನ್‌ಪುಟ್ ಸಬ್ಸಿಡಿಯನ್ನು ವಿತರಿಸಲಾಗಿದೆ.

355. "ಕಂದಾಯ ದಾಖಲೆ ಮನೆ ಬಾಗಿಲಿಗೆ" ಯೋಜನೆಯ ಮೂಲಕ ಸಾರ್ವಜನಿಕರಿಗೆ ನೀಡುತ್ತಿರುವ ಪಹಣಿ, ಅಟ್ಲಾಸ್, ಆದಾಯ ಮತ್ತು ಜಾತಿ ಪ್ರಮಾಣ ಪತ್ರಗಳನ್ನು ರೈತರ ಮನೆ ಬಾಗಿಲಿಗೆ ಉಚಿತವಾಗಿ ತಲುಪಿಸಲಾಗುವುದು.

356. **ಆಸಿಡ್ ದಾಳಿಗೊಳಗಾದ ಮಹಿಳೆಯರಿಗೆ ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ ಪಿಂಚಣಿ ಮೊತ್ತವನ್ನು 3,000 ರೂ.ಗಳಿಂದ 10,000 ರೂ.ಗಳಿಗೆ ಹೆಚ್ಚಿಸುವುದಲ್ಲದೇ, ಆಸಿಡ್ ದಾಳಿಗೊಳಗಾದ ಮಹಿಳೆಯರಿಗಾಗಿ ಹೊಸ ಕಾರ್ಯಕ್ರಮವನ್ನು ರೂಪಿಸಲಾಗುವುದು.**

357. **ಇದೇ ಮೊದಲ ಬಾರಿಗೆ ಕೃಷಿ ಜಮೀನು ಮತ್ತು ಇತರೆ ಸ್ವತ್ತುಗಳ ಡ್ರೋನ್ ಆಧಾರಿತ ಸರ್ವೆ ಕಾರ್ಯವನ್ನು ರಾಜ್ಯಾದ್ಯಂತ 287 ಕೋಟಿ ರೂ. ಬಾರಿಗೆ ಕೃಷಿ ಜಮೀನು ಮತ್ತು ಇತರೆ ಸ್ವತ್ತುಗಳ ಡ್ರೋನ್ ಆಧಾರಿತ ಸರ್ವೆ ಕಾರ್ಯವನ್ನು ರಾಜ್ಯಾದ್ಯಂತ ನ್ನು ರೂಪಿಸಲಾಗುವುದನ್ನು ಒದಗಿಸಲಾಗುವುದು.**

358. ಉಪ ನೋಂದಣಾಧಿಕಾರಿಗಳ ಕಛೇರಿಗಳ ಮಾಹಿತಿ ತಂತ್ರಜ್ಞಾನ (IT) ಉಪಕರಣಗಳು ಹಾಗೂ ಮೂಲಸೌಕರ್ಯವನ್ನು 406 ಕೋಟಿ ರೂ. ವೆಚ್ಚದಲ್ಲಿ ಉನ್ನತೀಕರಿಸಲಾಗುವುದು. ಇದರೊಂದಿಗೆ ಉಪ ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು.

359. ಫ್ರೂಟ್ಸ್ ಮತ್ತು ಕಾವೇರಿ ತಂತ್ರಾಂಶಗಳನ್ನು ಸಂಯೋಜನೆಗೊಳಿಸಿ ರೈತರು ಬೆಳೆ ಸಾಲ ನೋಂದಾಯಿಸಲು ಉಪ ನೋಂದಣಾಧಿಕಾರಿಗಳ ಕಛೇರಿಗೆ ಭೇಟಿ ನೀಡುವುದನ್ನು ತಪ್ಪಿಸಲಾಗುವುದು.

360. ಎಲ್ಲಾ ಪಾರಂಪರಿಕ ನೋಂದಾಯಿತ ಶಾಶ್ವತ ದಾಖಲೆಗಳನ್ನು ಖೋಟಾ/ನಕಲಿ/ಮೋಸ ಮಾಡುವುದನ್ನು ತಡೆಯಲು ಹಂತ ಹಂತವಾಗಿ ಸ್ಕ್ಯಾನಿಂಗ್ ಮಾಡಲಾಗುವುದು. ಮೊದಲನೇ ಹಂತದಲ್ಲಿ ಬಿಬಿಎಂಪಿ ಮತ್ತು 10 ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಬರುವ ದಾಖಲೆಗಳನ್ನು 15 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುವುದು.

361. **ಗ್ರಾಮ ಸಹಾಯಕರಿಗೆ ನೀಡುತ್ತಿರುವ ಮಾಸಿಕ ಗೌರವ ಧನವನ್ನು 1,000 ರೂ.ಗಳಷ್ಟು ಹೆಚ್ಚಿಸಲಾಗುವುದು.**

362. ಶಿಕ್ಷಣ, ಆರೋಗ್ಯ ಹಾಗೂ ಸಮಾಜ ಸೇವೆ ವಲಯಗಳಲ್ಲಿ ಉತ್ತಮ ಕೊಡುಗೆ ನೀಡುತ್ತಿರುವ ಮಠಗಳು ಮತ್ತು ಸಂಸ್ಥೆಗಳಿಗೆ ನಮ್ಮ ಸರ್ಕಾರದಿಂದ ನೆರವು ನೀಡಲಾಗುವುದು.

363. ಆಂಧ್ರ ಪ್ರದೇಶದಲ್ಲಿರುವ ಪ್ರಸಿದ್ಧ ಯಾತ್ರಾ ಕ್ಷೇತ್ರ ಶ್ರೀಶೈಲದಲ್ಲಿ ಕರ್ನಾಟಕದ ಯಾತ್ರಿಗಳ ಅನುಕೂಲಕ್ಕಾಗಿ ಯಾತ್ರಿ ನಿವಾಸ ಸಂಕೀರ್ಣವನ್ನು 85 ಕೋಟಿ ರೂ. ಮೊತ್ತದಲ್ಲಿ ಎರಡು ಹಂತಗಳಲ್ಲಿ ನಿರ್ಮಿಸಲು ಯೋಜಿಸಿದ್ದು, ಮೊದಲನೇ ಹಂತದ ಕಾಮಗಾರಿಯನ್ನು 45 ಕೋಟಿ ರೂ.ಗಳ ಮೊತ್ತದಲ್ಲಿ ಕೈಗೊಳ್ಳಲಾಗುವುದು.

364. ಮಹಾರಾಷ್ಟ್ರದ ಪಂಡರಾಪುರಕ್ಕೆ ರಾಜ್ಯದಿಂದ ಭೇಟಿ ನೀಡುವ ಭಕ್ತಾದಿಗಳಿಗೆ ಅನುಕೂಲವಾಗುವಂತೆ ಅತಿಥಿ ಗೃಹವನ್ನು ಅಭಿವೃದ್ಧಿಪಡಿಸಲಾಗುವುದು.

365. ಪುಣ್ಯ ಕ್ಷೇತ್ರಗಳಿಗೆ ಕಡಿಮೆ ಖರ್ಚಿನಲ್ಲಿ ಪ್ರವಾಸ ಕೈಗೊಳ್ಳಲು ಅನುಕೂಲವಾಗುವಂತೆ ಕೆ.ಎಸ್.ಟಿ.ಡಿ.ಸಿ. ವತಿಯಿಂದ ರಿಯಾಯಿತಿ ದರದಲ್ಲಿ ಪ್ಯಾಕೇಜುಗಳನ್ನು ರೂಪಿಸಲಾಗುವುದು.

366. ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ 5,000 ರೂ.ಗಳ ಸಹಾಯಧನ ನೀಡಲಾಗುವುದು.

367. **ದೇವಾಲಯಗಳನ್ನು ಸರ್ಕಾರದ ನಿಯಂತ್ರಣದಿಂದ ಮುಕ್ತಗೊಳಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಕೇಳಿ ಬರುತ್ತಿದೆ. ಭಕ್ತಾದಿಗಳ ಈ ಬೇಡಿಕೆಯನ್ನು ಪರಿಗಣಿಸಿ, ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವಾಲಯಗಳಿಗೆ ಸ್ವಾಯತ್ತತೆ ನೀಡಿ, ಅಭಿವೃದ್ಧಿ ಕಾಮಗಾರಿಗಳ ವಿವೇಚನೆಯನ್ನು ದೇವಾಲಯಗಳಿಗೆ ಪ್ರತ್ಯಾಯೋಜಿಸಲು ಕಾನೂನು ಕ್ರಮ ಕೈಗೊಳ್ಳಲಾಗುವುದು.**

368. ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವಾಲಯಗಳ ಅರ್ಚಕರ, ಆಗಮಿಕರ ಮತ್ತು ನೌಕರರಿಗೆ ನೆರವಾಗಲು ಪ್ರಸ್ತುತ ತಸ್ತೀಕ್ ಮೊತ್ತವನ್ನು 48,000 ರೂ.ಗಳಿಂದ 60,000 ರೂ.ಗಳಿಗೆ ಹೆಚ್ಚಿಸಲಾಗುವುದು.

369. ದೇವಾಲಯಗಳ ವಿವಿಧ ಸೇವೆಗಳನ್ನು ಭಕ್ತಾದಿಗಳಿಗೆ ಆನ್‌ಲೈನ್ ಮುಖಾಂತರ ಲಭ್ಯಪಡಿಸಲು Integrated Temple Management System ತಂತ್ರಾಂಶವನ್ನು ಅನುಷ್ಠಾನಗೊಳಿಸಲಾಗಿದೆ.

370. ಇ-ಆಡಳಿತದ ಮೂಲಕ ಸಾರ್ವಜನಿಕ ಸೇವೆಗಳ ವಿತರಣೆಯಲ್ಲಿ ಉತ್ತೇಜನ, ಐಟಿ ನೀತಿಗಳನ್ನು ಸುಧಾರಣೆ, ಸಾಮರ್ಥ್ಯ ಹೆಚ್ಚಳ, ಬಿಗ್ ಡೇಟಾ ಮತ್ತು ಸೈಬರ್ ಸೆಕ್ಯುರಿಟಿ ಬಲವರ್ಧನೆ ಮಾಡಲು I.I.I.T-ಬೆಂಗಳೂರು ಜೊತೆಗೆ ಪಾಲುದಾರಿಕೆಯಲ್ಲಿ Centre for Technology Research in Digital Governance ಕೇಂದ್ರವನ್ನು ಸ್ಥಾಪಿಸಲು ರಾಜ್ಯ ಸರ್ಕಾರವು ನಿರ್ಧರಿಸಿದೆ.

371. ಆರ್ಥಿಕ ಮಿತ್ಯವ್ಯಯವನ್ನು ಸಾಧಿಸಲು ಲಭ್ಯ ಸೌಲಭ್ಯಗಳ ಸದ್ಬಳಕೆ ಮಾಡಿಕೊಂಡು ನಗರ ಸ್ಥಳೀಯ ಸಂಸ್ಥೆಗಳು, ಎಸ್ಕಾಂಗಳು ತಮ್ಮ ನಾಗರಿಕ ಸೇವೆಗಳನ್ನು ಬೆಂಗಳೂರು ಒನ್, ಕರ್ನಾಟಕ ಒನ್ ಮತ್ತು ಜನಸೇವಕ ಯೋಜನೆಗಳಡಿ ಸುಲಭವಾಗಿ ಜನರಿಗೆ ಒದಗಿಸಲಿವೆ.

372. **ಆಡಳಿತ ವ್ಯವಸ್ಥೆಯನ್ನು ಸುಧಾರಿಸಲು ಹಾಗೂ ಸರಳೀಕರಣ ತರಲು ನಮ್ಮ ಸರ್ಕಾರವು 2ನೇ ಕರ್ನಾಟಕ ಆಡಳಿತ ಸುಧಾರಣಾ ಆಯೋಗವನ್ನು ರಚಿಸಿದೆ. ಆಯೋಗವು ಇತ್ತೀಚೆಗೆ 2ನೇ ಮತ್ತು 3ನೇ ವರದಿಗಳನ್ನು ಸಲ್ಲಿಸಿದ್ದು, ಆಯೋಗದ ಶಿಫಾರಸ್ಸುಗಳನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು.**

373. ಪತ್ರಿಕೋದ್ಯಮವನ್ನು ಉತ್ತೇಜಿಸಲು ನಿಯಮಿತವಾಗಿ 8 ಪುಟಗಳಲ್ಲಿ ಪ್ರಕಟಗೊಳ್ಳುವ ಪ್ರಾದೇಶಿಕ ಪತ್ರಗಳಿಗೆ ಪ್ರೋತ್ಸಾಹ ನೀಡಲಾಗುವುದು. 20 ಸಾವಿರಕ್ಕೂ ಹೆಚ್ಚು ಪ್ರಸಾರ ಹೊಂದಿದ ವರ್ಣ ಪುಟಗಳಲ್ಲಿ ಪ್ರಕಟಗೊಳ್ಳುವ ಪ್ರಾದೇಶಿಕ ಪತ್ರಿಕೆಗಳನ್ನು ಸಧೃಡಗೊಳಿಸಲು ಹೊಸ ಯೋಜನೆಯನ್ನು ರೂಪಿಸಲಾಗುವುದು.

374. ಹಿಂದುಳಿದ ವರ್ಗಗಳ ಮಾನ್ಯತೆ ಪಡೆದ ಪತ್ರಕರ್ತರಿಗೆ ಮಾಧ್ಯಮ ಕಿಟ್ ಹಾಗೂ ಹಿಂದುಳಿದ ವರ್ಗಗಳ ಒಡೆತನದ ಪತ್ರಿಕೆಗಳಿಗೆ ಪ್ರತಿ ತಿಂಗಳು ಎರಡು ಪುಟ ಜಾಹೀರಾತು ನೀಡುವ ಕಾರ್ಯಕ್ರಮವನ್ನು ಜಾರಿಗೆ ತರಲಾಗುವುದು.

375. ಪ್ರಸ್ತುತ ವಾರ್ಷಿಕವಾಗಿ 125 ಕನ್ನಡ ಚಲನಚಿತ್ರಗಳಿಗೆ ನೀಡುತ್ತಿರುವ ಸಹಾಯಧನವನ್ನು 200 ಕನ್ನಡ ಚಲನಚಿತ್ರಗಳಿಗೆ ಹೆಚ್ಚಿಸಲಾಗುವುದು.

376. ಪೊಲೀಸ್ ಗೃಹ ಯೋಜನೆಯ 2ನೇ ಹಂತದಲ್ಲಿ ರಾಜ್ಯಾದ್ಯಂತ ಒಟ್ಟು 10,034 ವಸತಿಗೃಹಗಳನ್ನು 2,000 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನಲ್ಲಿ 250 ಕೋಟಿ ರೂ.ಗಳನ್ನು ಒದಗಿಸಲಾಗುವುದು.

377. ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿ ಹೊಸದಾಗಿ ಅತ್ಯಾಧುನಿಕ ಉಪಕರಣಗಳನ್ನು ಹೊಂದಿರುವ ಪ್ರಾದೇಶಿಕ ವಿಧಿ ವಿಜ್ಞಾನ ಪ್ರಯೋಗಾಲಯಗಳನ್ನು ಆರಂಭಿಸಲು ಈಗಾಗಲೇ ಕ್ರಮವಹಿಸಲಾಗಿದೆ. ಪ್ರಯೋಗಾಲಯದ ಪರೀಕ್ಷೆಗಳ ಸಮಯವನ್ನು ಕಡಿತಗೊಳಿಸಿ ವರದಿಗಳು ಶೀಘ್ರವಾಗಿ ತನಿಖಾಧಿಕಾರಿಗಳ ಕೈಸೇರುವಂತೆ ಮಾಡಲು ಅಗತ್ಯವಿರುವ ಮಾನವ ಸಂಪನ್ಮೂಲವನ್ನು ಒದಗಿಸಲಾಗುವುದು.

378. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಹಾಗೂ ತುರ್ತು ಸಂದರ್ಭದಲ್ಲಿ ತ್ವರಿತವಾಗಿ ಸ್ಪಂದಿಸಲು ಪೊಲೀಸ್ ಇಲಾಖೆಯಲ್ಲಿ ಹೊಸ ಮೊಬಿಲಿಟಿ ಯೋಜನೆಯನ್ನು 50 ಕೋಟಿ ರೂ.ಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

379. ಬಂದೋಬಸ್ತ್ ಕರ್ತವ್ಯಕ್ಕೆ ಬರುವ ಅಧಿಕಾರಿ/ ಸಿಬ್ಬಂದಿಗಳಿಗೆ ತಂಗಲು ಅನುಕೂಲವಾಗುವಂತೆ ಬೆಳಗಾವಿಯಲ್ಲಿ ಬ್ಯಾರಕ್ ನಿರ್ಮಾಣ ಮಾಡಲಾಗುವುದು.

380. ಐದು ಪೊಲೀಸ್ ಕಮೀಷನರೇಟ್‌ಗಳಲ್ಲಿ ತಲಾ 200 ಸರ್ವೇಲೆನ್ಸ್ ಕ್ಯಾಮರಾಗಳನ್ನು ಅಳವಡಿಸಲಾಗುವುದು.

381. **ರಾಜ್ಯದಲ್ಲಿ ಒಂದು ನೂತನ ಕೆ.ಎಸ್.ಆರ್.ಪಿ. ಮಹಿಳಾ ಕಂಪನಿಯನ್ನು ಪ್ರಾರಂಭಿಸಲಾಗುವುದು.**

382. ಅಗ್ನಿಶಾಮಕ ಸಿಬ್ಬಂದಿಗಳು ಅಪಾಯಕಾರಿ ಸನ್ನಿವೇಶಗಳಲ್ಲಿ ಕರ್ತವ್ಯ ನಿರ್ವಹಿಸುವುದನ್ನು ಮನಗಂಡು ನಮ್ಮ ಸರ್ಕಾರವು ಅಗ್ನಿಶಾಮಕ ಸಿಬ್ಬಂದಿಗೆ ವಿಮಾ ಮೊತ್ತವನ್ನು ಒಂದು ಲಕ್ಷ ರೂ.ಗಳಿಂದ 20 ಲಕ್ಷ ರೂ.ಗಳಿಗೆ ಹೆಚ್ಚಿಸಲು ಉದ್ದೇಶಿಸಿದೆ.

383. ಪ್ರಕೃತಿ ವಿಕೋಪದ ಸಂದರ್ಭದಲ್ಲಿ ತುರ್ತು ಸ್ಪಂದನೆಗಾಗಿ ಕೇಂದ್ರ ಸರ್ಕಾರದ ನೆರವಿನೊಂದಿಗೆ ದಾವಣಗೆರೆಯಲ್ಲಿ ಒಂದು ಎಸ್.ಡಿ.ಆರ್.ಎಫ್. ಕಂಪನಿಯನ್ನು ಸ್ಥಾಪಿಸಲಾಗುವುದು.

384. ಬಂದಿಗಳ ಅಭ್ಯುದಯಕ್ಕಾಗಿ ಯೋಜನೆಯನ್ನು ರೂಪಿಸಲು ಅನುಕೂಲವಾಗುವಂತೆ ಬಂದೀಖಾನೆ ಅಭಿವೃದ್ಧಿ ಮಂಡಳಿ ಅಧಿನಿಯಮವನ್ನು ಜಾರಿಗೊಳಿಸಿ ಬಂದೀಖಾನೆ ಅಭಿವೃದ್ಧಿ ಮಂಡಳಿಯನ್ನು ರಚಿಸಲಾಗಿದೆ. ಇದಲ್ಲದೆ ಖೈದಿಗಳಿಗೆ ವೃತ್ತಿ ತರಬೇತಿ ನೀಡಿ ಅವರು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ ಒದಗಿಸಲಾಗುವುದು.

385. ಕಾರಾಗೃಹಗಳಲ್ಲಿ ಮೊಬೈಲ್ ಬಳಕೆ ತಡೆಯಲು ಹಾಗೂ ಇನ್ನಿತರೆ ನಿಷೇಧಿತ ವಸ್ತುಗಳ ತಪಾಸಣೆ ಮಾಡಿ ಪತ್ತೆ ಹಚ್ಚಲು ಅತ್ಯಾಧುನಿಕ ಮಾದರಿಯ ಉಪಕರಣಗಳು ಮತ್ತು ಮೊಬೈಲ್ ಜಾಮರ್‌ಗಳನ್ನು ಅಳವಡಿಸಲಾಗುವುದು.

386. ಕಾರಾಗೃಹಗಳಲ್ಲಿ ಬಂದಿಗಳ ದಟ್ಟಣೆಯನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಹಾಗೂ ಸಾಮರ್ಥ್ಯವನ್ನು ಹೆಚ್ಚಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನೂತನ ಕಾರಾಗೃಹವನ್ನು ನಿರ್ಮಿಸಲಾಗುವುದು.

387. ರಾಜ್ಯದಲ್ಲಿ 3 ಲಕ್ಷ ಹೆಣ್ಣು ಮಕ್ಕಳಿಗೆ ಸ್ವಯಂರಕ್ಷಣೆ ತರಬೇತಿ ನೀಡಲು ಒಳಾಡಳಿತ ಇಲಾಖೆಯ ಮೂಲಕ ವಿನೂತನ ಕಾರ್ಯಕ್ರಮವನ್ನು ರೂಪಿಸಲಾಗುವುದು.

388. ರಾಜ್ಯದ ಎಲ್ಲಾ ಸಾರಿಗೆ ನಿಗಮಗಳನ್ನು ಪುನಶ್ಚೇತನಗೊಳಿಸಲು ತಜ್ಞ ಸಮಿತಿಯನ್ನು ರಚಿಸಲಾಗಿದೆ. ಆದಾಯ ಸೋರಿಕೆ ತಡೆಗಟ್ಟುವುದರೊಂದಿಗೆ ಸಂಪನ್ಮೂಲ ಸೃಷ್ಟಿಗೆ ಒತ್ತು ನೀಡಲು ಹಾಗೂ ಉತ್ತಮ ಸೇವೆಯ ಮೂಲಕ ಲಾಭದಾಯಕವಾಗಿ ಕಾರ್ಯನಿರ್ವಹಿಸುವ ಕುರಿತು ಸಮಿತಿ ನೀಡಲಿರುವ ಶಿಫಾರಸ್ಸುಗಳನ್ನು ರಾಜ್ಯ ಸರ್ಕಾರವು ತ್ವರಿತವಾಗಿ ಅನುಷ್ಠಾನಗೊಳಿಸಲಿದೆ.

389. ಕೋವಿಡ್-19 ಸೋಂಕಿನಿಂದಾಗಿ ಆರ್ಥಿಕ ನಷ್ಟ ಅನುಭವಿಸಿದ ರಾಜ್ಯದ ಸಾರಿಗೆ ಸಂಸ್ಥೆಗಳ ನೆರವಿಗೆ 2020-21ರಲ್ಲಿ 1,953 ಕೋಟಿ ರೂ. ಮತ್ತು 2021-22ರಲ್ಲಿ 1,208 ಕೋಟಿ ರೂ.ಗಳ ಸಹಾಯಧನ ಒದಗಿಸಿದೆ.

390. ದೇವನಹಳ್ಳಿ, ಕೋಲಾರ, ಹೊಸಪೇಟೆ, ಗದಗ, ಬಳ್ಳಾರಿ, ವಿಜಯಪುರ, ಬೀದರ್, ಯಾದಗಿರಿ ಮತ್ತು ದಾವಣಗೆರೆಗಳಲ್ಲಿ ಒಟ್ಟು 80 ಕೋಟಿ ರೂ.ಗಳ ವೆಚ್ಚದಲ್ಲಿ ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥಗಳನ್ನು ರಸ್ತೆ ಸುರಕ್ಷತಾ ನಿಧಿಯಡಿ ಸ್ಥಾಪಿಸಲಾಗುವುದು.

391. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕಟ್ಟಡ ಕಾರ್ಮಿಕರಿಗೆ ರಿಯಾಯಿತಿ ಬಸ್ ಪಾಸ್ ಯೋಜನೆಯನ್ನು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ

ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ರಾಜ್ಯಾದ್ಯಂತ ವಿಸ್ತರಿಸಲಾಗುವುದು.

392. ರಾಜ್ಯದಲ್ಲಿ 30,000 ರೂ.ಗಳಿಗಿಂತ ಹೆಚ್ಚು ತ್ರೈಮಾಸಿಕ ತೆರಿಗೆ ಪಾವತಿಸುವ ಸಾರಿಗೆ ವಾಹನಗಳಿಗೆ ಮಾಹೆಯಾನ ತೆರಿಗೆ ಪಾವತಿಸಲು ಅವಕಾಶ ಕಲ್ಪಿಸಲಾಗುವುದು.

393. ಮೋಟಾರು ವಾಹನ ತೆರಿಗೆ ಪಾವತಿಯನ್ನು ತೆರಿಗೆ ಅವಧಿ ಮುಕ್ತಾಯದ ದಿನಾಂಕದಿಂದ 15 ದಿನಗಳ ಕಾಲಾವಧಿಯನ್ನು ನೀಡಲಾಗಿದ್ದು, ಈ ಕಾಲಾವಧಿಯನ್ನು ಒಂದು ತಿಂಗಳಿಗೆ ವಿಸ್ತರಿಸಲಾಗುವುದು.

394. ಹಾವೇರಿ ಜಿಲ್ಲೆಯ ಶಿಗ್ಗಾಂವಿಯಲ್ಲಿ ಬಸ್ ಘಟಕ ಮತ್ತು ಚಾಲನಾ ತರಬೇತಿ ಕೇಂದ್ರವನ್ನು 28 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು.

395. ರಾಜ್ಯದಲ್ಲಿನ 'ಯೆಲ್ಲೊ ಬೋರ್ಡ್' (Yellow Board) ಚಾಲಕರ ಮಕ್ಕಳ ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು ವಿದ್ಯಾನಿಧಿ ಯೋಜನೆಯನ್ನು ವಿಸ್ತರಿಸಲಾಗುವುದು. ಇದಲ್ಲದೆ ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆ ರೂಪಿಸಲಾಗುವುದು.

396. ರಾಜ್ಯದಲ್ಲಿನ ಹೆದ್ದಾರಿಗಳ ಅಕ್ಕಪಕ್ಕ ಪ್ರಯಾಣಿಕರಿಗೆ ಮೂಲಸೌಕರ್ಯಗಳನ್ನು (Wayside amenities) ಖಾಸಗಿ ಸಾರ್ವಜನಿಕ ಸಹಭಾಗಿತ್ವದಲ್ಲಿ ನಿರ್ಮಿಸಲಾಗುವುದು.

397. ರಾಜ್ಯದ ವಕೀಲರಿಗೆ ಆರೋಗ್ಯ ಸೌಲಭ್ಯ ಕಾರ್ಯಕ್ರಮವನ್ನು ರೂಪಿಸಲು ಅನುವಾಗುವಂತೆ ಮೂಲನಿಧಿ (Corpus Fund)

ಸ್ಥಾಪಿಸಲು ರಾಜ್ಯ ಸರ್ಕಾರದ ವತಿಯಿಂದ ನೆರವು ನೀಡಲಾಗುವುದು.

398. ಸರ್ಕಾರದಿಂದ ಕರೆಯಲಾಗುವ ಟೆಂಡರ್‌ಗಳ ಆಹ್ವಾನ ಮತ್ತು ಅಂಗೀಕಾರ ಪ್ರಕ್ರಿಯೆಯಲ್ಲಿ ಹೆಚ್ಚಿನ ಪಾರದರ್ಶಕತೆಯನ್ನು ತರುವ ಉದ್ದೇಶದಿಂದ 50 ಕೋಟಿ ರೂ.ಗಳು ಮೀರಿದ ನಿರ್ಮಾಣ ಕಾಮಗಾರಿಗಳೂ ಸೇರಿದಂತೆ ಎಲ್ಲಾ ಸರಕು ಮತ್ತು ಸೇವೆಗಳ ಟೆಂಡರ್ ಮತ್ತು ಅಂದಾಜುಗಳನ್ನು ಟೆಂಡರ್ ಪೂರ್ವ ಪರಿಶೀಲನೆ ಮಾಡಲು ನಿವೃತ್ತ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ಟೆಂಡರ್ ಪೂರ್ವ ಪರಿಶೀಲನಾ ಸಮಿತಿಯನ್ನು ರಚಿಸಲು ಆದೇಶ ಹೊರಡಿಸಲಾಗಿದೆ.

399. ಸಾರ್ವಜನಿಕ ಉದ್ದಿಮೆಗಳಲ್ಲಿ ಖಾಸಗಿ ಬಂಡವಾಳ ಹೂಡಿಕೆಯನ್ನು ಉತ್ತೇಜಿಸಿ, ಲಾಭದಾಯಕತೆ ಮತ್ತು ಕಾರ್ಯದಕ್ಷತೆ ಹೆಚ್ಚಿಸಲು ಆಯ್ದ ಎರಡು ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ಬಂಡವಾಳ ಹಿಂತೆಗೆಯುವಿಕೆ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು.

400. **ಆಡಳಿತ ಸುಧಾರಣೆ ಮತ್ತು ಸಾರ್ವಜನಿಕ ಸೇವಾ ವಲಯಕ್ಕೆ 2022-23ನೇ ಸಾಲಿನಲ್ಲಿ ಒಟ್ಟಾರೆಯಾಗಿ 56,710 ಕೋಟಿ ರೂ. ಅನುದಾನ ಒದಗಿಸಲಾಗಿದೆ.**

**ಸನ್ಮಾನ್ಯ ಸಭಾಧ್ಯಕ್ಷರೇ,**

401. **ಸನ್ಮಾನ್ಯ ಪ್ರಧಾನಮಂತ್ರಿಯವರ 'ಸಬ್ ಕಾ ಸಾಥ್-ಸಬ್ ಕಾ ವಿಕಾಸ್ ಹಾಗೂ ಸಬ್ ಕಾ ವಿಶ್ವಾಸ್-ಸಬ್ ಕಾ ಪ್ರಯಾಸ್'ನ ದೃಷ್ಟಿಕೋನಕ್ಕೆ ಅನುಗುಣವಾಗಿ ರಾಜ್ಯದ ವಿತ್ತೀಯ ಶಿಸ್ತನ್ನು**

ಕಾಪಾಡುವುದರೊಂದಿಗೆ ಆರ್ಥಿಕ ಬೆಳವಣಿಗೆ ಮತ್ತು ರಾಜ್ಯದ ಎಲ್ಲಾ ವರ್ಗಗಳ ಮತ್ತು ಪ್ರದೇಶಗಳ ಸಮತೋಲಿತ ಅಭಿವೃದ್ಧಿಗೆ ನನ್ನ ಮೊದಲ ಆಯವ್ಯಯದಲ್ಲಿ ಪ್ರಯತ್ನಿಸಿದ್ದೇನೆ.

402. ರಾಜ್ಯದ ರೈತರು, ಬೆಳೆಗಾರರು ಮತ್ತು ಹಾಲು ಉತ್ಪಾದಕರ ಆದಾಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮೊಟ್ಟ ಮೊದಲ ಬಾರಿಗೆ ಹೊಸ ಯೋಜನೆಗಳಾದ ಡೀಸಲ್ ಸಹಾಯಧನ, ಹಾಲು ಉತ್ಪಾದಕರ ಸಹಕಾರಿ ಬ್ಯಾಂಕ್, Deep Sea Fishing Boats, ಕೆಪೆಕ್ ಮುಖಾಂತರ 50 ಕೋಟಿ ರೂ. ವೆಚ್ಚದ ರಫ್ತು ಉತ್ತೇಜನೆ ಮುಂತಾದ ಯೋಜನೆಗಳನ್ನು ಘೋಷಿಸಲಾಗಿದೆ. ಅಲ್ಲದೆ, ಯಶಸ್ವಿನಿ ಯೋಜನೆಯ ಮರುಜಾರಿ, ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಮತ್ತು ಮಾರುಕಟ್ಟೆ ಬೆಂಬಲ, ರೇಷ್ಮೆ ಬೆಳೆಗಾರರಿಗೆ ಹೆಚ್ಚಿನ ಪ್ರೋತ್ಸಾಹ ಧನ ಹಾಗೂ ಹಲವು ನೀರಾವರಿ ಯೋಜನೆಗಳ ಅನುಷ್ಠಾನದಿಂದ ರೈತರಿಗೆ ಅನುಕೂಲವಾಗಲಿದೆ.

403. ರಾಜ್ಯದ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗಾಗಿ ಮಾನವ ಸಂಪನ್ಮೂಲದ ಮೇಲೆ ಹೂಡಿಕೆ ಮಾಡುವುದು ಅತ್ಯಾವಶ್ಯಕವಾಗಿದೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರವು ಪ್ರಪ್ರಥಮವಾಗಿ ಶಿಕ್ಷಣ, ಆರೋಗ್ಯ, ಪೌಷ್ಟಿಕತೆ ಮತ್ತು ಬಡತನ ನಿವಾರಣೆಯಂತಹ ವಲಯಗಳಲ್ಲಿನ ಅಭಿವೃದ್ಧಿ ಸೂಚಕಗಳ ಆಧಾರದ ಮೇಲೆ 'ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕು'ಗಳನ್ನು ಗುರುತಿಸಿ, ಈ ತಾಲ್ಲೂಕುಗಳ ಸರ್ವಾಂಗೀಣ ಅಭಿವೃದ್ಧಿಗೆ ಕೇಂದ್ರೀಕೃತ ಪ್ರಯತ್ನಗಳನ್ನು ಮಾಡಲಾಗುವುದು. ಈ ಉದ್ದೇಶಕ್ಕಾಗಿ 3,000 ಕೋಟಿ ರೂ.ಗಳನ್ನು ಮೀಸಲಿರಿಸಲಾಗುವುದು.

404. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಹಾಗೂ ಮಹಿಳೆಯರ ಅಭ್ಯುದಯಕ್ಕಾಗಿ ಈ ಆಯವ್ಯಯದಲ್ಲಿ ವಿಶೇಷ ಗಮನ ನೀಡಲಾಗಿದೆ. ಈ ವರ್ಗಗಳ ಶಿಕ್ಷಣ, ಆರೋಗ್ಯ ಮತ್ತು ಜೀವನೋಪಾಯಕ್ಕೆ ಹೊಸ ಚಿಂತನೆಗಳೊಂದಿಗೆ ವಿನೂತನ ಕಾರ್ಯಕ್ರಮಗಳಾದ ಸೌಹಾರ್ದ ವಿದ್ಯಾರ್ಥಿನಿಲಯಗಳು, ವಸತಿ ಶಾಲೆಗಳು, ಉದ್ಯಮಶೀಲತೆಗೆ ಪೂರಕವಾದ ಕ್ಲಸ್ಟರ್ ಅಭಿವೃದ್ಧಿ, ಮಾರುಕಟ್ಟೆ ಸೌಲಭ್ಯಗಳನ್ನು ನೀಡಲು ಪ್ರಸ್ತಾಪಿಸಲಾಗಿದೆ.

405. ಪ್ರಸಕ್ತ ಆಯವ್ಯಯದಲ್ಲಿ ಭವಿಷ್ಯಾವರ್ತಿಯಾಗಿ ಮಾನವ ಸಂಪನ್ಮೂಲ ಅಭಿವೃದ್ಧಿಗೆ ಒತ್ತು ನೀಡಿ, ಶಿಕ್ಷಣ, ಆರೋಗ್ಯ, ಪೌಷ್ಟಿಕತೆ ವಲಯಗಳ ಹಂಚಿಕೆಯನ್ನು ಗಣನೀಯವಾಗಿ ಹೆಚ್ಚಿಸಲಾಗಿದೆ. ಈ ದಿಸೆಯಲ್ಲಿ ಹೊಸ ವಿಶ್ವವಿದ್ಯಾಲಯಗಳು, ಮಾದರಿ ಶಾಲೆಗಳು, ಬೆಂಗಳೂರು ಪಬ್ಲಿಕ್ ಶಾಲೆಗಳು, Karnataka Institute of Technology ಹಾಗೂ ಹೊಸ ಸಮುದಾಯ ಆರೋಗ್ಯ ಕೇಂದ್ರಗಳನ್ನು ಪ್ರಸ್ತಾಪಿಸಲಾಗಿದೆ. ಸ್ಥಳೀಯವಾಗಿ ತಜ್ಞ ಹಾಗೂ ನುರಿತ ವೈದ್ಯಕೀಯ ಸೇವೆಗಳನ್ನು ಲಭ್ಯಪಡಿಸಲು ಕ್ರಮ ಕೈಗೊಂಡಿದೆ. ಅಪೌಷ್ಟಿಕತೆ ನಿವಾರಣೆಗೆ ಸಾಕಷ್ಟು ಯೋಜನೆಗಳನ್ನು ರೂಪಿಸಲಾಗಿದೆ.

406. ನಮ್ಮ ಸರ್ಕಾರವು ರಾಜ್ಯದಲ್ಲಿ ಬೃಹತ್ ಪ್ರಮಾಣದಲ್ಲಿ ವಿಶೇಷವಾಗಿ ಮಹಿಳೆಯರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಒತ್ತು ನೀಡಿದೆ. ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ದುಡಿಯುವ ಬಂಡವಾಳ, ಮೌಲ್ಯವರ್ಧನೆ, ಬ್ಯಾಂಕಿಂಗ್, ಗುಣಮಟ್ಟದ ಭರವಸೆ

ಮತ್ತು ಮಾರುಕಟ್ಟೆಗಾಗಿ ನೆರವನ್ನು ಸ್ವ-ಉದ್ಯೋಗವನ್ನು ಉತ್ತೇಜಿಸುವುದು ಈ ಆಯವ್ಯಯದ ಪ್ರಮುಖ ಆದ್ಯತೆಯಾಗಿದೆ.

407. ನವ ಭಾರತಕ್ಕಾಗಿ ನವ ಕರ್ನಾಟಕ ನಿರ್ಮಾಣದ ಗುರಿಯೊಂದಿಗೆ ರಸ್ತೆ, ರೈಲು ಮತ್ತು ಅವಶ್ಯಕ ಮೂಲಸೌಕರ್ಯದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿ ರಾಜ್ಯದಲ್ಲಿ ಬಂಡವಾಳ ಹೂಡಿಕೆ, ಉದ್ಯೋಗ ಸೃಷ್ಟಿ ಮತ್ತು ಆರ್ಥಿಕ ಬೆಳವಣಿಗೆಗಾಗಿ ಈ ಬಾರಿಯ ಬಜೆಟನ್ನು ರೂಪಿಸಲಾಗಿದೆ. ವೇಗವಾಗಿ ಹೆಚ್ಚುತ್ತಿರುವ ನಗರೀಕರಣದ ದೃಷ್ಟಿಯಿಂದ ನಮ್ಮ ಸರ್ಕಾರವು ನಗರಗಳ ಮೂಲಸೌಕರ್ಯ ಅಭಿವೃದ್ಧಿಗೆ ಪ್ರಾಮುಖ್ಯತೆ ನೀಡಿ, ಸುಮಾರು 10,000 ಕೋಟಿ ರೂ.ಗಳ ವೆಚ್ಚದಲ್ಲಿ ಹೊಸ ನಗರೋತ್ಥಾನ ಯೋಜನೆಗಳನ್ನು ಘೋಷಿಸಿದೆ. ನೂತನವಾಗಿ Integrated Townships, ಮೆಗಾ ಜವಳಿ ಮತ್ತು ಆಹಾರ ಪಾರ್ಕ್‌ಗಳನ್ನು ಸ್ಥಾಪಿಸಲಾಗುವುದು.

408. ಈ ಆಯವ್ಯಯವು ನಮ್ಮ ಸರ್ಕಾರದ ಜನಕೇಂದ್ರಿತ ಅಭಿವೃದ್ಧಿಯ ಆಶಯದ ಪ್ರತಿಬಿಂಬವಾಗಿದೆ. ಇದಕ್ಕಾಗಿ ವಿವಿಧ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವ ಮೂಲಕ ಜನಜೀವನದಲ್ಲಿ ಸಕಾರಾತ್ಮಕ ಪರಿಣಾಮಕಾರಿ ಬದಲಾವಣೆ ತರುವ ಸಂಕಲ್ಪ ನಮ್ಮದು. ಆಧುನಿಕ ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ಅತ್ಯುನ್ನತ ಮಟ್ಟದ ಸೇವೆಗಳನ್ನು ಒದಗಿಸಲು ಈ ಆಯವ್ಯಯವು ಪ್ರೇರಕವಾಗಲಿದೆ. ಇದೊಂದು ಶ್ರೀಸಾಮಾನ್ಯನಿಂದ ಶ್ರೀಸಾಮಾನ್ಯರಿಗೆ ರೂಪಿಸಲಾಗಿರುವ ಆಯವ್ಯಯವಾಗಿದೆ.

**ತೆರಿಗೆ ಪ್ರಸ್ತಾವನೆಗಳು**

409. 2021–22ನೇ ಸಾಲಿನಲ್ಲಿ ರಾಜ್ಯದ ಅರ್ಥ ವ್ಯವಸ್ಥೆಯು ಚೇತರಿಕೆಯತ್ತ ಸಾಗಿದೆ. ಈ ಸನ್ನಿವೇಶದಲ್ಲಿ ರಾಜ್ಯದ ಜನಸಾಮಾನ್ಯರ ಮೇಲೆ ಇನ್ನಷ್ಟು ತೆರಿಗೆ ವಿಧಿಸಲು ಇಚ್ಛಿಸುವುದಿಲ್ಲ. ಆದ್ದರಿಂದ, ಎಲ್ಲಾ ತೆರಿಗೆ ಸಂಗ್ರಹ ಇಲಾಖೆಗಳಲ್ಲಿ ಹೆಚ್ಚಿನ ದಕ್ಷತೆಯನ್ನು ತರುವ ಮೂಲಕ ಸಂಪನ್ಮೂಲಗಳ ಸಂಗ್ರಹಣಾ ಗುರಿಗಳನ್ನು ಸಾಧಿಸಲು ಕ್ರಮಕೈಗೊಳ್ಳಲಾಗುವುದು.

**ವಾಣಿಜ್ಯ ತೆರಿಗೆಗಳು**

410. 2021–22ನೇ ಸಾಲಿನ ಕೋವಿಡ್–19ರ ಎರಡನೇ ಮತ್ತು ಮೂರನೇ ಅಲೆಗಳ ಸಂಕಷ್ಟವನ್ನು ಮನಗಂಡು ನವೆಂಬರ್ 2021ರಲ್ಲಿ, ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ಕಡಿತಗೊಳಿಸಲಾಯಿತು. ಇದರಿಂದಾಗಿ ಪೆಟ್ರೋಲ್ ಮತ್ತು ಡೀಸೆಲ್‌ಗಳ ಮಾರಾಟ ದರಗಳು 7 ರೂ.ನಷ್ಟು ಕಡಿಮೆ ಆಗಿರುತ್ತದೆ. ಪ್ರಸ್ತುತ ದಕ್ಷಿಣ ಭಾರತದ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಈ ಎರಡು ಸರಕುಗಳ ಬೆಲೆಯು ಕಡಿಮೆ ಇರುತ್ತದೆ. ಈ ದರಗಳನ್ನು ಪ್ರಸಕ್ತ ಸಾಲಿನಲ್ಲಿ ಹೆಚ್ಚಿಸಲು ನಾನು ಪ್ರಸ್ತಾಪಿಸುವುದಿಲ್ಲ.

**ಸರಕು ಮತ್ತು ಸೇವಾ ತೆರಿಗೆ**

411. ಕೋವಿಡ್–19 ಸಾಂಕ್ರಮಿಕದ ಎರಡು ಅಲೆಗಳ ನಡುವೆಯೂ ಕರ್ನಾಟಕವು 2021–22ರಲ್ಲಿ ಅತಿ ಹೆಚ್ಚಿನ ರಾಜಸ್ವ ಸಂಗ್ರಹಣೆಗಾಗಿ ಶ್ರಮಿಸಿರುತ್ತದೆ. 2021–22ನೇ ಸಾಲಿಗೆ ವಾಣಿಜ್ಯ

ತೆರಿಗೆ ಇಲಾಖೆಗೆ 76,473 ಕೋಟಿ ರೂ.ಗಳ (ಜಿ.ಎಸ್.ಟಿ. ಪರಿಹಾರ ಒಳಗೊಂಡಂತೆ) ರಾಜಸ್ವ ಸಂಗ್ರಹಣೆಯ ಗುರಿ ನಿಗದಿಪಡಿಸಲಾಗಿದ್ದು, ಫೆಬ್ರವರಿ ಅಂತ್ಯಕ್ಕೆ 70,757 ಕೋಟಿ ರೂ.ಗಳ ರಾಜಸ್ವವನ್ನು ಕ್ರೋಢೀಕರಿಸಲಾಗಿರುತ್ತದೆ. ಪ್ರಸಕ್ತ ಸಾಲಿನ ತೆರಿಗೆ ಸಂಗ್ರಹಣೆ ಗುರಿಯನ್ನು ಸಾಧಿಸಲಾಗುವುದು.

412. ಸರಕು ಮತ್ತು ಸೇವಾ ತೆರಿಗೆ ಕಾಯ್ದೆಯನ್ನು ಜಾರಿಗೆ ತಂದುದರಿಂದ ರಾಜ್ಯಗಳಿಗೆ ಆಗಿರುವ ನಷ್ಟವನ್ನು ತುಂಬಿಕೊಡಲು, ಕೇಂದ್ರ ಸರ್ಕಾರವು ನೀಡುತ್ತಿದ್ದ ನಷ್ಟ ಪರಿಹಾರವು 30.06.2022ಕ್ಕೆ ಅಂತ್ಯಗೊಳ್ಳುತ್ತದೆ. ಇದನ್ನು ಸರಿದೂಗಿಸಲು ತೆರಿಗೆ ಸಂಗ್ರಹಣೆಯನ್ನು ಉತ್ತಮಪಡಿಸಲು ಹೆಚ್ಚಿನ ಪ್ರಯತ್ನ ಮಾಡಲಾಗುವುದು.

413. 2022-23ನೇ ಸಾಲಿಗೆ ವಾಣಿಜ್ಯ ತೆರಿಗೆಗಳ ಇಲಾಖೆಗೆ 77,010 ಕೋಟಿ ರೂ.ಗಳ ತೆರಿಗೆ ಸಂಗ್ರಹಣೆಯ ಗುರಿಯನ್ನು ನಿಗದಿಪಡಿಸಲಾಗಿದೆ.

**ನೋಂದಣಿ ಮತ್ತು ಮುದ್ರಾಂಕ**

414. 2021-22ನೇ ಸಾಲಿಗೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 12,655 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿ ನಿಗದಿಪಡಿಸಲಾಗಿದ್ದು, ಫೆಬ್ರವರಿ ಅಂತ್ಯಕ್ಕೆ 12,105 ಕೋಟಿ ರೂ.ಗಳ ರಾಜಸ್ವವನ್ನು ಕ್ರೋಢೀಕರಿಸಲಾಗಿರುತ್ತದೆ. ಪ್ರಸಕ್ತ ಸಾಲಿನ ತೆರಿಗೆ ಸಂಗ್ರಹಣೆ ಗುರಿಯನ್ನು ಸಾಧಿಸಲಾಗುವುದು.

415. ಪ್ರಧಾನಮಂತ್ರಿ ಸ್ವನಿಧಿ ಯೋಜನೆಯಡಿ ಬೀದಿಬದಿ ವ್ಯಾಪಾರಿಗಳಿಗೆ ವಿತರಿಸಲಾದ ಎಲ್ಲಾ ಸಾಲಗಳಿಗೆ ಸಂಬಂಧಿಸಿದ

ಸಾಲ ಒಪ್ಪಂದಗಳ ಮೇಲಿನ ಮುದ್ರಾಂಕ ಶುಲ್ಕಗಳಿಗೆ ವಿನಾಯಿತಿ ನೀಡಲಾಗುವುದು. ಇದರಿಂದ ಸುಮಾರು ಎರಡು ಲಕ್ಷ ಬೀದಿಬದಿ ವ್ಯಾಪಾರಿಗಳಿಗೆ ಪ್ರಯೋಜನವಾಗಲಿದೆ.

416. 2022-23ನೇ ಆರ್ಥಿಕ ವರ್ಷಕ್ಕೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 15,000 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

**ಅಬಕಾರಿ**

417. 2021-22ನೇ ಸಾಲಿಗೆ ಅಬಕಾರಿ ಇಲಾಖೆಗೆ 24,580 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿ ನಿಗದಿಪಡಿಸಿದೆ. ಫೆಬ್ರವರಿ ಅಂತ್ಯಕ್ಕೆ 23,726 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆಯಾಗಿರುತ್ತದೆ. ಪ್ರಸಕ್ತ ಆರ್ಥಿಕ ಸಾಲಿನಲ್ಲಿ ತೆರಿಗೆ ಸಂಗ್ರಹಣೆಯ ಗುರಿಯನ್ನು ತಲುಪುವ ನಿರೀಕ್ಷೆಯಿದೆ.

418. 2022-23ನೇ ಆರ್ಥಿಕ ವರ್ಷಕ್ಕೆ ಅಬಕಾರಿ ಇಲಾಖೆಗೆ 29,000 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

**ಸಾರಿಗೆ**

419. 2021-22ನೇ ಸಾಲಿಗೆ ಸಾರಿಗೆ ಇಲಾಖೆಗೆ 7,515 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿ ನಿಗದಿಪಡಿಸಲಾಗಿದ್ದು, ಫೆಬ್ರುವರಿ ಅಂತ್ಯಕ್ಕೆ 5,960 ಕೋಟಿ ರೂ.ಗಳ ರಾಜಸ್ವವನ್ನು ಕ್ರೋಡೀಕರಿಸಲಾಗಿರುತ್ತದೆ.

420. ಕೋವಿಡ್-19 ಸಾಂಕ್ರಾಮಿಕದ ಕಾರಣದಿಂದಾಗಿ ಎಲೆಕ್ಟ್ರಾನಿಕ್ ಉಪಕರಣಗಳಾದ ಲ್ಯಾಪ್‌ಟಾಪ್, ಮೊಬೈಲ್ ಮುಂತಾದವುಗಳಿಗೆ

ಬೇಡಿಕೆ ಹೆಚ್ಚಿರುವುದರಿಂದ ವಾಹನ ತಯಾರಿಕೆಗೆ ಬೇಕಾದ ಸೆಮಿಕಂಡಕ್ಟರ್ ಚಿಪ್‌ನ ಕೊರತೆ ಉಂಟಾಗಿರುತ್ತದೆ. ಇದರಿಂದಾಗಿ ವಾಹನಗಳ ಬೇಡಿಕೆಗೆ ಅನುಗುಣವಾಗಿ ಸರಬರಾಜು ಆಗದೇ ಕೆಲವು ವಾಹನಗಳ ಸರಬರಾಜಿನಲ್ಲಿ ಒಂದೂವರೆ ವರ್ಷಗಳಷ್ಟು ಭಾರೀ ವಿಳಂಬವಾಗಿರುತ್ತದೆ. ಇದರಿಂದಾಗಿ ಲಘು ಮೋಟಾರು ವಾಹನಗಳು ಹಾಗೂ ದ್ವಿಚಕ್ರ ವಾಹನಗಳ ಹೊಸ ನೋಂದಣಿ ಕಡಿಮೆಯಾಗಿರುತ್ತದೆ.

421. ಪ್ರಯಾಣಿಕರ ಸಾರಿಗೆ ವಾಹನಗಳಿಗೆ 2021ರ ಮೇ ಮಾಹೆಯಲ್ಲಿ ಶೇ. 100ರಷ್ಟು ತೆರಿಗೆ ವಿನಾಯಿತಿ ನೀಡಲಾಗಿತ್ತು ಹಾಗೂ 2021ರ ಜೂನ್ ಮಾಹೆಯಲ್ಲಿ ಪ್ರಯಾಣಿಕರ ಸಾರಿಗೆ ವಾಹನಗಳಿಗೆ ಶೇ. 50ರಷ್ಟು ತೆರಿಗೆ ವಿನಾಯಿತಿ ನೀಡಲಾಗಿತ್ತು. 2021-22ನೇ ಸಾಲಿನಲ್ಲಿ ಕೋವಿಡ್-19ನಿಂದಾಗಿ ಸಂಕಷ್ಟಕ್ಕೀಡಾದ ರಾಜ್ಯ ಸಾರಿಗೆ ಸಂಸ್ಥೆಗಳು ಆರ್ಥಿಕವಾಗಿ ಚೇತರಿಸಿಕೊಳ್ಳುವ ನಿಟ್ಟಿನಲ್ಲಿ ಮೋಟಾರು ವಾಹನ ತೆರಿಗೆಯಿಂದ ವಿನಾಯಿತಿಯನ್ನು ನೀಡಲಾಗಿತ್ತು.

422. ಈ ಕಾರಣಗಳಿಂದ 2021-22ನೇ ಸಾಲಿನ ತೆರಿಗೆ ಸಂಗ್ರಹಣೆ ಗುರಿಯನ್ನು ಮುಟ್ಟಲು ಕಷ್ಟವಾಗುವುದು.

423. 2022-23ನೇ ಆರ್ಥಿಕ ವರ್ಷಕ್ಕೆ ಸಾರಿಗೆ ಇಲಾಖೆಗೆ 8,007 ಕೋಟಿ ರೂ.ಗಳ ರಾಜಸ್ವ ಸಂಗ್ರಹಣೆ ಗುರಿಯನ್ನು ನಿಗದಿಪಡಿಸಲಾಗಿದೆ.

## ಪರಿಷ್ಕೃತ ಅಂದಾಜು 2021-22

424. 2021-22ರ ಪರಿಷ್ಕೃತ ಅಂದಾಜುಗಳ ಅನ್ವಯ ಆಯವ್ಯಯದಲ್ಲಿ ಅಂದಾಜಿಸಲಾದ 2,43,734 ಕೋಟಿ ರೂ.ಗಳಿಗೆ ಹೋಲಿಸಿದಲ್ಲಿ ಒಟ್ಟಾರೆ ಜಮೆ 2,57,042 ಕೋಟಿ ರೂ.ಗಳಾಗಿದೆ. ರಾಜ್ಯದ ರಾಜಸ್ವ ಕ್ರೋಡೀಕರಣದ ಪ್ರಯತ್ನಗಳು 1,89,579 ಕೋಟಿ ರೂ.ಗಳಾಗಿದ್ದು, ಇದರಲ್ಲಿ ಸ್ವಂತ ತೆರಿಗೆ ರಾಜಸ್ವ ಸಂಗ್ರಹಣೆಯು ಜಿ.ಎಸ್.ಟಿ ಪರಿಹಾರ ಒಳಗೊಂಡಂತೆ 1,18,657 ಕೋಟಿ ರೂ.ಗಳಾಗಿರುತ್ತದೆ.

425. ಪರಿಷ್ಕೃತ ಅಂದಾಜಿನ ಪ್ರಕಾರ ಒಟ್ಟು ವೆಚ್ಚವು 2,53,165 ಕೋಟಿ ರೂ.ಗಳಾಗಿದೆ. ಇದು 2020-21ಕ್ಕೆ ಹೋಲಿಸಿದಲ್ಲಿ ಶೇ. 7.7 ರಷ್ಟು ಹೆಚ್ಚಳ ಕಂಡಿದೆ.

## ಆಯವ್ಯಯ ಅಂದಾಜು 2022-23

**ಸನ್ಮಾನ್ಯ ಸಭಾಧ್ಯಕ್ಷರೇ,**

426. 2022-23ನೇ ಸಾಲಿನಲ್ಲಿ ಒಟ್ಟು ಜಮೆಗಳು 2,61,977 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ. ಇದರಲ್ಲಿ 1,89,888 ಕೋಟಿ ರೂ. ರಾಜಸ್ವ ಜಮೆಗಳು ಹಾಗೂ 72,000 ಕೋಟಿ ರೂ.ಗಳ ಸಾಲ ಸೇರಿದಂತೆ 72,089 ಕೋಟಿ ರೂ.ಗಳ ಬಂಡವಾಳ ಜಮೆಗಳು ಒಳಗೊಂಡಿರುತ್ತದೆ. 2,04,587 ಕೋಟಿ ರೂ.ಗಳ ರಾಜಸ್ವ ವೆಚ್ಚ, 46,955 ಕೋಟಿ ರೂ.ಗಳ ಬಂಡವಾಳ ವೆಚ್ಚ ಹಾಗೂ ಸಾಲದ ಮರುಪಾವತಿ 14,179 ಕೋಟಿ ರೂ.ಗಳ ವೆಚ್ಚವನ್ನು ಒಳಗೊಂಡು, ಒಟ್ಟು

ವೆಚ್ಚವು 2,65,720 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ.

427. ರಾಜಸ್ವ ಕೊರತೆಯು 14,699 ಕೋಟಿ ರೂ.ಗಳೆಂದು ಅಂದಾಜು ಮಾಡಲಾಗಿದೆ. ವಿತ್ತೀಯ ಕೊರತೆ 61,564 ಕೋಟಿ ರೂ.ಗಳಾಗುತ್ತದೆಂದು ನಿರೀಕ್ಷಿಸಲಾಗಿದ್ದು, ಅದು ರಾಜ್ಯದ ಆಂತರಿಕ ಉತ್ಪನ್ನದ ಶೇ.3.26 ರಷ್ಟಾಗಿರುತ್ತದೆ. 2022-23ರ ಕೊನೆಯಲ್ಲಿ 5,18,366 ಕೋಟಿ ರೂ.ಗಳ ಒಟ್ಟು ಹೊಣೆಗಾರಿಕೆಗಳು ರಾಜ್ಯದ ಆಂತರಿಕ ಉತ್ಪನ್ನದ ಶೇ.27.49 ರಷ್ಟಾಗುತ್ತದೆಂದು ಅಂದಾಜು ಮಾಡಲಾಗಿದೆ. ಇದಕ್ಕಾಗಿ ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮ, 2002ಕ್ಕೆ ಸೂಕ್ತ ತಿದ್ದುಪಡಿ ತರಲಾಗುವುದು.

## ಸಂಪನ್ಮೂಲಗಳ ಕ್ರೋಡೀಕರಣ

428. 2022-23ನೇ ಸಾಲಿನಲ್ಲಿ ಜಿ.ಎಸ್.ಟಿ ನಷ್ಟ ಪರಿಹಾರವನ್ನು ಒಳಗೊಂಡಂತೆ ರಾಜ್ಯದ ಒಟ್ಟು ಸ್ವಂತ ತೆರಿಗೆ ರಾಜಸ್ವವು 1,31,883 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ.

429. ತೆರಿಗೆಯೇತರ ರಾಜಸ್ವಗಳಿಂದ 10,941 ಕೋಟಿ ರೂ.ಗಳನ್ನು ಸಂಗ್ರಹಿಸಬಹುದೆಂದು ನಿರೀಕ್ಷಿಸಲಾಗಿದೆ. ಕೇಂದ್ರ ತೆರಿಗೆಯ ಪಾಲಿನ ರೂಪದಲ್ಲಿ 29,783 ಕೋಟಿ ರೂ.ಗಳನ್ನು ಹಾಗೂ 17,281 ಕೋಟಿ ರೂ.ಗಳನ್ನು ಕೇಂದ್ರ ಸರ್ಕಾರದಿಂದ ಸಹಾಯಾನುದಾನ ರೂಪದಲ್ಲಿ ರಾಜ್ಯ ಸರ್ಕಾರವು ನಿರೀಕ್ಷಿಸಿದೆ. ಈ ರಾಜಸ್ವ ಜಮೆಗಳಿಗೆ ಪೂರಕವಾಗಿ 72,000 ಕೋಟಿ ರೂ.ಗಳ ಒಟ್ಟು ಸಾಲಗಳು, 18 ಕೋಟಿ

ರೂ.ಗಳ ಋಣೇತರ ಸ್ವೀಕೃತಿಗಳು ಮತ್ತು 71 ಕೋಟಿ ರೂ.ಗಳ ಸಾಲಗಳ ವಸೂಲು ಮೊತ್ತವನ್ನು ಅಂದಾಜಿಸಲಾಗಿದೆ.

**ಸನ್ಮಾನ್ಯ ಸಭಾಧ್ಯಕ್ಷರೇ,**

430. ನಾನು ಈಗ ಆಯವ್ಯಯವನ್ನು ಗೌರವಾನ್ವಿತ ಸದನದ ಪರಿಗಣನೆಗಾಗಿ ಮಂಡಿಸುತ್ತಿದ್ದೇನೆ ಹಾಗೂ ಆಯವ್ಯಯ ಅಂದಾಜಿನನ್ವಯ 31ನೇ ಮಾರ್ಚ್ 2023ರವರೆಗಿನ ವೆಚ್ಚವನ್ನು ನಿರ್ವಹಿಸಲು ಪೂರ್ಣ ಆಯವ್ಯಯವನ್ನು ಅಂಗೀಕರಿಸಲು ಕೋರುತ್ತೇನೆ.

**ಜೈ ಹಿಂದ್**

**ಜೈ ಕರ್ನಾಟಕ**

## ಆಯವ್ಯಯ ವಿಹಂಗಮ ನೋಟ


₹ ಕೋಟಿಗಳಲ್ಲಿ


| | ಆಯವ್ಯಯ ಅಂದಾಜು 2021-22 | ಪರಿಷ್ಕೃತ ಅಂದಾಜು 2021-22 | ಆಯವ್ಯಯ ಅಂದಾಜು 2022-23 |
|---|---|---|---|
| **ಪ್ರಾರಂಭ ಶಿಲ್ಕು** | **6649.68** | **1583.34** | **9227.38** |
| **ಎ. ರಾಜಸ್ವ ಲೆಕ್ಕ** | | | |
| **1. ಜಮೆ** | | | |
| ರಾಜ್ಯ ತೆರಿಗೆ | 124201.98 | 136765.59 | 131882.76 |
| ಕೇಂದ್ರ ತೆರಿಗೆಯಲ್ಲಿ ಪಾಲು | 24273.06 | 27145.06 | 29783.21 |
| ಕೇಂದ್ರ ಸರ್ಕಾರದ ಅನುದಾನಗಳು | 15537.76 | 16668.61 | 17281.01 |
| ತೆರಿಗೆಯೇತರ ರಾಜಸ್ವ | 8258.37 | 9000.01 | 10940.57 |
| **ಒಟ್ಟು–ಎ (1)** | **172271.17** | **189579.27** | **189887.54** |
| **11. ವೆಚ್ಚ** | | | |
| ಸಾಮಾಜಿಕ ಸೇವೆ | 67730.84 | 74676.71 | 79124.14 |
| ಆರ್ಥಿಕ ಸೇವೆ | 46905.15 | 47722.10 | 48653.12 |
| ಸಾಮಾನ್ಯ ಸೇವೆ | 66802.33 | 67011.40 | 70758.88 |
| ಸಹಾಯಾನುದಾನ ಮತ್ತು ಅಂಶದಾನ | 5966.46 | 6404.27 | 6050.54 |
| **ಒಟ್ಟು–ಎ (11)** | **187404.77** | **195814.47** | **204586.68** |
| **ಎ. ರಾಜಸ್ವ ಲೆಕ್ಕ ಹೆಚ್ಚುವರಿ/ಕೊರತೆ** | **-15133.60** | **-6235.20** | **-14699.14** |


## ಆಯವ್ಯಯ ವಿಹಂಗಮ ನೋಟ


₹ ಕೋಟಿಗಳಲ್ಲಿ

| | ಆಯವ್ಯಯ ಅಂದಾಜು 2021-22 | ಪರಿಷ್ಕೃತ ಅಂದಾಜು 2021-22 | ಆಯವ್ಯಯ ಅಂದಾಜು 2022-23 |
|---|---|---|---|
| **ಬಿ. ಬಂಡವಾಳ ಲೆಕ್ಕ** | | | |
| **1. ಜಮೆ:** | | | |
| ಕೇಂದ್ರ ಸರ್ಕಾರದಿಂದ ಸಾಲ | 2231.82 | 2231.82 | 3089.36 |
| ಬಹಿರಂಗ ಮಾರುಕಟ್ಟೆ ಸಾಲ | 67100.00 | 63100.00 | 67911.00 |
| ಎನ್‌ಎಸ್‌ಎಸ್‌ಎಫ್, ಎನ್‌ಸಿಡಿಸಿ ಮತ್ತು ಆರ್.ಐ.ಡಿ.ಎಫ್ ಗಳಿಂದ ಸಾಲ | 2000.00 | 2000.00 | 1000.10 |
| ವಿವಿಧ ಬಂಡವಾಳ ಜಮೆಗಳು | 40.00 | 40.00 | 18.00 |
| ಸಾಲಗಳು ಮತ್ತು ಮುಂಗಡಗಳ ವಸೂಲಿ | 90.84 | 90.84 | 71.40 |
| **ಒಟ್ಟು–ಬಿ (1)** | **71462.66** | **67462.66** | **72089.86** |
| **11. ಬಟವಾಡೆ:** | | | |
| ಬಂಡವಾಳ ವೆಚ್ಚ | 41358.12 | 39481.99 | 43572.65 |
| ಕೇಂದ್ರ ಸರ್ಕಾರದ ಸಾಲಗಳ ಮರುಸಂದಾಯ | 1504.89 | 1504.89 | 1546.00 |
| ಮಾರುಕಟ್ಟೆ ಸಾಲಗಳ ಮರುಪಾವತಿ | 10000.07 | 10000.07 | 10000.06 |
| ಎಲ್‌ಐಸಿ, ಜಿಐಸಿ, ಎನ್‌ಎಸ್‌ಎಸ್‌ಎಫ್, ಎನ್‌ಸಿಡಿಸಿ ಮತ್ತು ಆರ್.ಐ.ಡಿ.ಎಫ್ ಸಾಲಗಳ ಮರುಸಂದಾಯ | 3059.82 | 3059.82 | 2632.64 |
| ಸಾಲಗಳ ಮತ್ತು ಮುಂಗಡಗಳ ಬಟವಾಡೆ | 2879.25 | 2883.71 | 3381.88 |
| ಸಾದಿಲ್ವಾರು ನಿಧಿಗೆ ವರ್ಗಾವಣೆ | 0.00 | 420.00 | 0.00 |
| **ಒಟ್ಟು–ಬಿ (11)** | **58802.15** | **57350.47** | **61133.23** |
| **ಸಂಚಿತ ನಿಧಿ** | **246206.92** | **253164.95** | **265719.92** |
| **ಡಿ. ಮುಕ್ತಾಯ ಶಿಲ್ಕು** | **8515.28** | **9227.38** | **9881.94** |


ಜಮೆ-ರೂಪಾಯಿ ಎಷ್ಟು ಭಾಗ ಯಾವುದರಿಂದ (2022-23 ಆಯವ್ಯಯ ಅಂದಾಜು)
(ಪೈಸೆ)
ರಾಜ್ಯ ತೆರಿಗೆಯೇತರ ರಾಜಸ್ವದಿಂದ, 4
ಸಾರ್ವಜನಿಕ ಲೆಕ್ಕ (ನಿವ್ವಳ), 2
ಕೇಂದ್ರ ಸರ್ಕಾರದ ಸಹಾಯಾನುದಾನ, 6
ರಾಜ್ಯ ತೆರಿಗೆ ಆದಾಯದಿಂದ,(*) 50
ಕೇಂದ್ರ ತೆರಿಗೆ ಪಾಲಿನಿಂದ, 11
ಸಾಲದಿಂದ, 27
(* ಜಿ.ಎಸ್.ಟಿ.ನಷ್ಟ ಪರಿಹಾರ ಒಳಗೊಂಡಿದೆ)


ವೆಚ್ಚ 2022-23 ಆಯವ್ಯಯ ಅಂದಾಜು-ರೂಪಾಯಿ ಯಾವ ಭಾಗ ಎಷ್ಟೆಷ್ಟು (ಪೈಸೆಗಳಲ್ಲಿ)
ಇತರ ಸಾಮಾಜಿಕ ಸೇವೆಗಳು, 5
ನೀರು ಪೂರೈಕೆ ಮತ್ತು ನೈರ್ಮಲ್ಯ, 3
ಇತರ ಸಾಮನ್ಯ ಸೇವೆಗಳು, 18
ಆರೋಗ್ಯ, 5
ಸಮಾಜ ಕಲ್ಯಾಣ, 8
ಕೃಷಿ,ನೀರಾವರಿ ಮತ್ತು ಗ್ರಾಮೀಣ ಅಭಿವೃದ್ಧಿ, 18
ಶಿಕ್ಷಣ, 12
ಇತರ ಆರ್ಥಿಕ ಸೇವೆಗಳು, 14
ಸಾಲ ತೀರಿಕೆ, 17


ರಾಜ್ಯದ ಸ್ವಂತ ತೆರಿಗೆಗಳ ವಿವರಗಳು 2022-23 ಆಯವ್ಯಯ ಅಂದಾಜುಗಳು
(ರೂ.ಕೋಟಿಗಳಲ್ಲಿ)
ಇತರ , 2866, 2%
ವಾಣಿಜ್ಯ ತೆರಿಗೆಗಳು , 77010,(*) 59%
ಮೋಟಾರು ವಾಹನ ತೆರಿಗೆ, 8007, 6%
ನೋಂದಣಿ ಮತ್ತು ಮುದ್ರಾಂಕ, 15000, 11%
ರಾಜ್ಯ ಅಬಕಾರಿ , 29000, 22%
(* ಜಿ.ಎಸ್.ಟಿ.ನಷ್ಟ ಪರಿಹಾರ ಒಳಗೊಂಡಿದೆ)


ಒಟ್ಟಾರೆ ಹಂಚಿಕೆ(ಒಟ್ಟು ಅಭಿಯಾಚನೆ)2022–23(ರೂ.ಕೋಟಿಗಳಲ್ಲಿ)
(ಒಟ್ಟಾರೆ ಹಂಚಿಕೆಯ ಶೇಕಡವಾರು)
ಶಿಕ್ಷಣ, 31980, 12%
ಜಲಸಂಪನ್ಮೂಲ, 20601, 8%
ಗ್ರಾಮೀಣಾಭಿವೃದ್ಧಿ & ಪಂಚಾಯತಿ ರಾಜ್, 17325, 6%
ನಗರಾಭಿವೃದ್ಧಿ, 16076, 6%
ಕಂದಾಯ, 14388, 5%
ಆರೋಗ್ಯ & ಕುಟುಂಬ ಕಲ್ಯಾಣ, 13982, 5%
ಇಂಧನ, 12655, 5%
ಒಳಾಡಳಿತ ಮತ್ತು ಸಾರಿಗೆ, 11272, 4%
ಲೋಕೋಪಯೋಗಿ, 10447, 4%
ಸಮಾಜ ಕಲ್ಯಾಣ, 9389, 3%
ಕೃಷಿ ಮತ್ತು ತೋಟಗಾರಿಕೆ, 8457, 3%
ಮಹಿಳಾ ಮತ್ತು ಮಕ್ಕಳ ಕಲ್ಯಾಣ, 4713, 2%
ವಸತಿ, 3594, 1%
ಆಹಾರ ಮತ್ತು ನಾಗರೀಕ ಸರಬರಾಜು, 2988, 1%
ಇತರೆ, 93676, 35%